20) ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ: ಈ ಯೋಜನೆಯಡಿ ಕೃಷಿ ಮತ್ತು ಸಂಬಂಧಿಸಿದ ವಲಯಗಳಲ್ಲಿ ಹೆಚ್ಚಿನ ಸಾರ್ವಜನಿಕ ಹೂಡಿಕೆಗಾಗಿ ರಾಜ್ಯಗಳನ್ನು ಪ್ರೋತ್ಸಾಹಿಸಲಾಗುತ್ತದೆ. ಜಿಲ್ಲಾ ಕೃಷಿ ಯೋಜನೆಗಳಲ್ಲಿ ಸ್ಥಳೀಯ ಆದ್ಯತೆಗಳು / ಅವಶ್ಯಕತೆಗಳು/ ಬೆಳೆಗಳಿಗೆ ಹೆಚ್ಚಿನ ಪ್ರಾಮುಖ್ಯತೆಯನ್ನು ನೀಡಲು, ಹೊಸ ತಾಂತ್ರಿಕತೆಗಳನ್ನು ಅಳವಡಿಸಿ, ಮುಖ್ಯ ಬೆಳೆಗಳ ಉತ್ಪಾದಕತೆಯಲ್ಲಿ ಇರುವ ವ್ಯತ್ಯಯದ ಪ್ರಮಾಣವನ್ನು ಕಡಿತಗೊಳಿಸಲು, ಕೃಷಿ ಮತ್ತು ಸಂಬಂಧಿತ ವಲಯಗಳ ಎಲ್ಲಾ ಅವಶ್ಯಕತೆಗಳನ್ನು ತೆಗೆದುಕೊಂಡು ಉತ್ಪಾದನೆ/ ಉತ್ಪಾದಕತೆಯ ವಿವಿಧ ಘಟಕಗಳಲ್ಲಿ ಬದಲಾವಣೆ ತರಲು ಮತ್ತು ರೈತರಿಗೆ ಹೆಚ್ಚಿನ ಲಾಭಾಂಶ ದೊರಕಿಸಿಕೊಡಲು ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತದೆ. ಈ ಸಂಬಂಧ, ಕೃಷಿ ಮತ್ತು ಕೃಷಿ ಸಂಬಂಧಿತ ಇಲಾಖೆ/ ಸಂಸ್ಥೆಗಳಿಂದ ಕಾರ್ಯಕ್ರಮಗಳನ್ನು ಅನುಷ್ಠಾನ ಮಾಡಲಾಗುತ್ತದೆ.

21) ಕೃಷಿ ವಿಸ್ತರಣೆ ಉಪ ಅಭಿಯಾನ: ವಿಸ್ತರಣಾ ಸುಧಾರಣೆಗಳಿಗಾಗಿ ರಾಜ್ಯ ವಿಸ್ತರಣಾ ಕಾರ್ಯಕ್ರಮಗಳಿಗೆ ಬೆಂಬಲ ಯೋಜನೆಯು ವಿಸ್ತರಣಾ ಪದ್ಧತಿಯನ್ನು ರೈತರೇ ಮುನ್ನಡೆಸುವ ಹಾಗೂ ರೈತರಿಗೆ ಉತ್ತರದಾಯಿತ್ವವಾಗಬೇಕಾದ ಯೋಜನೆಯಾಗುವ ಗುರಿಯನ್ನು ಹೊಂದಿದೆ.

ಭಾಗವಹಿಸುವಿಕೆ ಆಧಾರದ ಮೇಲೆ ವಿಸ್ತರಣಾ ಸುಧಾರಣೆಗಳನ್ನು ಜಾರಿಗೆ ತರಲು ಮತ್ತು ರೈತರಿಗೆ ತಂತ್ರಜ್ಞಾನವನ್ನು ಹೊಸ ಸಾಂಸ್ಥಿಕ ವ್ಯವಸ್ಥೆ ಮೂಲಕ ಪ್ರಸರಿಸುವ ಉದ್ದೇಶದಿಂದ ಜಿಲ್ಲಾ ಮಟ್ಟದಲ್ಲಿ ಕೃಷಿ ತಂತ್ರಜ್ಞಾನ ನಿರ್ವಹಣಾ ಸಂಸ್ಥೆ(ATMA)ಯನ್ನು ಅಸ್ತಿತ್ವಕ್ಕೆ ತರಲಾಗಿದೆ. ಈ ಯೋಜನೆಯಡಿಯಲ್ಲಿ ಭಾರತ ಸರ್ಕಾರ ನಿಗದಿಪಡಿಸಿರುವ ಮಾರ್ಗಸೂಚಿಯಂತೆ ಅಧಿಕಾರ/ ರೈತರ ತರಬೇತಿ, ಪರಿಚಯ ಪ್ರವಾಸ, ಪ್ರಾತ್ಯಕ್ಷಿಕೆ, ರೈತರ ಗುಂಪು ರಚನೆ, ಕೃಷಿ ಪಾಠಶಾಲೆ, ಕೃಷಿ ಮೇಳ, ಕ್ಷೇತ್ರೋತ್ಸವ ಇತ್ಯಾದಿ ಕಾರ್ಯಕ್ರಮಗಳನ್ನು ಅನುಷ್ಠಾನ ಮಾಡಲಾಗುತ್ತದೆ.

22) **ಕೃಷಿ ಯಾಂತ್ರೀಕರಣ ಉಪ ಅಭಿಯಾನ:** ಈ ಯೋಜನೆಯ ಉದ್ದೇಶ ಕೃಷಿ ಯಂತ್ರೋಪಕರಣಗಳ ಬಳಕೆಯಿಂದ ಸಾಗುವಳಿ ವಿಸ್ತೀರ್ಣದಲ್ಲಿ ಯಾಂತ್ರೀಕೃತ ಶಕ್ತಿಯನ್ನು ಪ್ರತಿ ಹೆಕ್ಟೇರಿಗೆ 2.0ಕಿಲೋ ವ್ಯಾಟ್ ಗಳಷ್ಟು ಹೆಚ್ಚಿಸುವುದಾಗಿದೆ. ಇದರಡಿ ಕೃಷಿ ಯಂತ್ರೋಪಕರಣಗಳನ್ನು ಪಡೆಯಲು ಹಣಕಾಸಿನ ನೆರವು, ಬಾಡಿಗೆ ಆಧಾರಿತ ಸೇವಾ ಕೇಂದ್ರಗಳಿಗೆ, ಗ್ರಾಮ ಮಟ್ಟದ ಯಂತ್ರೋಪಕರಣಗಳ ಬ್ಯಾಂಕ್/ ಹೈಟೆಕ್ ಉಪಕರಣಗಳ ಹಬ್ ಗಾಗಿ ಹಣಕಾಸಿನ ನೆರವು ನೀಡಲಾಗುವುದು.

23) **ಬಿತ್ತನೆ ಬೀಜ ಉಪ ಅಭಿಯಾನ:** ಈ ಯೋಜನೆಯಡಿ ಸರ್ಕಾರಿ ಸ್ವಾಮ್ಯದ ಸಂಸ್ಥೆಗಳ ಮೂಲಕ ರಾಜ್ಯ ಬೀಜೋತ್ಪಾದನಾ ಕೇಂದ್ರಗಳ ಬಲವರ್ಧನೆ, ಬೀಜ ಪರೀಕ್ಷಾ ಪ್ರಯೋಗಾಲಯಗಳ ಬಲವರ್ಧನೆ, ಬೀಜ ಪ್ರಮಾಣನಾ ಸಂಸ್ಥೆಗಳಿಗೆ ಬೆಂಬಲ, ಬೀಜೋಪಚಾರ ಇತ್ಯಾದಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುವುದು. ಈ ಯೋಜನೆಯನ್ನು ಸರ್ಕಾರಿ ಸ್ವಾಮ್ಯ ಸಂಸ್ಥೆಗಳು/ ರಾಜ್ಯ ಕೃಷಿ/ತೋಟಗಾರಿಕೆ ವಿಶ್ವವಿದ್ಯಾನಿಲಯಗಳಿಂದ ಅನುಷ್ಠಾನಗೊಳಿಸಲಾಗುವುದು.

24) **ಮಳೆಯಾಶ್ರಿತ ಪ್ರದೇಶ ಅಭಿವೃದ್ಧಿ:** ಈ ಕಾರ್ಯಕ್ರಮದಡಿಯಲ್ಲಿ ಮಳೆಯಾಶ್ರಿತ ಪ್ರದೇಶದಲ್ಲಿ ರೈತರ ಕ್ಷೇತ್ರದಲ್ಲಿ ಸಮಗ್ರ ಕೃಷಿ ಪದ್ಧತಿಯನ್ನ ಪ್ರೋತ್ಸಾಹಿಸಲು ಬಹು ಬೆಳೆ ಪದ್ಧತಿ, ಅಂತರ ಬೆಳೆ, ಮಿಶ್ರಬೆಳೆ (ಏಕದಳ ಧಾನ್ಯ, ದ್ವಿದಳಧಾನ್ಯ ಮತ್ತು ಎಣ್ಣೆಕಾಳು ಆಧಾರಿತ) ಪದ್ಧತಿಗಳು, ತೋಟಗಾರಿಕೆ ಆಧಾರಿತ, ಪಶುಸಂಗೋಪನೆ ಆಧಾರಿತ, ಕೃಷಿ ಅರಣ್ಯ ಆಧಾರಿತ ಬೆಳೆ ಪದ್ಧತಿಗಳ ಅನುಷ್ಠಾನ, ಮಣ್ಣು ಮತ್ತು ನೀರು ಸಂರಕ್ಷಣಾ ಕ್ರಮಗಳು, ಮೌಲ್ಯವರ್ಧನೆ ಮತ್ತು ಸಂಪನ್ಮೂಲಗಳ ಸಂರಕ್ಷಣೆ ಮುಂತಾದ ಘಟಕಗಳನ್ನು ಅನುಷ್ಠಾನ ಮಾಡುವುದರ ಮೂಲಕ ರೈತರ ಆದಾಯವನ್ನು ಹೆಚ್ಚಿಸುವುದರ ಜೊತೆಗೆ ಬರ, ನೆರೆ ಮತ್ತು ಇತರೆ ಹವಾಮಾನ್ಯ ವೈಪರೀತ್ಯಗಳನ್ನು ಎದುರಿಸಲು ಸಜ್ಜುಗೊಳಿಸಲಾಗುತ್ತದೆ. ಇದರಡಿ ಸಮಗ್ರ ಕೃಷಿ ಪದ್ಧತಿ ಅಳವಡಿಕೆಗೆ ಅವಶ್ಯವಿರುವ ಪರಿಕರಗಳು ಮತ್ತು ಇತ್ಯಾದಿಗಳಿಗೆ ಶೇ.50ರ ಸಹಾಯಧನವನ್ನು ನೀಡಲಾಗುವುದು.

ಅನುಬಂಧ-1(ಅ)

(ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:3605)

ರೈತರಿಗಾಗಿ ಜಲಾನಯನ ಅಭಿವೃದ್ಧಿ ಇಲಾಖೆಯಡಿ ರೂಪಿಸಲಾಗಿರುವ ಕೇಂದ್ರ ಮತ್ತು ರಾಜ್ಯ ವಲಯ ಯೋಜನೆಗಳು ಕೆಳಕಂಡಂತಿದೆ:

I. ರಾಜ್ಯ ವಲಯ ಯೋಜನೆಗಳು:

1) **ಜಲಾನಯನ ಅಭಿವೃದ್ಧಿ ಮೂಲಕ ಬರಗಾಲ ತಡೆಯುವಿಕೆ (WDPD):** 2019-20ನೇ ಸಾಲಿನಿಂದ ರಾಜ್ಯದ 100 ಬರಪೀಡಿತ ಮತ್ತು ಅಂತರ್ಜಲ ಶೋಷಿತ ತಾಲ್ಲೂಕುಗಳಲ್ಲಿ ಭೂಸಂಪನ್ಮೂಲ ಸಮೀಕ್ಷೆ ಮಾಹಿತಿ ಆಧರಿಸಿ ಹಾಗೂ MGNREGA ಮತ್ತು PMKSY ಯೋಜನೆಗಳೊಂದಿಗೆ ಒಗ್ಗೂಡಿಸಿ ಬರನಿರೋಧಕ ಜಲಾನಯನ ಚಟುವಟಿಕೆಗಳ ಅನುಷ್ಠಾನದ ಮೂಲಕ ಮಳೆಯಾಶ್ರಿತ ಜಲಾನಯನ ಪ್ರದೇಶದ ಉತ್ಪಾದಕತೆಯನ್ನು ಹೆಚ್ಚಿಸುವುದು ಹಾಗೂ ಆಸ್ತಿರಹಿತರಿಗೆ ಜೀವನೋಪಾಯ ಚಟುವಟಿಕೆಗಳನ್ನು ಅನುಷ್ಠಾನ ಮಾಡಲು ನೆರವು ನೀಡಲು ಸಹಾಯವಾಗುವುದು.

2) **ಸುಜಲ-III ನಿರ್ಗಮನ ಕಾರ್ಯಕ್ರಮ (Exit Strategy):**

ಕರ್ನಾಟಕ ಜಲಾನಯನ ಅಭಿವೃದ್ಧಿ ಯೋಜನೆ-II (ಸುಜಲ-III) (ಬಾಹ್ಯ ನೆರವು) ಯೋಜನೆಯು ಮುಕ್ತಾಯಗೊಂಡಿದ್ದು, ಯೋಜನಾ ನಂತರದ ಅವಧಿಯಲ್ಲಿ 2020-21ನೇ ಸಾಲಿನಿಂದ 2024-25ನೇ ಸಾಲಿನವರೆಗೆ (ಡಿಸೆಂಬರ್ 2024ರ ವರೆಗೆ) ಸುಜಲ-III ನಿರ್ಗಮನ (Exit Strategy) ಕಾರ್ಯಕ್ರಮವನ್ನು ಅನುಷ್ಠಾನ ಮಾಡಲು ರಾಜ್ಯ ಸರ್ಕಾರವು ಅನುಮೋದನೆ ನೀಡಲಾಗಿರುತ್ತದೆ.

ಸುಜಲ-III ಯೋಜನೆಯಡಿಯ ಭೂ-ಸಂಪನ್ಮೂಲ ದತ್ತಾಂಶ, ಡಿಜಿಟಲ್ ಗ್ರಂಥಾಲಯ, ಭೂ-ಸಂಪನ್ಮೂಲ ಪೋರ್ಟಲ್ ಹಾಗೂ ಮೊಬೈಲ್ ಅಪ್ಲಿಕೇಷನ್ ನವೀಕರಣ ಹಾಗೂ ನಿರ್ವಹಣೆ; ಪಾಲುದಾರ ಸಂಸ್ಥೆಗಳಿಗೆ ಒದಗಿಸಿರುವ ವೈಜ್ಞಾನಿಕ ಉಪಕರಣ, ಪ್ರಯೋಗಾಲಯ ಇತ್ಯಾದಿ ಸೌಲಭ್ಯಗಳ ನಿರ್ವಹಣೆ; ಸುಜಲ-III ಯೋಜನೆ ವ್ಯಾಪ್ತಿಯ ಗ್ರಾಮಗಳ ರೈತರಿಗೆ ಭೂ-ಸಂಪನ್ಮೂಲ ಮಾಹಿತಿ, ಡಿಜಿಟಲ್ ಗ್ರಂಥಾಲಯ ಮತ್ತು ಭೂ-ಸಂಪನ್ಮೂಲ ಪೋರ್ಟಲ್ ಬಳಸುವ ಕುರಿತು ಅರಿವು ಮೂಡಿಸಲು ತರಬೇತಿಗಳನ್ನು ಆಯೋಜಿಸುವುದು ಹಾಗೂ ಭೂ-ಸಂಪನ್ಮೂಲ ಕಾರ್ಡ್ ವಿತರಿಸುವುದು.

II. **ಕೇಂದ್ರ ವಲಯ ಯೋಜನೆಗಳು:**

1) **ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ (PMKSY):** ಈ ಯೋಜನೆಯು ಕೇಂದ್ರ ಪುರಸ್ಕೃತ ಯೋಜನೆಯಾಗಿದ್ದು, ಕೇಂದ್ರ ಮತ್ತು ರಾಜ್ಯ ಸರ್ಕಾರಗಳು 60:40ರ ಅನುಪಾತದಲ್ಲಿ ಅನುದಾನ ಒದಗಿಸಲಾಗುತ್ತಿದೆ.

ಅ) ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ–ಜಲಾನಯನ ಅಭಿವೃದ್ಧಿ (PMKSY-WD): ಈ ಯೋಜನೆ ಮೂಲಕ ಮಣ್ಣು ಮತ್ತು ನೀರು ಸಂರಕ್ಷಣೆಗಾಗಿ ಕಂದಕ ಬದುಗಳು, ಬೋಲ್ಡರ್/ರಬಲ್/ಸಸ್ಯತಡೆಗಳು, ಕೃಷಿ ಹೊಂಡಗಳು, ಚಿಕ್ಕ ತಡೆ ಅಣೆಗಳು, ನಾಲಾಬದುಗಳು, ಖುಷ್ಕಿ ತೋಟಗಾರಿಕೆ, ಕೃಷಿ ಅರಣ್ಯ ಮತ್ತು ಮೇವು ಅಭಿವೃದ್ಧಿ ಮುಂತಾದ ಚಟುವಟಿಕೆಗಳನ್ನು ತಾಂತ್ರಿಕತೆ ಆಧರಿಸಿ ಅನುಷ್ಠಾನ ಮಾಡಲಾಗುತ್ತದೆ. ಈ ಚಟುವಟಿಕೆಗಳಿಂದ ಮಣ್ಣು ಮತ್ತು ನೀರಿನ ಸಂರಕ್ಷಣೆಯಾಗಿ ಬೆಳೆಗಳ ಉತ್ಪಾದಕತೆಯು ಹೆಚ್ಚಾಗುತ್ತದೆ.

ಯೋಜನಾ ವ್ಯಾಪ್ತಿಯಲ್ಲಿ ಬರುವ ಗ್ರಾಮಗಳಲ್ಲಿ ಭೂ ರಹಿತ ಮತ್ತು ಆರ್ಥಿಕವಾಗಿ ಹಿಂದುಳಿದ ಕುಟುಂಬಗಳ ಮಹಿಳೆಯರಿಗಾಗಿ ಸ್ವಸಹಾಯ ಗುಂಪುಗಳನ್ನು ರಚಿಸಲಾಗುತ್ತದೆ. ಸ್ವಸಹಾಯ ಗುಂಪಿನ ಸದಸ್ಯರಿಗೆ ಅಗತ್ಯ ತರಬೇತಿಗಳನ್ನು ನೀಡಿ ಆದಾಯ ಉತ್ಪನ್ನ ಚಟುವಟಿಕೆಗಳನ್ನು ಕೈಗೊಳ್ಳಲು ಸುತ್ತು ನಿಧಿಯನ್ನು ನೀಡಿ ಪ್ರೋತ್ಸಾಹ ನೀಡಲಾಗುತ್ತಿದೆ.

ಆ) ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ-ಇತರೆ ಉಪಚಾರಗಳು(PMKSY-OI): ಈ ಯೋಜನೆಯಡಿ ಸಮುದಾಯ ನೀರು ಸಂಗ್ರಹಣಾ ವಿನ್ಯಾಸಗಳಾದ ತಡೆಅಣೆ, ನಾಲಾಬದು, ಕಿಂಡಿ ಅಣೆ, ಜಿನುಗುಕೆರೆ ಮತ್ತಿತರ ನೀರು ಸಂಗ್ರಹಣಾ ವಿನ್ಯಾಸಗಳನ್ನು ರಚಿಸಿ, ಸದರಿ ವಿನ್ಯಾಸಗಳನ್ನು ಸೂಕ್ಷ್ಮ ನೀರಾವರಿಗೆ ಅಳವಡಿಸುವುದರ ಮೂಲಕ ಬೆಳೆಗಳ ಸಂದಿಗ್ಧ ಪರಿಸ್ಥಿತಿಯಲ್ಲಿ ರಕ್ಷಣಾತ್ಮಕ ನೀರಾವರಿಗೆ ನೀರನ್ನು ಬಳಸಿ ಕೃಷಿ ಉತ್ಪನ್ನಗಳನ್ನು ಹೆಚ್ಚಿಸಲು ನೆರವಾಗುತ್ತದೆ.

ಕೃಷಿ ಇಲಾಖೆಯಿಂದ ಬಿಡುಗಡೆಯಾದ ಅನುದಾನದಿಂದ ಅನುಷ್ಠಾನ ಮಾಡಿದ ಯೋಜನೆಗಳು:

2) **ರಾಷ್ಟ್ರೀಯ ಸುಸ್ಥಿರ ಕೃಷಿ ಅಭಿಯಾನ-ಮಳೆಯಾಶ್ರಿತ ಪ್ರದೇಶಾಭಿವೃದ್ಧಿ ಕಾರ್ಯಕ್ರಮ (NMSA-RAD):** ಈ ಕಾರ್ಯಕ್ರಮವನ್ನು ಮಳೆಯಾಶ್ರಿತ ಪ್ರದೇಶಗಳಲ್ಲಿ ಕನಿಷ್ಠ 100 ಹೆಕ್ಟೇರ್ ಪ್ರದೇಶದಲ್ಲಿ ಆಯ್ದ ಗುಚ್ಛ ಗ್ರಾಮಗಳಲ್ಲಿ ಅನುಷ್ಠಾನಗೊಳಿಸಲಾಗಿದೆ. ಈ ಕಾರ್ಯಕ್ರಮದಡಿ ಮಳೆಯಾಶ್ರಿತ ಪ್ರದೇಶಗಳಲ್ಲಿ ಸಮಗ್ರ ಕೃಷಿ ಪದ್ಧತಿಗಳನ್ನು ಅಳವಡಿಸಿಕೊಳ್ಳಲು ಪ್ರೋತ್ಸಾಹ ನೀಡುತ್ತದೆ. ಕೃಷಿ, ತೋಟಗಾರಿಕೆ, ಪಶು ಸಂಗೋಪನೆ, ಕೃಷಿ ಅರಣ್ಯ ಆಧಾರಿತ ಮಿಶ್ರ ಬೆಳೆ ಪದ್ಧತಿಗಳನ್ನು ಒಬ್ಬ ಫಲಾನುಭವಿಗೆ ಗರಿಷ್ಠ 2 ಹೆಕ್ಟೇರ್ ಪ್ರದೇಶ ಮೀರದಂತೆ ಅನುಷ್ಠಾನಗೊಳಿಸಲಾಗಿದೆ. ಇದರೊಂದಿಗೆ ಮೌಲ್ಯವರ್ಧಿತ ಚಟುವಟಿಕೆಗಳಾದ ಜೇನು ಸಾಕಾಣಿಕೆ, ಸೈಲೇಜ್ ಗುಂಡಿ, ಸಮುದಾಯ ಕೆರೆ, ನೀರು ಎತ್ತುವ ಯಂತ್ರಗಳು, ಎರೆಹುಳು ಸಾಕಾಣಿಕೆ, ನೀರು ಸಂರಕ್ಷಣಾ ಕಾಮಗಾರಿಗಳಾದ ಬದು ನಿರ್ಮಾಣ, ಕೃಷಿ ಹೊಂಡ ಹಾಗೂ ಇತರೆ ಚಟುವಟಿಕೆಗಳನ್ನು ಕೈಗೊಳ್ಳಲಾಗಿದೆ. ಈ ಎಲ್ಲಾ ಚಟುವಟಿಕೆಗಳಿಂದ ರೈತನ ಆದಾಯದಲ್ಲಿ ಸುಸ್ಥಿರತೆ ತರಲು ಸಾಧ್ಯವಾಗುತ್ತದೆ.

3) **ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ:**

ಅ)ಸಮಸ್ಯಾತ್ಮಕ ಮಣ್ಣುಗಳ ಸುಧಾರಣೆ(RPS): ನಿರ್ದಿಷ್ಟ ಅಗತ್ಯತೆ ಮತ್ತು ಸ್ಥಳಕ್ಕನುಗುಣವಾಗಿ ಕೃಷಿ ಅಭಿವೃದ್ಧಿ, ವೈಜ್ಞಾನಿಕ ಇಂಜಿನಿಯರಿಂಗ್ ಕ್ರಮಗಳು, ವೈಜ್ಞಾನಿಕವಾಗಿ ರಸಗೊಬ್ಬರಗಳ ಬಳಕೆ, ಉಪ್ಪು ಸಹಿಷ್ಣ ಬೆಳೆ/ಕೃಷಿ ಅರಣ್ಯೀಕರಣ ಪದ್ಧತಿಗಳನ್ನು ಅಳವಡಿಸಿ ಸಮಸ್ಯಾತ್ಮಕ ಮಣ್ಣುಗಳ ಸುಧಾರಣೆ/ಅಭಿವೃದ್ಧಿ ಮೂಲಕ ಬೆಳೆ ಇಳುವರಿ ಹೆಚ್ಚಿಸುವುದು.

ಆ) **ಸಾರ್ವಜನಿಕ ಖಾಸಗಿ ಸಹಭಾಗಿತ್ವದಲ್ಲಿ ಸಮಗ್ರ ಕೃಷಿ ಅಭಿವೃದ್ಧಿ (PPP-IAD):** ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿಯಲ್ಲಿ ಸಾರ್ವಜನಿಕ ಖಾಸಗಿ ಸಹಭಾಗಿತ್ವದಲ್ಲಿ ಕೃಷಿಯ ಉತ್ಪಾದನೆಯಿಂದ ಹಿಡಿದು ಬಳಕೆಯ ಹಂತದವರೆಗೂ ಸಂಪೂರ್ಣ ಮೌಲ್ಯವೃದ್ಧಿ ಸರಪಳಿಯನ್ನು ಸೂಕ್ತ ಮಧ್ಯಸ್ಥಿಕೆ /ತಾಂತ್ರಿಕತೆಗಳನ್ನು ಅಳವಡಿಸಿಕೊಳ್ಳುವುದರ ಮೂಲಕ ಕೃಷಿಯಲ್ಲಿ ಉತ್ಪಾದಕತೆಯನ್ನು ಹೆಚ್ಚಿಸುವುದು ಹಾಗೂ ಕೊಯ್ಲೋತ್ತರ ನಷ್ಟವನ್ನು ಕಡಿಮೆಗೊಳಿಸುವುದು ಈ ಯೋಜನೆಯ ಉದ್ದೇಶವಾಗಿರುತ್ತದೆ. ಈ ಯೋಜನೆಯಿಂದ ರೈತರಿಗೆ ನೇರ ಮಾರುಕಟ್ಟೆ ಬೆಂಬಲವನ್ನು ನೀಡುವುದರ ಮೂಲಕ ಮಧ್ಯವರ್ತಿಗಳ ಹಾವಳಿಯನ್ನು ತಪ್ಪಿಸುವುದಲ್ಲದೆ, ರೈತರು ಉತ್ಪಾದಿಸುವ ಬೆಳೆಗೆ ಸೂಕ್ತ ಬೆಲೆಯನ್ನು ದೊರಕಿಸಿಕೊಡಲು ಸಹಾಯವಾಗುವುದು.

ಇ) ರೈತ ಉತ್ಪಾದಕರ ಸಂಸ್ಥೆ (FPO): ರೈತ ಉತ್ಪಾದಕರ ಸಂಸ್ಥೆಗಳನ್ನು ಸ್ಥಾಪಿಸುವ ಮೂಲಕ ಸಣ್ಣ ಹಾಗೂ ಅತಿ ಸಣ್ಣ ರೈತರು ತಮ್ಮ ಉತ್ಪನ್ನಗಳನ್ನು ಮಾರುಕಟ್ಟೆ ಮಾಡುವಲ್ಲಿ ಒಬ್ಬಂಟಿಯಾಗಿ ಎದುರಿಸುವ ಹಲವಾರು ಸವಾಲುಗಳನ್ನು ಪರಿಹರಿಸಬಹುದು. ಉತ್ಪಾದಕರ ಸಂಸ್ಥೆಯಾಗಿ ರೈತ ಉತ್ಪಾದಕರ ಸಂಘವು ಸ್ಥಳೀಯ ರೈತ ಸಮುದಾಯದ ಸಂಧಾನ ಸಾಮರ್ಥ್ಯವನ್ನು ಹಾಗೂ ವ್ಯವಹಾರಿಕ ಪಾಲುದಾರಿಕೆಯನ್ನು ಅಭಿವೃದ್ಧಿಗೊಳಿಸುವ ಮೂಲಕ ರೈತರ ಆರ್ಥಿಕ ಹಾಗೂ ಔದ್ಯಮಿಕ ಸಂಭಾವ್ಯ ಶಕ್ತಿಯನ್ನು ಸಡಿಲಿಸುವಂತೆ ಮಾಡಬಹುದಾಗಿದೆ. ಈ ಸಂಸ್ಥೆಗಳಿಂದ ಉತ್ಪಾದಕರ ಬೇಡಿಕೆಗೆ ಅನುಗುಣವಾಗಿ ಹಾಗೂ ಮೌಲ್ಯ ಸರಪಳಿಯ ಪದ್ಧತಿಯನ್ನು ಅಳವಡಿಸುವ ಮೂಲಕ ಉತ್ಪಾದಕರ ಆರ್ಥಿಕ ಹಾಗೂ ಸಾಮಾಜಿಕ ಲಾಭಗಳನ್ನು ಹೆಚ್ಚಿಸುವ ಉದ್ದೇಶವನ್ನು ಹೊಂದಿದೆ.

ಈ) ತಡೆಅಣೆ ನಿರ್ಮಾಣ ಕಾರ್ಯಕ್ರಮ: ಈ ಕಾರ್ಯಕ್ರಮದಡಿ ಅನುಷ್ಠಾನ ಮಾಡಲಾಗುವ ತಡೆಅಣೆಗಳು ಜಲಾನಯನ ತತ್ವದ ಆಧಾರದ ಮೇಲೆ ವೈಜ್ಞಾನಿಕವಾಗಿ ಸೂಕ್ತವಾದ ಸ್ಥಳಗಳಲ್ಲಿ ನಿರ್ಮಾಣ ಮಾಡುವ ಸಮುದಾಯ/ವ್ಯಕ್ತಿಗತ ರಚನೆಗಳಾಗಿದ್ದು, ಜಿಲ್ಲಾ ನೀರಾವರಿ ಯೋಜನೆಯ ಭಾಗವಾಗಿರುತ್ತದೆ.

ವಿಧಾನ ಸಭೆಯ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 3605 ರ ಅನುಬಂಧ-2(ಅ)

ಕೃಷಿ ಇಲಾಖೆಯ ವತಿಯಿಂದ ಕೈಗೊಳ್ಳುತ್ತಿರುವ ಯೋಜನೆಗಳಡಿ ಫಲಾನುಭವಿಗಳ ಆಯ್ಕೆಗೆ ಅನುಸರಿಸಲಾಗುತ್ತಿರುವ ಮಾನದಂಡಗಳ ವಿವರಗಳು

ಕ್ರ.ಸಂ	ಫಲಾನುಭವಿ ಆಧಾರಿತ ಯೋಜನೆ/ ಕಾರ್ಯಕ್ರಮ	ಅನುಷ್ಠಾನಗೊಳಿಸಲು ಆಯ್ಕೆ ವಿಧಾನ / ಮಾನದಂಡ
1.	ಬಿತ್ತನೆ ಬೀಜಗಳ ಪೂರೈಕೆ	ಕೃಷಿ ಇಲಾಖೆಯ ಬೀಜಗಳ ಪೂರೈಕೆ ಮತ್ತು ಇತರೆ ಹೂಡುವಳಿ ಯೋಜನೆಯಡಿ ರಾಜ್ಯದ ಎಲ್ಲಾ ವರ್ಗದ ರೈತರಿಗೆ (ಸಾಮಾನ್ಯ ರೈತರಿಗೆ ಶೇ 50ರ ವರೆಗೆ ಹಾಗು ಪರಿಶಿಷ್ಟ ವರ್ಗ ಮತ್ತು ಪರಿಶಿಷ್ಟ ಪಂಗಡದವರಿಗೆ ಶೇ.75 ರ ವರೆಗೆ) ಒಟ್ಟಾರೆ ಗರಿಷ್ಟ 2.00 ಹೆಕ್ಟೇರ್ ಅಥವಾ ಅವರ ವಾಸ್ತವಿಕ ಹಿಡುವಳಿ (Actual holding) ಯಾವುದು ಕಡಿಮೆಯೋ ಆ ವಿಸ್ತೀರ್ಣಕ್ಕೆ ಮಾತ್ರ ರಿಯಾಯಿತಿಯಲ್ಲಿ ಬಿತ್ತನೆ ಬೀಜ ವಿತರಣೆ ಮಾಡಲಾಗುತ್ತಿದೆ. ಬಿತ್ತನೆ ಬೀಜ ವಿತರಣೆಯಲ್ಲಿ ರೈತರ ಪಹಣಿಯಲ್ಲಿನ ವಿವರಗಳನ್ನು ಗಣನೆಗೆ ತೆಗೆದುಕೊಳ್ಳಲಾಗುತ್ತದೆ. ಪರಿಶಿಷ್ಟ ವರ್ಗಹಾಗೂ ಪರಿಶಿಷ್ಟ ಪಂಗಡಕ್ಕೆ ಸೇರಿದ ರೈತರು ಜಾತಿ ಪ್ರಮಾಣ ಪತ್ರವನ್ನು ಸಲ್ಲಿಸಬೇಕಾಗುತ್ತದೆ. ರೈತರು Farmer Registration & Unified Beneficiary Information System - FRUITS ಪೋರ್ಟಲ್ ನಲ್ಲಿ ನೋಂದಣಿಯಾಗಿ Farmers Identification number(FID) ಪಡೆದಿರಬೇಕು.
2.	ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಬಿಮಾ ಯೋಜನೆ	ಈ ಯೋಜನೆಯಡಿ ಮುಖ್ಯ ಬೆಳೆಗಳನ್ನು ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಹಾಗೂ ಇತರೆ ಬೆಳೆಗಳನ್ನು ಹೋಬಳಿ ಮಟ್ಟದಲ್ಲಿ ಪ್ರಥಮವಾಗಿ ಅಧಿಸೂಚಿಸಲಾಗುತ್ತದೆ. ಅಂತಿಮ ದಿನಾಂಕದೊಳಗೆ ರೈತರಿಂದ ಪ್ರೀಮಿಯಂ ಪಡೆದು ಬ್ಯಾಂಕ್ / ಸಹಕಾರ ಸಂಸ್ಥೆ / ಸಾಮಾನ್ಯ ಸೇವಾ ಕೇಂದ್ರಗಳಲ್ಲಿ ಬೆಳೆ ವಿಮೆ ನೋಂದಣಿ ಕಾರ್ಯ ಕೈಗೊಳ್ಳಲಾಗುತ್ತದೆ ದಾಖಲೆಗಳನ್ನು ಪರಿಶೀಲಿಸಿ ಅರ್ಹ ರೈತರ ಪ್ರಸ್ತಾವನೆಗಳನ್ನು ಸಂಬಂಧಿಸಿದ ವಿಮಾ ಸಂಸ್ಥೆಗಳಿಗೆ ಅಂಗೀಕರಿಸಲು ರವಾನಿಸಲಾಗುತ್ತದೆ. ಈ ಯೋಜನೆಯು ಸಾಲ ಪಡೆದಂತಹ ರೈತರಿಗೆ ಕಡ್ಡಾಯವಾಗಿದ್ದು, ಸಾಲ ಪಡೆಯದ ರೈತರಿಗೆ ಐಚ್ಛಿಕವಾಗಿರುತ್ತದೆ. ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಬಿಮಾ ಯೋಜನೆಯು ಕ್ಷೇತ್ರಾಧಾರಿತ ಹಾಗೂ ಇಳುವರಿ ಆಧಾರಿತ ಯೋಜನೆಯಾಗಿದ್ದು, ಮಾರ್ಗಸೂಚಿಯನುಸಾರ ಹೋಬಳಿ / ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಆರ್ಥಿಕ ಮತ್ತು ಸಾಂಖ್ಯಿಕ ಇಲಾಖೆಯವರು ನೀಡುವ ಬೆಳೆ ಕಟಾವು ಪ್ರಯೋಗಗಳಿಂದ ಬಂದತಹ ವಾಸ್ತವಿಕ ಇಳುವರಿ ಮಾಹಿತಿಯು ನಿಗದಿಪಡಿಸಲಾದ ಪ್ರಾರಂಭಿಕ ಇಳುವರಿಗಿಂತ ಕಡಿಮೆ ಇದ್ದರೆ, ಇಳುವರಿಯ ಕೊರತೆಗನುಗುಣವಾಗಿ ಹೋಬಳಿ/ ಗ್ರಾಮ ಪಂಚಾಯಿತಿಯಲ್ಲಿ ಬೆಳೆ ವಿಮೆ ಮಾಡಿಸಿದ ಎಲ್ಲಾ ರೈತರು ಬೆಳೆ ವಿಮಾ ನಷ್ಟ ಪರಿಹಾರ ಪಡೆಯಲು ಅರ್ಹರಾಗುತ್ತಾರೆ. ಅರ್ಹ ರೈತರಿಗೆ ವಿಮೆ ಪರಿಹಾರ ಮೊತ್ತವನ್ನು ನೇರವಾಗಿ ಅವರ ಬ್ಯಾಂಕ್ ಖಾತೆಗಳಿಗೆ ವಿಮಾ ಸಂಸ್ಥೆಯವರು ವರ್ಗಾಯಿಸುತ್ತಾರೆ.

3.	ಪ್ರಧಾನ ಮಂತ್ರಿ ಕಿಸಾನ್ ಸಮ್ಮಾನ್ ನಿಧಿ ಯೋಜನೆ (PMKISAN)	ಸಾಗುವಳಿ ಭೂಮಿ ಹೊಂದಿರುವ ಎಲ್ಲಾ ಅರ್ಹ ರೈತರಿಗೆ ವಾರ್ಷಿಕ ರೂ.6000/-ಗಳ ಆರ್ಥಿಕ ಸಹಾಯವನ್ನು ನೀಡಲಾಗುತ್ತಿದೆ. ಸದರಿ ಸಹಾಯವನ್ನು ರೂ.2000/-ಗಳಂತೆ ಮೂರು ಕಂತುಗಳಲ್ಲಿ ನಾಲ್ಕು ತಿಂಗಳಿಗೊಮ್ಮೆ ನೀಡಲಾಗುವುದು. ಇದರ ಜೊತೆಗೆ ಕರ್ನಾಟಕ ರಾಜ್ಯ ಸರ್ಕಾರದಿಂದ ರೂ.4000/-ಗಳನ್ನು ಎರಡು ಕಂತುಗಳಲ್ಲಿ ನೀಡಲಾಗುವುದು. ಭಾರತ ಸರ್ಕಾರದ ಮಾರ್ಗಸೂಚಿಯನ್ವಯ ಘೋಷಣೆಯ ಆಧಾರದಲ್ಲಿ ಕೆಳಕಂಡ ಮಾನದಂಡಗಳನ್ನು ಹೊಂದಿರುವ ರೈತ ಕುಟುಂಬವು ಯೋಜನೆಯ ಫಲಾನುಭವಿಯಾಗಲು ಅರ್ಹರಿರುವುದಿಲ್ಲ i. ಭೂಮಿ ಹೊಂದಿರುವ ಸಂಘ ಅಥವಾ ಸಂಸ್ಥೆಗಳು. ii. ಕೆಳಕಾಣಿಸಿದ ವರ್ಗಗಳಲ್ಲಿ ಕುಟುಂಬ ಸದಸ್ಯರು ಇದ್ದಲ್ಲಿ. a) ಮಾಜಿ ಮತ್ತು ಹಾಲಿ ಸಾಂವಿಧಾನಿಕ ಹುದ್ದೆಗಳು b) ಮಾಜಿ ಮತ್ತು ಹಾಲಿ ಸಚಿವರು/ರಾಜ್ಯ ಸಚಿವರು / ರಾಜ್ಯ ವಿಧಾನ ಸಭೆ / ವಿಧಾನ ಪರಿಷತ್ತಿನ ಸದಸ್ಯರು / ನಗರ ಸಭೆ ಅಧ್ಯಕ್ಷರು/ ಪುರ ಸಭೆ ಅಧ್ಯಕ್ಷರು /ಜಿಲ್ಲಾ ಪಂಚಾಯಿತಿ ಅಧ್ಯಕ್ಷರು c) ನಿವೃತ್ತ / ಹಾಲಿ ಸೇವೆಯಲ್ಲಿರುವಕೇಂದ್ರ / ರಾಜ್ಯ ಸರ್ಕಾರಗಳ /ಸಚಿವಾಲಯ ಕಛೇರಿ/ಇಲಾಖೆ, ಕ್ಷೇತ್ರ ಕಛೇರಿಗಳು/ ಕೇಂದ್ರ / ರಾಜ್ಯ ಸರ್ಕಾರಿ ಸ್ವಾಮ್ಯದ ಸಂಸ್ಥೆಗಳು, ಅಂಗ ಸಂಸ್ಥೆಗಳು / ಸ್ವಾಯತ್ತ ಸಂಸ್ಥೆಗಳು ಅಧಿಕಾರಿಗಳು ಹಾಗೂ ನೌಕರರು/ ಸ್ಥಳೀಯ ಸಂಸ್ಥೆಗಳ ಖಾಯಂ ನೌಕರರು (ಗ್ರೂಪ್-ಡಿ / 4ನೇ ವರ್ಗ / Multi Testing Staff ಹೊರತುಪಡಿಸಿ) d) ರೂ.10,000/- ಅಥವಾ ಹೆಚ್ಚಿನ ಮೊತ್ತ ಪಡೆಯುತ್ತಿರುವ ವಯೋ ನಿವೃತ್ತ / ನಿವೃತ್ತ ಪಿಂಚಣಿದಾರರು. (ಗ್ರೂಪ್-ಡಿ / 4ನೇ ವರ್ಗ / Multi Testing Staff ಹೊರತುಪಡಿಸಿ) e) ಕಳೆದ ಸಾಲಿನ ಆದಾಯ ತೆರಿಗೆ ಪಾವತಿದಾರರು. ವೈದ್ಯ, ಅಭಿಯಂತರ, ವಕೀಲ, ಲೆಕ್ಕ ಪರಿಶೋಧಕರು, ವಾಸ್ತುಶಿಲ್ಪದಂತಹ ವೃತ್ತಿ ಪರರು ಮತ್ತು ವೃತ್ತಿ ಪರ ಸಂಸ್ಥೆಯಲ್ಲಿ ನೊಂದಾಯಿತ ಸದರಿ ವೃತ್ತಿಯನ್ನು ಕೈಗೊಳ್ಳುತ್ತಿರುವವರು.
4.	ಸಾವಯವ ಕೃಷಿ	ಹಿಂದಿನ ಸಾವಯವ ಭಾಗ್ಯ ಯೋಜನೆ ಗುಂಪುಗಳ ಪ್ರಮಾಣೀಕರಣ- ಕರ್ನಾಟಕ ರಾಜ್ಯ ಬೀಜ & ಸಾವಯವ ಪ್ರಮಾಣೀಕರಣ ಸಂಸ್ಥೆಯ ಮೂಲಕ ಕಾರ್ಯನಿರತ ಗುಂಪುಗಳ ಕ್ಷೇತ್ರದ ಪ್ರಮಾಣೀಕರಣ 2013-14 ರಚಿತವಾದ ಕಾರ್ಯನಿರತ ಗುಂಪುಗಳ ಅರ್ಹರಾಗಿರುತ್ತವೆ.
5.	ರೈತ ಸಿರಿ	ಸಿರಿಧಾನ್ಯಗಳಾದ ನವಣೆ, ಹಾರಕ, ಸಾಮೆ, ಕೊರಲೆ, ಊದಲು ಬೆಳೆಗಳನ್ನು ಬೆಳೆದ ಎಲ್ಲಾ ವರ್ಗದ ರೈತರಿಗೆ ಪ್ರತಿ ಹೆಕ್ಟೇರಿಗೆ ರೂ.10,000/-ದಂತೆ ಗರಿಷ್ಠ ಎರಡು ಹೆಕ್ಟೇರುಗಳಿಗೆ ಪ್ರೋತ್ಸಾಹಧನ. ರಾಜ್ಯಾದ್ಯಂತ ಸಿರಿಧಾನ್ಯಗಳಾದ ನವಣೆ, ಹಾರಕ, ಸಾಮೆ, ಕೊರಲೆ, ಊದಲು ಬೆಳೆಗಳನ್ನು ಬೆಳೆದ ರೈತರು ಸಂಬಂಧಿಸಿದ ರೈತ ಸಂಪರ್ಕ ಕೇಂದ್ರಗಳಲ್ಲಿ ಅರ್ಜಿ ಸಲ್ಲಿಸಿ ನೋಂದಣಿಯಾಗಬೇಕು.

6.	ಸೂಕ್ಷ್ಮ ನೀರಾವರಿ	ಹನಿ / ತುಂತುರು ನೀರಾವರಿ ಘಟಕಗಳ ಅಳವಡಿಕೆಗೆ ಎಲ್ಲಾ ವರ್ಗದ ರೈತರಿಗೆ 2.00 ಹೆಕ್ಟೇರ್ ಪ್ರದೇಶದವರೆಗೆ ಶೇ.90 ರಷ್ಟು ಸಹಾಯಧನ ಮತ್ತು 2.00 ಕ್ಕಿಂತ ಮೇಲ್ಪಟ್ಟು 5.00 ಹೆಕ್ಟೇರ್ ಪ್ರದೇಶದವರೆಗೆ ಶೇ.45ರಷ್ಟು ಸಹಾಯಧನ ಒದಗಿಸಲಾಗುತ್ತಿದೆ. ಇದಕ್ಕಾಗಿ Farmer Registration & Unified Beneficiary Information System - FRUITS ಪೋರ್ಟಲ್ ನಲ್ಲಿ ನೋಂದಣಿಯಾಗಿ Farmers Identification number (FID) ಪಡೆಯಬೇಕು. ನೀರಾವರಿ ಸೌಲಭ್ಯ ಹೊಂದಿರುವ ರೈತರು ನಿಗದಿತ ಅರ್ಜಿ ನಮೂನೆಯಲ್ಲಿ ಆರ್.ಟಿ.ಸಿ. (ಪಹಣಿ) ಯೊಂದಿಗೆ ರೈತ ಸಂಪರ್ಕ ಕೇಂದ್ರದಲ್ಲಿ ಅರ್ಜಿ ಸಲ್ಲಿಸಬೇಕು ಹಾಗೂ ಕೆ-ಕಿಸಾನ್‌ನಲ್ಲಿ ಅರ್ಜಿಯನ್ನು ಆನ್‌ಲೈನ್‌ನಲ್ಲಿ ಅಪ್ ಲೋಡ್ ಮಾಡಬೇಕು. ರೈತರು ಜೇಷ್ಠತೆ ಹಾಗೂ ಅನುದಾನ ಲಭ್ಯತೆಯ ಆಧಾರದ ಮೇರೆಗೆ ದಾಖಲಾತಿಗಳನ್ನು ಸಲ್ಲಿಸಿದ ರೈತರಿಗೆ ವಿತರಿಸಿದ / ರೈತರ ಹೊಲದಲ್ಲಿ ಅನುಷ್ಠಾನ ಮಾಡಿದ ಲಘು ನೀರಾವರಿ ಸಲಕರಣೆಗಳಿಗೆ ಸಹಾಯಧನ ಒದಗಿಸಲಾಗುವುದು.
7.	ಕೃಷಿ ಯಾಂತ್ರೀಕರಣ ಹಾಗೂ ಕೃಷಿ ಉತ್ಪನ್ನಗಳ ಸಂಸ್ಕರಣೆ	ಸಣ್ಣ ಟ್ರ್ಯಾಕ್ಟರ್, ಪವರ್ ಟಿಲ್ಲರ್, ಭೂಮಿ ಸಿದ್ಧತೆ ಉಪಕರಣಗಳು, ನಾಟಿ / ಬಿತ್ತನೆ ಉಪಕರಣಗಳು, ಟ್ರ್ಯಾಕ್ಟರ್ / ಶಕ್ತಿಚಾಲಿತ ಸಸ್ಯ ಸಂರಕ್ಷಣಾ ಉಪಕರಣಗಳು, ಅಂತರ ಬೇಸಾಯ ಉಪಕರಣಗಳು, ತ್ಯಾಜ್ಯ ವಸ್ತುಗಳ ನಿರ್ವಹಣಾ ಉಪಕರಣಗಳು, ಕೊಯಿಲು ಮತ್ತು ಒಕ್ಕಣೆ ಮಾಡುವ ಉಪಕರಣಗಳು ಕೃಷಿ ಸಂಸ್ಕರಣಾ ಘಟಕಗಳು ಹಾಗೂ ಡೀಸಲ್ ಪಂಪ್ ಸೆಟ್‌ಗಳನ್ನು ರಿಯಾಯಿತಿ ದರದಲ್ಲಿ ಈ ಕೆಳಕಂಡಂತೆ ಒದಗಿಸಲಾಗುತ್ತಿದೆ. 1 . ಕೃಷಿ ಯಂತ್ರೋಪಕರಣ/ ಕೃಷಿ ಸಂಸ್ಕರಣಾ ಘಟಕ/ ಟಾರ್ಪಾಲೀನ್‌ಗಳಿಗೆ ಸಂಬಂಧಿಸಿದಂತೆ ಪ್ರತಿ ರೈತ ಫಲಾನುಭವಿಗಳಿಗೆ (Individual farmers) ಸಾಮಾನ್ಯ ರೈತರಿಗೆ ಶೇ.50 ರಷ್ಟು ಸಹಾಯಧನ ಹಾಗು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ರೈತರಿಗೆ ಶೇ.90 ರಷ್ಟು ಸಹಾಯಧನವನ್ನು ಗರಿಷ್ಟ ಮಿತಿ ರೂ. ಒಂದು ಲಕ್ಷದವರೆಗೆ ನೀಡಲಾಗುತ್ತಿದೆ. ಸಣ್ಣ ಟ್ರಾಕ್ಟರ್‌ಗಳ ಖರೀದಿಗೆ ಪರಿಶಿಷ್ಟ ಜಾತಿ/ ಪಂಗಡದ ರೈತರಿಗೆ ರೂ.3.00ಲಕ್ಷಗಳ ಸಹಾಯಧನವನ್ನು ನೀಡಲಾಗುತ್ತದೆ. 2 . ಕೃಷಿ ಯಂತ್ರೋಪಕರಣಗಳ ದರವು 0 ರಿಂದ 5 ಲಕ್ಷವಿದ್ದಲ್ಲಿ ಅಂತಹ ಉಪಕರಣಗಳನ್ನು ಕಾನೂನಿನ್ವಯ ನೊಂದಾಯಿತ ರೈತ ಗುಂಪುಗಳಿಗೆ (FPOs / SHGs / Registered farmer organizatrions / Clubs) ನೀಡಲಾಗುವುದು. ಇದಕ್ಕಾಗಿ Farmer Registration and Unified Beneficiary Information System - FRUITS ಪೋರ್ಟಲ್ ನಲ್ಲಿ ನೋಂದಣಿಯಾಗಿ Farmers Identification number (FID) ಪಡೆಯಬೇಕು. ರೈತರು ನಿಗದಿತ ಅರ್ಜಿ ನಮೂನೆಯಲ್ಲಿ ಆರ್.ಟಿ.ಸಿ. ಯೊಂದಿಗೆ ರೈತ ಸಂಪರ್ಕ ಕೇಂದ್ರದಲ್ಲಿ ಅರ್ಜಿ ಸಲ್ಲಿಸಬೇಕು ಹಾಗೂ ಕೆ-ಕಿಸಾನ್ ನಲ್ಲಿ ಅರ್ಜಿಯನ್ನು ಆನ್‌ಲೈನ್‌ನಲ್ಲಿ ಅಪ್‌ಲೋಡ್ ಮಾಡಬೇಕು. ಜೇಷ್ಠತೆ ಹಾಗೂ ಅನುದಾನ ಲಭ್ಯತೆಯ ಆಧಾರದ ಮೇರೆಗೆ ದಾಖಲಾತಿಗಳನ್ನು ಸಲ್ಲಿಸಿದ ರೈತರು, ಪಡೆದ ಕೃಷಿ ಯಂತ್ರೋಪಕರಣಗಳಿಗೆ ಸಹಾಯಧನ ಒದಗಿಸಲಾಗುವುದು.

8.	ರಾಷ್ಟ್ರೀಯ ಆಹಾರ ಭದ್ರತಾ ಅಭಿಯಾನ (ಭತ್ತ ಮತ್ತು ದ್ವಿದಳ ಧಾನ್ಯ)	• ಭತ್ತ & ದ್ವಿದಳ ಧಾನ್ಯ ಬೆಳೆಯಲ್ಲಿ ಆಧುನಿಕ ತಾಂತ್ರಿಕತೆಗಳ ಗುಚ್ಛ ಪ್ರಾತ್ಯಕ್ಷಿಕೆಗಳು. • ಶೇ.50ರ ರಿಯಾಯಿತಿಯಲ್ಲಿ ಗುಣಮಟ್ಟದ ಬಿತ್ತನೆ ಬೀಜ ವಿತರಣೆ. • ಶೇ.50ರ ರಿಯಾಯಿತಿಯಲ್ಲಿ ಕೃಷಿ ಪರಿಕರಗಳಾದ ಸಸ್ಯ ಸಂರಕ್ಷಣಾ ರಾಸಾಯನಿಕಗಳು, ಜೈವಿಕ ಗೊಬ್ಬರಗಳು, ಲಘು ಪೋಷಕಾಂಶಗಳು, ಜಿಪ್ಸಂ/ ಕೃಷಿ ಸುಣ್ಣ, ಕೃಷಿ ಉಪಕರಣಗಳು & ಕೃಷಿ ಯಂತ್ರೋಪಕರಣಗಳು. • ದ್ವಿದಳಧಾನ್ಯ ಬೆಳೆಗಳಲ್ಲಿ ದೃಢೀಕೃತ ಬಿತ್ತನೆ ಬೀಜೋತ್ಪಾದನೆಗೆ ಪ್ರತಿ ಕ್ವಿಂಟಾಲ್‌ಗೆ ರೂ.5000/-ದಂತೆ ಪ್ರೋತ್ಸಾಹಧನ ಎಲ್ಲಾ ವರ್ಗದ ರೈತರು ನಿಗದಿತ ಅರ್ಜಿ ನಮೂನೆ ಮತ್ತು ಆರ್.ಟಿ.ಸಿ ಸಲ್ಲಿಸಿ ಸವಲತ್ತು ಪಡೆಯಬಹುದು
9.	ರಾಷ್ಟ್ರೀಯ ಆಹಾರ ಭದ್ರತಾ ಅಭಿಯಾನ ಯೋಜನೆ- ಒರಟುಧಾನ್ಯಗಳು (ಮೆಕ್ಕೆಜೋಳ)	ಮೆಕ್ಕೆಜೋಳ ಬೆಳೆಯಲ್ಲಿ ದ್ವಿದಳ ಧಾನ್ಯಗಳ ಬೆಳೆಗಳನ್ನು ಅಂತರಬೆಳೆಗಳಾಗಿ ಪ್ರಾತ್ಯಕ್ಷಿಕೆಗಳು ಎಲ್ಲಾ ವರ್ಗದ ರೈತರು ನಿಗದಿತ ಅರ್ಜಿ ನಮೂನೆ ಮತ್ತು ಆರ್.ಟಿ.ಸಿ ಸಲ್ಲಿಸಿ ಸವಲತ್ತು ಪಡೆಯಬಹುದು.
10.	ರಾಷ್ಟ್ರೀಯ ಆಹಾರ ಭದ್ರತಾ ಮಿಷನ್ ನ್ಯೂಟ್ರೀ ಸೀರಿಯಲ್ಸ್ – ರಾಗಿ, ಜೋಳ, ಸಜ್ಜೆ, ನವಣೆ ಇತ್ಯಾದಿ ಕಿರುಧಾನ್ಯ)	1. ರಾಗಿ, ಜೋಳ, ಸಜ್ಜೆ, ನವಣೆ ಇತ್ಯಾದಿ ಕಿರುಧಾನ್ಯಗಳ ಬೆಳೆಯಲ್ಲಿ ಆಧುನಿಕ ತಾಂತ್ರಿಕತೆಗಳ ಗುಚ್ಛ ಪ್ರಾತ್ಯಕ್ಷಿಕೆಗಳು. 2. ಶೇ.50ರ ರಿಯಾಯಿತಿಯಲ್ಲಿ ಗುಣಮಟ್ಟದ ಬಿತ್ತನೆ ಬೀಜ ವಿತರಣೆ. 3. ಶೇ.50ರ ರಿಯಾಯಿತಿಯಲ್ಲಿ ಕೃಷಿ ಪರಿಕರಗಳಾದ: ಜೈವಿಕ ಗೊಬ್ಬರಗಳು, ಸಸ್ಯ ಸಂರಕ್ಷಣಾ ರಾಸಾಯನಿಕಗಳು, ಲಘು ಪೋಷಕಾಂಶಗಳು, ಜಿಪ್ಸಂ/ ಕೃಷಿಸುಣ್ಣ, ಕೃಷಿ ಉಪಕರಣಗಳು ಮತ್ತು ಕೃಷಿ ಯಂತ್ರೋಪಕರಣಗಳು. 4. ನ್ಯೂಟ್ರಿ ಸಿರಿಧಾನ್ಯ ಬೆಳೆಗಳಲ್ಲಿ ದೃಢೀಕೃತ ಬಿತ್ತನೆ ಬೀಜೋತ್ಪಾದನೆಗೆ ಪ್ರತಿ ಕ್ವಿಂಟಾಲ್‌ಗೆ ರೂ.3000/-ದಂತೆ ಪ್ರೋತ್ಸಾಹಧನ ಎಲ್ಲಾ ವರ್ಗದ ರೈತರು ನಿಗದಿತ ಅರ್ಜಿ ನಮೂನೆ ಮತ್ತು ಆರ್.ಟಿ.ಸಿ ಸಲ್ಲಿಸಿ ಸವಲತ್ತು ಪಡೆಯಬಹುದು.
11.	ರಾಷ್ಟ್ರೀಯ ಆಹಾರ ಭದ್ರತಾ ಅಭಿಯಾನ - ಎಣ್ಣೆಕಾಳು ಮತ್ತು ತಾಳೆಬೆಳೆಗಳು (ಎನ್.ಎಫ್. ಎಸ್.ಎಂ- ಎಣ್ಣೆಕಾಳು)	1. ಶೇ. 50ರಷ್ಟು ರಿಯಾಯಿತಿ ದರದಲ್ಲಿ ಪ್ರಮಾಣಿತ ಬಿತ್ತನೆ ಬೀಜ ವಿತರಣಾ ಕಾರ್ಯಕ್ರಮ 2. ಎಣ್ಣೆಕಾಳು ಬೆಳೆಯಲ್ಲಿ ಆಧುನಿಕ ತಾಂತ್ರಿಕತೆಗಳ ದೊಡ್ಡ ಪ್ರಮಾಣದ ಪ್ರಾತ್ಯಕ್ಷಿಕೆಗಳು. 3. ಶೇ.50ರ ರಿಯಾಯಿತಿಯಲ್ಲಿ ಕೃಷಿ ಪರಿಕರಗಳಾದ: ಜೈವಿಕ ಗೊಬ್ಬರಗಳು, ಸಸ್ಯ ಸಂರಕ್ಷಣಾ ರಾಸಾಯನಿಕಗಳು, ಲಘು ಪೋಷಕಾಂಶಗಳು ಮತ್ತು ಜಿಪ್ಸಂ/ಕೃಷಿ ಸುಣ್ಣ ಎಲ್ಲಾ ವರ್ಗದ ರೈತರು ನಿಗದಿತ ಅರ್ಜಿ ನಮೂನೆ ಮತ್ತು ಆರ್.ಟಿ.ಸಿ ಸಲ್ಲಿಸಿ ಸವಲತ್ತು ಪಡೆಯಬಹುದು.

12.	ಸಸ್ಯ ಸಂರಕ್ಷಣೆ	ಶೇ.50 ರ ರಿಯಾಯಿತಿಯಲ್ಲಿ ಸಸ್ಯ ಸಂರಕ್ಷಣಾ ರಾಸಾಯನಿಕಗಳು/ದಾಸ್ತಾನು ಕಣಜಗಳು ಹಾಗೂ ಉಪಕರಣಗಳ ವಿತರಣೆ. ಎಲ್ಲಾ ವರ್ಗದ ರೈತರು ನಿಗದಿತ ಅರ್ಜಿ ನಮೂನೆ ಮತ್ತು ಆರ್.ಟಿ.ಸಿ ಸಲ್ಲಿಸಿ ಸವಲತ್ತು ಪಡೆಯಬಹುದು.
13.	ಮಣ್ಣಿನ ಸತ್ವ ಹೆಚ್ಚಿಸುವಿಕೆ ಯೋಜನೆ	ಹಸಿರೆಲೆ ಗೊಬ್ಬರ, ಜಿಪ್ಸಂ, ಕೃಷಿ ಸುಣ್ಣ / ಡೋಲೋಮೈಟ್, ಲಘುಪೋಷಕಾಂಶಗಳು, ಜೈವಿಕ ಗೊಬ್ಬರಗಳು, ಎರೆಹುಳು ಗೊಬ್ಬರ, ಸಾವಯವ ಗೊಬ್ಬರ, ರಂಜಕಯುಕ್ತ ಸಾವಯವ ಗೊಬ್ಬರ, ಸಿಟಿ ಕಾಂಪೋಸ್ಟ್ ಗಳಿಗೆ ಸಾಮಾನ್ಯ ವರ್ಗದ ರೈತರಿಗೆ ಶೇ.50ರ ಸಹಾಯಧನ ಹಾಗೂ ಪರಿಶಿಷ್ಟ ಜಾತಿ/ ಪಂಗಡದ ರೈತರಿಗೆ ಶೇ.75ರ ಸಹಾಯಧನ ಬಯೋಡೈಜೆಸ್ಟರ್ ಘಟಕ ಮತ್ತು ಎರೆಹುಳು ಗೊಬ್ಬರ ಉತ್ಪಾದನಾ ಘಟಕ ಸ್ಥಾಪನೆಗೆ ಸಾಮಾನ್ಯ ವರ್ಗದ ರೈತರಿಗೆ ಶೇ.50ರ ಸಹಾಯಧನ ಹಾಗೂ ಪರಿಶಿಷ್ಟ ಜಾತಿ/ ಪಂಗಡದ ರೈತರಿಗೆ ಶೇ.75ರ ಸಹಾಯಧನ ಅರ್ಹತೆ: 1. ರೈತರಾಗಿದ್ದು ಜಮೀನು ಅವರ ಹೆಸರಿನಲ್ಲಿರಬೇಕು. 2. ರೈತರ ಹಿಡುವಳಿ ಭೂಮಿಯನ್ನು ಅವರ ಪಹಣಿಯಿಂದ ಖಾತರಿಪಡಿಸಬೇಕು. 3. ತಂದೆ ಅಥವಾ ತಾಯಿ ಮರಣ ಹೊಂದಿದ್ದಲ್ಲಿ ಗ್ರಾಮ ಲೆಕ್ಕಿಗರಿಂದ ದೃಡೀಕರಣ ಪಡೆದಿರಬೇಕು. 4. ಪರಿಶಿಷ್ಟ ಪಂಗಡ ವರ್ಗದವರು ಗುರುತಿನ ಚೀಟಿಯ ಜೊತೆಗೆ ಜಾತಿ ಪ್ರಮಾಣ ಪತ್ರವನ್ನು ಪ್ರಸ್ತುತ ಪಡಿಸುವುದು.

ಅನುಬಂಧ-2 (ಅ)

ಜಲಾನಯನ ಅಭಿವೃದ್ಧಿ ಇಲಾಖೆಯಿಂದ ಅನುಷ್ಠಾನಗೊಳಿಸಲಾಗುತ್ತಿರುವ ವಿವಿಧ ಜಲಾನಯನ ಯೋಜನೆಗಳ ಮಾನದಂಡಗಳು

LAQ-(3605)

ಕ್ರ.ಸಂ	ಯೋಜನೆ	ಯೋಜನೆಗಳ ಮಾನದಂಡಗಳು
I	ರಾಜ್ಯ ವಲಯ ಯೋಜನೆಗಳು	
1	ಜಲಾನಯನ ಅಭಿವೃದ್ಧಿ ಮೂಲಕ ಬರಗಾಲವನ್ನು ತಡೆಯುವಿಕೆ (WDDP)	1. ಅಂತರ್ಜಲ ಶೋಷಿತ ತಾಲ್ಲೂಕುಗಳು; 2. ಸತತ ಬರಗಾಲಕ್ಕೆ ತುತ್ತಾದ ತಾಲ್ಲೂಕುಗಳು; 3. ಒಂದೆ ಕಡೆ ಲಭ್ಯವಾಗುವ ಕಿರುಜಲಾನಯಗಳ ಗೊಂಚಲಿನ ಉಪ ಜಲಾನಯನ ಪ್ರದೇಶ; 4. ಯೋಜನಾ ಪ್ರದೇಶದಲ್ಲಿ ಲಭ್ಯವಿರುವ ಭೂಸಂಪನ್ಮೂಲ ಮಾಹಿತಿಗಳು; 5. ಹೆಚ್ಚು ಜಲಾನಯನ ಉಪಚಾರಕ್ಕೆ ಲಭ್ಯವಿರುವ ಪ್ರದೇಶ; 6. ದಿಬ್ಬದಿಂದ ಕಣಿವೆ ಮಾದರಿಯಲ್ಲಿರುವ ಜಲಾನಯನದ ಅನುಷ್ಠಾನಕ್ಕೆ ಯೋಗ್ಯ ಪ್ರದೇಶ
2	ಸುಜಲ-3 ಎಗ್ಸಿಟ್ ಸ್ಟ್ರಾಟೆಜಿ	1. ಕರ್ನಾಟಕ ಜಲಾನಯನ ಅಭಿವೃದ್ಧಿ ಯೋಜನೆ-II (ಸುಜಲ-III) ಯೋಜನೆಯಡಿ ಸೃಜಿಸಿದ ಭೂ-ಸಂಪನ್ಮೂಲ ದತ್ತಾಂಶ, ಪ್ರಯೋಗಾಲಯ, ವೈಜ್ಞಾನಿಕ ಉಪಕರಣ ಇತ್ಯಾದಿ ಸೌಲಭ್ಯಗಳನ್ನು ಯೋಜನೆ ಮುಕ್ತಾಯದ ನಂತರದ ಅವಧಿಯಲ್ಲಿ 2020-21ನೇ ಸಾಲಿನಿಂದ 2024-25ನೇ ಸಾಲಿನವರೆಗೆ 05 ವರ್ಷಗಳ ಕಾಲ ನವೀಕರಣ ಹಾಗೂ ನಿರ್ವಹಣೆ ಮಾಡಲಾಗುವುದು. 2. ರೈತ ಸಂಪರ್ಕ ಕೇಂದ್ರಗಳ ಮೂಲಕ ಮೊದಲ ಒಂದು ವರ್ಷದ ಅವಧಿಯಲ್ಲಿ ಸುಜಲ-III ಯೋಜನಾ ವ್ಯಾಪ್ತಿಯ ಗ್ರಾಮಗಳ ರೈತರಿಗೆ ಗ್ರಾಮ ಮಟ್ಟದ ತರಬೇತಿಗಳನ್ನು ಆಯೋಜಿಸಿ ಸರ್ವೆ ನಂಬರ್ ವಾರು ಭೂ-ಸಂಪನ್ಮೂಲ ಕಾರ್ಡ್ ವಿತರಿಸುವ ಮೂಲಕ ಕ್ಷೇತ್ರ ಮಟ್ಟದಲ್ಲಿ ಭೂ-ಸಂಪನ್ಮೂಲ ಮಾಹಿತಿಯನ್ನು ಅಳವಡಿಸಿಕೊಳ್ಳುವ ಕುರಿತು ಅರಿವು ಮೂಡಿಸುವುದು.

II	**ಕೇಂದ್ರ ವಲಯ ಯೋಜನೆಗಳು**	
1 (ಅ)	ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ-ಜಲಾನಯನ ಅಭಿವೃದ್ಧಿ ಘಟಕ (PMKSY-WDC)	1. ಬಡತನದ ಸೂಚ್ಯಂಕ; 2. ಶೇಕಡಾವಾರು ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡಗಳ ಪ್ರಮಾಣ; 3. ನೈಜ ಕೂಲಿ (Actual Wages); 4. ಶೇಕಡಾವಾರು ಸಣ್ಣ/ಅತಿಸಣ್ಣ ರೈತರ ಪ್ರಮಾಣ; 5. ಅಂತರ್ಜಲದ ಸ್ಥಿತಿ; 6. ಡಿ.ಪಿ.ಎ.ಪಿ ಮತ್ತು ಡಿ.ಡಿ.ಪಿ ತಾಲ್ಲೂಕುಗಳ ತೇವಾಂಶ ಸೂಚಕ; 7. ಮಳೆಯಾಶ್ರಿತ ಕೃಷಿಗೆ ಒಳಪಟ್ಟ ಪ್ರದೇಶ; 8. ಕುಡಿಯುವ ನೀರಿನ ಲಭ್ಯತೆ; 9. ಬಂಜರು ಪ್ರದೇಶದ ಭೂಮಿ; 10. ಭೂಮಿಯ ಉತ್ಪಾದನಾ ಸಾಮರ್ಥ್ಯ; 11. ಈಗಾಗಲೇ ಉಪಚರಿಸಿರುವ ಇನ್ನೊಂದು ಜಲಾನಯನದ ಸಮೀಪದಲ್ಲಿ ಇರಬೇಕು; 12. ಗೊಂಚಲು ಕಿರುಜಲಾನಯನಗಳು (ಒಂದಕ್ಕಿಂತ ಹೆಚ್ಚಿನ ಕಿರುಜಲಾನಯನಗಳು) ಈ ಮೇಲಿನ ಮಾನದಂಡಗಳನ್ನು ಬಳಸಿಕೊಂಡು ಯೋಜನಾ ಪ್ರದೇಶವನ್ನು ಆಯ್ಕೆಮಾಡಿದ ನಂತರ ಕಾರ್ಯಕ್ರಮದ ಚಟುವಟಿಕೆಗಳನ್ನು 3 ಹಂತಗಳಲ್ಲಿ ಅನುಷ್ಠಾನ ಮಾಡಲಾಗುವುದು.
1 (ಆ)	ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ-ಇತರೆ ಉಪಚಾರಗಳು (PMKSY-OI)	1. ಸಮುದಾಯ ನೀರು ಸಂಗ್ರಹಣಾ ವಿನ್ಯಾಸಗಳು ಜಿಲ್ಲಾ ನೀರಾವರಿ ಯೋಜನೆಯ ಭಾಗವಾಗಿರಬೇಕು.
		2. ನೀರು ಸಂಗ್ರಹಣಾ ಕಾಮಗಾರಿಗಳ ಅನುಷ್ಠಾನಕ್ಕೆ ಅಂದಾಜು ಪತ್ರಿಕೆಯನ್ನು ರೂ.5.00 ಲಕ್ಷಗಳಿಗೆ ಸೀಮಿತಗೊಳಿಸದೇ, ಸ್ಥಳದ ಬೇಡಿಕೆಯ ಆಧಾರದ (as per actual requirement) ಮೇಲೆ ಅಂದಾಜು ಪತ್ರಿಕೆಯನ್ನು ತಯಾರಿಸಬೇಕು.
		3. ರೂ.5.00 ಲಕ್ಷಕ್ಕಿಂತ ಹೆಚ್ಚಿನ ಮೊತ್ತದ ಕಾಮಗಾರಿಗಳಿಗೆ ಏಜೆನ್ಸಿಯ ಆಯ್ಕೆಯನ್ನು ಇ-ಟೆಂಡರ್ ಮೂಲಕ ಮಾಡುವುದು ಕಡ್ಡಾಯವಾಗಿರುತ್ತದೆ.
		4. 2020-21 ನೇ ಸಾಲಿನ ಕ್ರಿಯಾ ಯೋಜನೆಯನ್ನು ಸಮುದಾಯ ನೀರು ಸಂಗ್ರಹಣಾ ವಿನ್ಯಾಸಗಳನ್ನು ಅನುಷ್ಠಾನ ಮಾಡಲು ತಯಾರಿಸಿಕೊಂಡು, ಜಂಟಿ ಕೃಷಿ ನಿರ್ದೇಶಕರ ಹಂತದ ಜಿಲ್ಲಾ ಮಟ್ಟದ ತಾಂತ್ರಿಕ ಸಮಿತಿಯಲ್ಲಿ (DLTC) ಅನುಮೋದನೆ ಪಡೆಯುವುದು. ಕೆಟಿಪಿಪಿ ನಿಯಮಗಳ ಪ್ರಕಾರ ಕಾಮಗಾರಿಗಳನ್ನು ಅನುಷ್ಠಾನ ಮಾಡಲು ಕಾರ್ಯಾದೇಶ ನೀಡುವುದು.

		5. ಸಮುದಾಯ ನೀರು ಸಂಗ್ರಹಣಾ ವಿನ್ಯಾಸಗಳನ್ನು ರಾಜ್ಯ ಸರ್ಕಾರದ ಜಲಾನಯನ ಅಭಿವೃದ್ಧಿ ಮೂಲಕ ಬರಗಾಲ ತಡೆಯುವಿಕೆ ಹಾಗೂ ಜಲಾಮೃತ ಜಲಾನಯನ ಅಭಿವೃದ್ಧಿ ಯೋಜನೆಗಳ ವ್ಯಾಪ್ತಿಯಲ್ಲಿ ಕನಿಷ್ಠ ಶೇ.50 ರಷ್ಟು ಕ್ರಿಯಾ ಯೋಜನೆಯ ಮೊತ್ತದ ಚಟುವಟಿಕೆಗಳನ್ನು ಸೂಕ್ಷ್ಮ ನೀರಾವರಿ ಘಟಕಗಳೊಂದಿಗೆ ಜೋಡಿಸಿ ಅನುಷ್ಠಾನ ಮಾಡುವುದು. ಉಳಿದ ಸಮುದಾಯ ನೀರು ಸಂಗ್ರಹಣಾ ವಿನ್ಯಾಸಗಳನ್ನು ಈ ಮೇಲಿನ ಯೋಜನೆಗಳ ಹೊರಗೆ, ಜಲಾನಯನ ತತ್ವದ ಆಧಾರದ ಮೇಲೆ ಅನುಷ್ಠಾನ ಮಾಡುವುದು.
		6. ಸಮುದಾಯ ನೀರು ಕೊಯ್ಲು ವಿನ್ಯಾಸ/ ನೀರು ಸಂಗ್ರಹಣಾ ವಿನ್ಯಾಸಗಳ ಮಾಹಿತಿಯನ್ನು ಕ್ಷೇತ್ರದ ಗ್ರಾಮ ಪಂಚಾಯತಿ, ತಾಲ್ಲೂಕು ಪಂಚಾಯತಿ, ಜಿಲ್ಲಾ ಪಂಚಾಯತಿ ಮತ್ತು ತೋಟಗಾರಿಕೆ/ರೇಷ್ಮೆ/ಅರಣ್ಯ ಹಾಗೂ ಮೀನುಗಾರಿಕೆ ಇಲಾಖೆಗಳ ತಾಲ್ಲೂಕು ಮಟ್ಟದ ಅಧಿಕಾರಿಗಳ ಗಮನಕ್ಕೆ ತರುವುದು ಹಾಗೂ ಭಾರತ ಸರ್ಕಾರದ ಸೂಚನೆಯಂತೆ ನೀರು ಸಂಗ್ರಹಣಾ ವಿನ್ಯಾಸಗಳಿಂದ ಪ್ರಯೋಜನ ಪಡೆಯುವ ರೈತರಿಗೆ ಪ್ರಥಮ ಪ್ರಾಶಸ್ತ್ಯ ಮೇರೆಗೆ (on priority) ಕಡ್ಡಾಯವಾಗಿ PMKSY-OI-PDMC (Micro-irrigation) ಕಾರ್ಯಕ್ರಮದಡಿ ಸೂಕ್ಷ್ಮ ನೀರಾವರಿ ಘಟಕಗಳನ್ನು ಅಳವಡಿಸಲು ಕ್ರಮವಹಿಸುವುದು.
		7. ಸಮುದಾಯ ನೀರು ಕೊಯ್ಲು ವಿನ್ಯಾಸ/ ನೀರು ಸಂಗ್ರಹಣಾ ವಿನ್ಯಾಸಗಳನ್ನು ಕೃಷಿ ಇಲಾಖೆ ಯಾಂತ್ರಿಕರಣ ಯೋಜನೆಯಡಿಯಲ್ಲಿನ ನೀರೆತ್ತುವ ಸಾಧನಗಳು ಮತ್ತು ಸೂಕ್ಷ್ಮ ನೀರಾವರಿ ಘಟಕಗಳೊಂದಿಗೆ ಜೋಡಣೆ ಮಾಡಿ ಅನುಷ್ಠಾನ ಮಾಡುವುದು.
		8. ಅನುಷ್ಠಾನ ಮಾಡಲಾದ ನೀರು ಸಂಗ್ರಹಣಾ ವಿನ್ಯಾಸಗಳ ಉತ್ಕೃಷ್ಟ ಗುಣಮಟ್ಟದ ದಿನಾಂಕಯುಕ್ತ (dated) ಜಿ.ಪಿ.ಎಸ್ ಯುಕ್ತ ಛಾಯಚಿತ್ರಗಳನ್ನು ಸೆರೆಹಿಡಿಯುವುದು ಹಾಗೂ ಕೇಂದ್ರ ಸರ್ಕಾರದ ಎಂ.ಐ.ಎಸ್ ನಲ್ಲಿ ಅಪ್‌ಲೋಡ್ ಮಾಡಿದ ನಂತರ ಬಿಲ್ ಪಾವತಿ ಮಾಡುವುದು.
		9. ಪರಿಶಿಷ್ಠ ಜಾತಿ ಉಪ ಯೋಜನೆ ಮತ್ತು ಗಿರಿಜನ ಉಪ ಯೋಜನೆಯ ಕ್ರಿಯಾ ಯೋಜನೆಯನ್ನು ಪ್ರತ್ಯೇಕವಾಗಿ ತಯಾರಿಸುವುದು. ಕನಿಷ್ಠ ಶೇ. 18 ರಷ್ಟು ಅನುದಾನವನ್ನು ಪರಿಶಿಷ್ಠ ಜಾತಿಯ ಜನರು ಪ್ರಾಬಲ್ಯವಿರುವ ಹಾಗೂ ಕನಿಷ್ಠ ಶೇ. 8 ರಷ್ಟು ಅನುದಾನವನ್ನು ಪರಿಶಿಷ್ಠ ಪಂಗಡದ ಜನರು ಪ್ರಾಬಲ್ಯವಿರುವ ಹಳ್ಳಿಗಳಲ್ಲಿ ಸಮುದಾಯ ನೀರು ಕೊಯ್ಲು ವಿನ್ಯಾಸ/ ನೀರು ಸಂಗ್ರಹಣಾ ವಿನ್ಯಾಸಗಳ ರಚನೆಗೆ ಕಡ್ಡಾಯವಾಗಿ ಬಳಸುವುದು.

ಕೃಷಿ ಇಲಾಖೆಯಿಂದ ಬಿಡುಗಡೆ ಮಾಡಿದ ಅನುದಾನದಲ್ಲಿ ಅನುಷ್ಠಾನಗೊಳಿಸುತ್ತಿರುವ ಯೋಜನೆಗಳು:		
2	ರಾಷ್ಟ್ರೀಯ ಸುಸ್ಥಿರ ಕೃಷಿ ಅಭಿಯಾನ- ಮಳೆಯಾಶ್ರಿತ ಪ್ರದೇಶಾಭಿವೃದ್ಧಿ (NMSA-RAD)	ಸಮಗ್ರ ಕೃಷಿ ಪದ್ಧತಿ ಮೂಲಕ ಕೃಷಿ ಬೆಳೆ ಖುಷ್ಕಿ, ತೋಟಗಾರಿಕೆ, ಕೃಷಿ ಅರಣ್ಯ, ಪಶುಸಂಗೋಪನೆ, ಹೈನುಗಾರಿಕೆ, ಮೀನುಗಾರಿಕೆ, ರೇಷ್ಮೆ ಕೃಷಿ, ಜೇನು ಕೃಷಿ, ಮೇವು ಅಭಿವೃದ್ಧಿ, ನೀರು ಸಂರಕ್ಷಣೆ ಮತ್ತು ಸಂಪನ್ಮೂಲ ನಿರ್ವಹಣೆ ಮೂಲಕ ಕೃಷಿ ಉತ್ಪಾದಕತೆ ಹೆಚ್ಚಿಸುವುದು. ಮುಖ್ಯವಾಗಿ 10 ಕೃಷಿ ವಿಷಯಗಳ ಬಗ್ಗೆ ಆದ್ಯತೆ ನೀಡಲಾಗಿದೆ. 1.ಉತ್ತಮ ಕೃಷಿ ಬಿತ್ತನೆ ಬೀಜ; 2. ಜಾನುವಾರು ಮತ್ತು ಮೀನುಗಾರಿಕೆ; 3. ಸಮರ್ಪಕವಾಗಿ ನೀರು ಬಳಕೆ; 4.ಸಮಗ್ರ ಪೀಡೆ ನಿರ್ವಹಣೆ; 5.ಉತ್ತಮ ಬೆಳೆ ಪದ್ಧತಿ; 6. ಸಮಗ್ರ ಪೋಷಕಾಂಶ ನಿರ್ವಹಣೆ; 7. ಕೃಷಿ ವಿಮೆ; 8. ಕ್ರೆಡಿಟ್ ಬೆಂಬಲ; 9.ಕೃಷಿ ಮಾರುಕಟ್ಟೆ; 10. ಕೃಷಿ ಮಾಹಿತಿ ಮತ್ತು ಜೀವನೋಪಾಯ ವೈವಿಧ್ಯಕರಣ.
3	ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ (RKVY):	
(ಅ)	ಸಮಸ್ಯಾತ್ಮಕ ಮಣ್ಣುಗಳ ಸುಧಾರಣೆ (RPS)	1. ಸಮಸ್ಯಾತ್ಮಕ ಮಣ್ಣಿನ (ಸವಳು-ಜವಳು) ಪ್ರದೇಶವು ತುಂಡುಗಳಲ್ಲಿ ಇರದೆ ವಿಸ್ತಾರ ಪ್ರದೇಶದಲ್ಲಿದ್ದು ಒಟ್ಟಾರೆ ಪ್ರದೇಶವನ್ನು ಉಪಚರಿಸಲು ಅನುಕೂಲವಾಗುವಂತಿರಬೇಕು. 2. CADA ವ್ಯಾಪ್ತಿಗೆ ಒಳಪಡುವಂತಿರಬಾರದು 3. ಉಪಚಾರ ಪ್ರಸ್ತಾಪಿತ ಪ್ರದೇಶದ ರೈತರುಗಳು ಸಮಾನ ಮನಸ್ಕರಾಗಿದ್ದು, ಪರ್ಯಾಯ ಬೆಳೆ, ಮಣ್ಣಿನ ಉಪಚಾರ ಮತ್ತು ಬೆಳೆ ಶಿಫಾರಸ್ಸಿನ ಅನ್ವಯ ಬೇಸಾಯ ಕ್ರಮಗಳನ್ನು ಪಾಲಿಸುವ ಮನೋಭಾವ ಹೊಂದಿರಬೇಕು.
(ಆ)	ಸಾರ್ವಜನಿಕ ಖಾಸಗಿ ಸಹಭಾಗಿತ್ವದಲ್ಲಿ ಸಮಗ್ರ ಕೃಷಿ ಅಭಿವೃದ್ಧಿ (PPP- IAD)	1. ಉತ್ಪಾದನಾ ಪೂರ್ವ ಹಂತದಿಂದ ಗ್ರಾಹಕರ ಬಳಕೆ ಹಂತದವರೆಗಿನ ಸಂಪೂರ್ಣ ಮೌಲ್ಯ ಸರಪಳಿಯನ್ನು ಸೂಕ್ತ ಮಧ್ಯಸ್ಥಿಕೆಯೊಂದಿಗೆ ಅನುಷ್ಠಾನಗೊಳಿಸುವಂತಿರಬೇಕು 2. ಸಾರ್ವಜನಿಕ ಖಾಸಗಿ ಸಹಭಾಗಿತ್ವ ಸಂಸ್ಥೆಗಳು ಯೋಜನಾ ಪ್ರದೇಶದ ಶೇ 50 ರಷ್ಟು ರೈತ ಉತ್ಪನ್ನವನ್ನು ಖರೀದಿಸುವಂತಿರಬೇಕು. 3. ಖಾಸಗಿ ಸಂಸ್ಥೆಗಳು ಹೊಸ ತಂತ್ರಜ್ಞಾನಗಳ ಅಳವಡಿಕೆ, ಉತ್ಪಾದನಾ ಸಾಮರ್ಥ್ಯದ ಹೆಚ್ಚಳ, ಕೊಯ್ಲೋತ್ತರ ನಿರ್ವಹಣೆ, ಹೂಡುವಳಿ ಮಾರುಕಟ್ಟೆಗಳಿಗೆ ವಿಸ್ತರಣಾ ನೆರವನ್ನು ಒದಗಿಸುವಂತಿರಬೇಕು. 4. ಕೃಷಿ ವ್ಯವಹಾರದಲ್ಲಿ ತೊಡಗಿರುವ ಸಂಸ್ಥೆಗಳು, ರೈತರು / ರೈತ ಉತ್ಪಾದಕರ ಸಂಸ್ಥೆಗಳಿಗೆ ಬೆಂಬಲ ನೀಡುವಂತಹ ಸಂಸ್ಥೆಗಳಾಗಿರಬೇಕು. 5. ಖಾಸಗಿ ಸಂಸ್ಥೆಗಳು ಯೋಜನಾ ಪ್ರದೇಶದಲ್ಲಿ ತಮ್ಮ ಪಾಲುದಾರಿಕೆಯನ್ನು ಹೂಡುವಂತವರಾಗಿರಬೇಕು.

(ಇ)	ರೈತ ಉತ್ಪಾದಕರ ಸಂಸ್ಥೆಗಳ ಉತ್ತೇಜನ (FPOs)	1. ರೈತ ಉತ್ಪಾದಕರ ಸಂಸ್ಥೆಗಳು ಪ್ರಾಥಮಿಕ ಉತ್ಪಾದಕರನ್ನು ಒಳಗೊಂಡ ಸಂಸ್ಥೆಯಾಗಿದ್ದು, ಅದರಲ್ಲೂ ಪ್ರಮುಖವಾಗಿ ಸಣ್ಣ ಮತ್ತು ಅತಿಸಣ್ಣ ರೈತರಿಗೆ ಆದ್ಯತೆ ನೀಡಲಾಗುವುದು. 2. ರೈತ ಉತ್ಪಾದಕರ ಸಂಸ್ಥೆಯು 500-1000 ರೈತ ಸದಸ್ಯರನ್ನು ಹೊಂದಿರಬೇಕು. 3. ಗುಚ್ಛವಾರು ಮೌಲ್ಯ ಸರಪಳಿಯನ್ನು ಜಿಲ್ಲಾ ಮಟ್ಟದ ಉಸ್ತುವಾರಿ ಸಮಿತಿಯಲ್ಲಿ ಆಯ್ಕೆಮಾಡಿ ಅನುಮೋದನೆ ಪಡೆದಿರಬೇಕು.. ಈ ಸಂಸ್ಥೆಯು ಕಂಪನಿ ಕಾಯಿದೆ/ಕೋ-ಆಪರೇಟಿವ್ ಸೊಸೈಟಿ ಕಾಯಿದೆಯಡಿ ನೋಂದಣಿಯಾಗಿರಬೇಕು. 5. ಸದಸ್ಯ ರೈತರು ಅವಶ್ಯಕ ಷೇರು ಬಂಡವಾಳವನ್ನು ನೀಡುವಂತಿರಬೇಕು. 6. ರೈತ ಉತ್ಪಾದಕರ ಸಂಸ್ಥೆಯ ಸದಸ್ಯರು ಸಾಂಘಿಕವಾಗಿ ವ್ಯವಹರಿಸುವ ಬಲ ಹೊಂದಿರಬೇಕು.
(ಈ)	ತಡೆ ಅಣೆ (CD)	1. ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ ತಡೆಅಣೆ ಅನುಷ್ಠಾನಗೊಳಿಸಲು ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆಯ ಬ್ಯಾಚ್-5 ಮತ್ತು ಬ್ಯಾಚ್-6 ಯೋಜನಾ ಪ್ರದೇಶದಲ್ಲಿ ಆದ್ಯತೆ ನೀಡುವುದು.
		2. ತಡೆಅಣೆ ಕಾಮಗಾರಿಗೆ ಅಂದಾಜು ಪತ್ರಿಕೆಯನ್ನು ರೂ5.00 ಲಕ್ಷಗಳಿಗೆ ಸೀಮಿತಗೊಳಿಸದೇ, ಸ್ಥಳದ ಬೇಡಿಕೆಯ ಆಧಾರದ ಮೇಲೆ ಅಂದಾಜು ಪತ್ರಿಕೆಯನ್ನು ಸಿದ್ಧಪಡಿಸುವುದು.
		3. ಅನುಷ್ಠಾನ ಮಾಡಲಾಗುವ ತಡೆಅಣೆಗಳು ಕಡ್ಡಾಯವಾಗಿ ಜಿಲ್ಲಾ ನೀರಾವರಿ ಯೋಜನೆಯ ಭಾಗವಾಗಿರಬೇಕು.
		4. ಸಮುದಾಯ/ವ್ಯಕ್ತಿಗತ ತಡೆಅಣೆಗಳನ್ನು ವೈಜ್ಞಾನಿಕವಾಗಿ ಸೂಕ್ತವಾದ ಸ್ಥಳಗಳಲ್ಲಿ ಅನುಷ್ಠಾನ ಮಾಡುವುದು. ಸದರಿ ಗುರುತಿಸಲಾದ ಸ್ಥಳಗಳಲ್ಲಿ Run off ಲಭ್ಯತೆಯ ಬಗ್ಗೆ ಖಾತ್ರಿಪಡಿಸಿಕೊಳ್ಳುವುದು.
		5. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ರೈತರ ಜಮೀನಿನಲ್ಲಿ ಅಥವಾ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಜನರು ಪ್ರಾಬಲ್ಯವಿರುವ ಹಳ್ಳಿಗಳಲ್ಲಿ ನೀರು ಸಂಗ್ರಹಣಾ ವಿನ್ಯಾಸ/ತಡೆಅಣೆಗಳ ರಚನೆಗಳನ್ನು ಕಡ್ಡಾಯವಾಗಿ ಅನುಷ್ಠಾನ ಮಾಡುವುದು.

ಕರ್ನಾಟಕ ವಿಧಾನಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	3610
ಮಾನ್ಯ ವಿಧಾನಸಭೆ ಸದಸ್ಯರ ಹೆಸರು	:	ಶ್ರೀ ಅನಿಲ್ ಚಿಕ್ಕಮಾದು (ಹೆಚ್.ಡಿ.ಕೋಟೆ)
ಉತ್ತರಿಸಬೇಕಾದ ದಿನಾಂಕ	:	24.03.2021
ಉತ್ತರಿಸುವವರು	:	ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಸಚಿವರು.

ಕ್ರ.ಸಂ.	ಪ್ರಶ್ನೆ	ಉತ್ತರ
ಅ	ರಾಜ್ಯದಲ್ಲಿ ವಿಕಲಚೇತನರಿಗೆ ಇಲಾಖೆ ವತಿಯಿಂದ ರೂಪಿಸಿರುವ ಯೋಜನೆಗಳಾವುವು; ಕೈಗೊಂಡಿರುವ ಅಭಿವೃದ್ಧಿ ಕಾರ್ಯಗಳಾವುವು;	ರಾಜ್ಯದಲ್ಲಿ ವಿಕಲಚೇತನರಿಗೆ ಇಲಾಖಾವತಿಯಿಂದ ರೂಪಿಸಿರುವ ಯೋಜನೆಗಳ ವಿವರಗಳನ್ನು **ಅನುಬಂಧ-01** ರಲ್ಲಿ ಲಗತ್ತಿಸಲಾಗಿದೆ.
ಆ	ಕಳೆದ ಒಂದು ವರ್ಷದಲ್ಲಿ ಎಷ್ಟು ಜನ ಫಲಾನುಭವಿಗಳು ಈ ಯೋಜನೆಯ ಸೌಲಭ್ಯವನ್ನು ಪಡೆದಿದ್ದಾರೆ; (ತಾಲ್ಲೂಕುವಾರು, ಯೋಜನೆವಾರು ಸಂಪೂರ್ಣ ವಿವರ ನೀಡುವುದು)	ಕಳೆದ ಒಂದು ವರ್ಷದಲ್ಲಿ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ವಿವಿಧ ಯೋಜನೆಗಳಡಿ **52,565** ಫಲಾನುಭವಿಗಳು ಸೌಲಭ್ಯವನ್ನು ಪಡೆದಿರುತ್ತಾರೆ ಯೋಜನೆವಾರು ವಿವರಗಳನ್ನು **ಅನುಬಂಧ-02** ರಲ್ಲಿ ಲಗತ್ತಿಸಲಾಗಿದೆ.
ಇ	ಸರ್ಕಾರವು ವಿಕಲಚೇತನರ ಅಭಿವೃದ್ಧಿಗೆ ಕಳೆದ ಸಾಲಿನಲ್ಲಿ ಮೀಸಲಿಟ್ಟ ಅನುದಾನವೆಷ್ಟು; ಖರ್ಚು ಮಾಡಲಾದ ಅನುದಾನವೆಷ್ಟು; (ವಿವರ ನೀಡುವುದು)	ವಿಕಲಚೇತನರ ಅಭಿವೃದ್ಧಿಗೆ ಕಳೆದ ಸಾಲಿನಲ್ಲಿ ಮೀಸಲಿಟ್ಟ ಅನುದಾನ ಹಾಗೂ ಖರ್ಚು ಮಾಡಲಾದ ಅನುದಾನದ ವಿವರಗಳನ್ನು **ಅನುಬಂಧ-03** ರಲ್ಲಿ ಲಗತ್ತಿಸಲಾಗಿದೆ.
ಈ	ಗ್ರಾಮಾಂತರ ಪ್ರದೇಶದ ವಿಕಲಚೇತನರಿಗೆ ಪರಿಣಾಮಕಾರಿಯಾಗಿ ಸೌಲಭ್ಯಗಳನ್ನು ತಲುಪಿಸಲು ಸರ್ಕಾರ ಕೈಗೊಂಡ ಕ್ರಮಗಳೇನು? (ವಿವರ ನೀಡುವುದು)	• ವಿಕಲಚೇತನರಿಗೆ ಅವರ ವಾಸಸ್ಥಳದಲ್ಲಿಯೇ ಯೋಜನೆಗಳ ಸೌಲಭ್ಯಗಳನ್ನು ತಲುಪಿಸಲು ಇಲಾಖೆಯಿಂದ ಗ್ರಾಮೀಣ ಪುನರ್ವಸತಿ ಯೋಜನೆಯನ್ನು ಜಾರಿಗೊಳಿಸುತ್ತಿದೆ. • ಇಲಾಖೆಯು ಗ್ರಾಮೀಣ ಮಟ್ಟದಲ್ಲಿನ ವಿಕಲಚೇತನ ಗ್ರಾಮೀಣ ಪುನರ್ವಸತಿ ಕಾರ್ಯಕರ್ತರ ಮುಖಾಂತರ ಅವರ ವ್ಯಾಪ್ತಿಯಲ್ಲಿ ಬರುವ ಗ್ರಾಮ ಪಂಚಾಯತಿ ಮಟ್ಟದಲ್ಲಿನ ವಿಕಲಚೇತನರನ್ನು ಗುರುತಿಸಿ ಅವರುಗಳಿಗೆ ಯೋಜನಾ ಸೌಲಭ್ಯಗಳನ್ನು ಒದಗಿಸಲು ಕ್ರಮಕೈಗೊಳ್ಳ ಲಾಗಿದೆ. • ಗ್ರಾಮ ಪಂಚಾಯತಿ ಮಟ್ಟದಲ್ಲಿ ಗ್ರಾಮೀಣ ಪುನರ್ವಸತಿ ಕಾರ್ಯಕರ್ತರು ಈ ಇಲಾಖೆಯ ಸೌಲಭ್ಯಗಳಲ್ಲದೇ ಇತರೆ ಇಲಾಖೆಗಳಲ್ಲಿ ವಿಕಲಚೇತನರಿಗಾಗಿ ಇರುವ ಯೋಜನೆಗಳ ಮಾಹಿತಿಯನ್ನು ಸಹ ನೀಡುವುದರ ಜೊತೆಗೆ ಅವುಗಳನ್ನು ಪಡೆಯಲು ಸಹ ಸಹಕಾರಿಯಾಗಿ ಕಾರ್ಯ ನಿರ್ವಹಿಸುತ್ತಿದ್ದಾರೆ. • ತಾಲ್ಲೂಕು ಮಟ್ಟದಲ್ಲಿ ವಿಕಲಚೇತನರಾಗಿರುವ ವಿವಿಧ್ದೋದ್ದೇಶ ಪುನರ್ವಸತಿ ಕಾರ್ಯಕರ್ತರ ಮುಖಾಂತರ ಯೋಜನಾ ಸೌಲಭ್ಯಗಳನ್ನು ವಿಕಲಚೇತನರಿಗೆ ತಲುಪಿಸುವ ಕಾರ್ಯವನ್ನು ನಿರ್ವಹಿಸಲಾಗುತ್ತಿದೆ. • ನಗರ ಪ್ರದೇಶಗಳಲ್ಲಿ ನಗರ ಪುನರ್ವಸತಿ ಕಾರ್ಯಕರ್ತರ ಮುಖಾಂತರ ಯೋಜನಾ ಸೌಲಭ್ಯಗಳನ್ನು ವಿಕಲಚೇತನರಿಗೆ ತಲುಪಿಸುವ ಕಾರ್ಯವನ್ನು ನಿರ್ವಹಿಸಲಾಗುತ್ತಿದೆ.

		• ವಿಕಲಚೇತನರಿಗೆ ಇಲಾಖೆಯು ಅನುಷ್ಠಾನಗೊಳಿಸಿರುವ ಯೋಜನೆಗಳ ಸೌಲಭ್ಯ ಪಡೆಯಲು ಅನುಕೂಲವಾಗುವಂತೆ ಜಿಲ್ಲಾ ಮಟ್ಟದಲ್ಲಿ ಮಾಹಿತಿಗಳನ್ನು ಒದಗಿಸಲು ಜಿಲ್ಲಾ ಕಛೇರಿಗಳಲ್ಲಿ ಮಾಹಿತಿ ಸಲಹಾ ಕೇಂದ್ರಗಳನ್ನು ತೆರೆಯಲಾಗಿದೆ. • ಈ ಮೇಲೆ ತಿಳಿಸಿರುವ ಎಲ್ಲಾ ಕಾರ್ಯಕರ್ತರುಗಳು ಈ ಇಲಾಖೆಯ ಸೌಲಭ್ಯಗಳಲ್ಲದೇ ಇತರೆ ಇಲಾಖೆಗಳಲ್ಲಿ ವಿಕಲಚೇತನರಿಗಾಗಿ ಇರುವ ಯೋಜನೆಗಳ ಮಾಹಿತಿಯನ್ನು ಸಹ ನೀಡುವುದರ ಜೊತೆಗೆ ಅವುಗಳನ್ನು ಪಡೆಯಲು ಸಹ ಸಹಕಾರಿಯಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. • ಜೊತೆಗೆ ಪತ್ರಿಕಾ ಜಾಹಿರಾತು ಮೂಲಕ, ಆಕಾಶವಾಣಿ ದೂರದರ್ಶನದ ಮೂಲಕ ಇಲಾಖೆಯ ಯೋಜನೆಗಳ ಕುರಿತು ಪ್ರಚಾರವನ್ನು ನೀಡಲಾಗಿದೆ. ಇಲಾಖೆಯ ವೆಬ್‌ಸೈಟ್‌ನಲ್ಲಿ ಇಲಾಖೆಯ ಯೋಜನೆಗಳ ಮಾಹಿತಿಯನ್ನು ಸಹ ಒದಗಿಸಲಾಗಿದೆ. • ಯೋಜನೆಗಳ ಮಾಹಿತಿ ಒಳಗೊಂಡ IEC ಸಾಮಾಗ್ರಿಗಳಾದ Pamphlet, ಕಿರುಹೊತ್ತಿಗೆ ಹೊಂಬೆಳಕು ಕೈಪಿಡಿಗಳನ್ನು ಸಹ ಮುದ್ರಿಸಿ ಸಾರ್ವಜನಿಕರಿಗೆ ಯೋಜನೆಯ ಮಾಹಿತಿ ನೀಡಲಾಗುತ್ತಿದೆ.

ಸಂಖ್ಯೆ: ಮಮಇ 100 ಪಿಹೆಚ್‌ಪಿ 2021

(ಶಶಿಕಲಾ ಅ. ಜೊಲ್ಲೆ)
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ
ಸಚಿವರು

ಅನುಬಂಧ-01

ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯಿಂದ ವಿಕಲಚೇತನ ಹಾಗೂ ಹಿರಿಯ ನಾಗರಿಕರಿಗಾಗಿ ಅನುಷ್ಠಾನಗೊಳಿಸುತ್ತಿರುವ ಯೋಜನೆಗಳು

ವಿಕಲಚೇತನರಿಗಾಗಿ ಜಾರಿಗೊಳಿಸುತ್ತಿರುವ ಯೋಜನೆಗಳು

(ಎ) ಶೈಕ್ಷಣಿಕ:-

1) ಶ್ರವಣದೋಷವುಳ್ಳ ಮಕ್ಕಳಿಗಾಗಿ ವಸತಿಯುತ ಶಾಲೆಗಳು:

ಶ್ರವಣದೋಷವುಳ್ಳ ಮಕ್ಕಳಿಗಾಗಿ ಮೈಸೂರು, ಕಲಬುರ್ಗಿ, ಬಳ್ಳಾರಿ, ಬೆಳಗಾವಿ ಜಿಲ್ಲೆಗಳಲ್ಲಿ 4 ಕಿವುಡು ಮಕ್ಕಳ ವಸತಿ ಶಾಲೆಗಳನ್ನು ಇಲಾಖಾವತಿಯಿಂದ ನಡೆಸಲಾಗುತ್ತಿದೆ.ಈ ಶಾಲೆಗಳಲ್ಲಿ ಮಕ್ಕಳಿಗೆ ಉಚಿತ ವಸತಿ, ಊಟ ಮತ್ತು ಶಿಕ್ಷಣವನ್ನು ನೀಡಲಾಗುತ್ತಿದೆ.ಈ ಪೈಕಿ ಶ್ರವಣದೋಷವುಳ್ಳ ಹೆಣ್ಣು ಮಕ್ಕಳಿಗಾಗಿ ಬೆಳಗಾವಿಯಲ್ಲಿ ಪ್ರತ್ಯೇಕ ವಸತಿ ಶಾಲೆ ಇರುತ್ತದೆ.

2. ಅಂಧ ಮಕ್ಕಳಿಗಾಗಿ ವಸತಿಯುತ ಶಾಲೆಗಳು:

ಅಂಧ ಮಕ್ಕಳಿಗಾಗಿ ಕಲಬುರ್ಗಿ, ಮೈಸೂರು, ದಾವಣಗೆರೆ ಹಾಗೂ ಹುಬ್ಬಳ್ಳಿಯಲ್ಲಿ ವಿಶೇಷ ಶಾಲೆಗಳನ್ನು ನಡೆಸಲಾಗುತ್ತಿದೆ.ಈ ಶಾಲೆಗಳಲ್ಲಿ ದೃಷ್ಟಿದೋಷವುಳ್ಳ ಮಕ್ಕಳಿಗೆ ಉಚಿತ ಊಟ, ವಸತಿ ಮತ್ತು ಶಿಕ್ಷಣವನ್ನು ನೀಡಲಾಗುತ್ತಿದೆ.ಈ ಪೈಕಿ ದೃಷ್ಟಿದೋಷವುಳ್ಳ ಹೆಣ್ಣು ಮಕ್ಕಳಿಗಾಗಿ ದಾವಣಗೆರೆಯಲ್ಲಿ ಪ್ರತ್ಯೇಕ ವಸತಿ ಶಾಲೆ ಇರುತ್ತದೆ.

. 1982ರ ರಾಜ್ಯ ಅನುದಾನ ಸಂಹಿತೆಯಡಿ ನಡೆಯುತ್ತಿರುವ ವಿಶೇಷ ಶಾಲೆಗಳು:

(ಅ) 1982ರ ರಾಜ್ಯ ಅನುದಾನ ಸಂಹಿತೆಯಡಿ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಸ್ವಯಂ ಸೇವಾ ಸಂಸ್ಥೆಗಳ ಮೂಲಕ 34 ವಿಶೇಷ ಶಾಲೆ/ ತರಬೇತಿ ಕೇಂದ್ರಗಳನ್ನು ದೈಹಿಕ, ಅಂಧ, ಶ್ರವಣದೋಷ ಹಾಗೂ ಬುದ್ಧಿಮಾಂದ್ಯ ಮಕ್ಕಳಿಗಾಗಿ ನಡೆಸಲಾಗುತ್ತಿದೆ.ರಾಜ್ಯ ಸರ್ಕಾರದಿಂದ ಅನುದಾನವನ್ನು ಜಿಲ್ಲಾ ಪಂಚಾಯತ್ ಮೂಲಕ ಬಿಡುಗಡೆ ಮಾಡಲಾಗುತ್ತಿದೆ.

ವಿಕಲಚೇತನರಿಗೆ ವೃತ್ತಿ ತರಬೇತಿ ಕೇಂದ್ರಗಳು:

ಈ ಯೋಜನೆಯಡಿ ವಿವಿಧ ರೀತಿಯ ವಿಕಲಚೇತನರಿಗೆ ವೃತ್ತಿ ತರಬೇತಿಯನ್ನು ನೀಡುವುದಾಗಿದೆ.1982ರ ರಾಜ್ಯ ಅನುದಾನ ಸಂಹಿತೆಯಡಿ 5 ವೃತ್ತಿ ತರಬೇತಿ ಕೇಂದ್ರಗಳನ್ನು ರಾಜ್ಯ ಸಹಾಯಾನುದಾನದಡಿ ಬೆಂಗಳೂರಿನಲ್ಲಿ 03 ಮತ್ತು ಮೈಸೂರಿನಲ್ಲಿ 02 ಹಾಗೂ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಒಂದು ವಾಕ್ ಶ್ರವಣ ಕೇಂದ್ರವನ್ನು ಸ್ವಯಂ ಸೇವಾ ಸಂಸ್ಥೆಗಳ ಮೂಲಕ ನಡೆಸಲಾಗುತ್ತಿದೆ. ವೃತ್ತಿ ತರಬೇತಿ ಕೇಂದ್ರಗಳಲ್ಲಿ ವಿವಿಧ ರೀತಿಯ ವಿಕಲಚೇತನರಿಗೆ ಫಿಟ್ಟರ್, ಟರ್ನರ್, ಸರಳ ಇಂಜಿನಿಯರಿಂಗ್, ಬೆತ್ತ, ಹಗ್ಗ, ಚಾಪೆ ಹೆಣೆಯುವುದು ಹಾಗೂ ಪ್ಲಾಸ್ಟಿಕ್ ಮೌಲ್ಡಿಂಗ್ ತರಬೇತಿಯನ್ನು ನೀಡಲಾಗುತ್ತಿದೆ.ಪ್ರತಿ ತರಬೇತಿ ಕೇಂದ್ರದಲ್ಲಿ ವಾರ್ಷಿಕ 25 ಫಲಾನುಭವಿಗಳು ತರಬೇತಿ ಪಡೆಯಲು ಅವಕಾಶವಿರುತ್ತದೆ.

(ಆ)ಅಂಗವಿಕಲ ಮಕ್ಕಳ ಕೇಂದ್ರೀಕೃತ ವಿಶೇಷ ಶೈಕ್ಷಣಿಕ ಯೋಜನೆ:

ಈ ಯೋಜನೆಯಡಿ ಬುದ್ಧಿಮಾಂದ್ಯ (ಸೆರಬ್ರಲ್ ಪಾಲ್ಸಿ, ಆಟಿಸಂ), ದೃಷ್ಟಿದೋಷ, ಶ್ರವಣದೋಷವುಳ್ಳ ಮಕ್ಕಳಿಗಾಗಿ ವಸತಿಯುತ ಹಾಗೂ ವಸತಿರಹಿತ ಶಾಲೆಗಳು ಸೇರಿದಂತೆ ಒಟ್ಟು 138 ವಿಶೇಷ ಶಾಲೆಗಳು ಸ್ವಯಂ ಸೇವಾ ಸಂಸ್ಥೆಗಳ ಮೂಲಕ ನಡೆಯುತ್ತಿವೆ. ಮಕ್ಕಳ ಸಂಖ್ಯೆಗೆ ಅನುಗುಣವಾಗಿ ಶ್ರವಣದೋಷವುಳ್ಳ ಹಾಗೂ ದೃಷ್ಟಿದೋಷವುಳ್ಳ ಮಕ್ಕಳ ವಸತಿಯುತ ಶಾಲೆಯಲ್ಲಿ ವ್ಯಾಸಂಗ ಮಾಡುತ್ತಿರುವ ಪ್ರತಿ ಮಗುವಿನ ನಿರ್ವಹಣೆಗೆ ಮಾಹೆಯಾನ ತಲಾ ರೂ.6200/- ರಂತೆ ಹಾಗೂ ವಸತಿರಹಿತ ಶಾಲೆಯಲ್ಲಿ ವ್ಯಾಸಂಗ ಮಾಡುತ್ತಿರುವ ಪ್ರತಿ ಮಗುವಿನ ನಿರ್ವಹಣೆಗೆ ಮಾಹೆಯಾನ ತಲಾ ರೂ.5200/- ರಂತೆ ಹಾಗೂ ಬುದ್ಧಿಮಾಂದ್ಯ ಮಕ್ಕಳ ಮಕ್ಕಳ ವಸತಿಯುತ ಶಾಲೆಯಲ್ಲಿ ವ್ಯಾಸಂಗ ಮಾಡುತ್ತಿರುವ ಪ್ರತಿ ಮಗುವಿನ ನಿರ್ವಹಣೆಗೆ ಮಾಹೆಯಾನ ತಲಾ ರೂ.6800/- ರಂತೆ ಹಾಗೂ ವಸತಿರಹಿತ ಶಾಲೆಯಲ್ಲಿ ವ್ಯಾಸಂಗ ಮಾಡುತ್ತಿರುವ ಪ್ರತಿ ಮಗುವಿನ ನಿರ್ವಹಣೆಗೆ ಮಾಹೆಯಾನ ತಲಾ ರೂ. 6000/- ರಂತೆ ವರ್ಷದಲ್ಲಿ 10 ತಿಂಗಳ ಅವಧಿಗೆ ಅನುದಾನವನ್ನು ಮಂಜೂರು ಮಾಡಲಾಗುತ್ತಿದೆ.ಈ ಅನುದಾನದಲ್ಲಿ ಶಿಕ್ಷಕರ ಗೌರವಧನ, ಮಕ್ಕಳ ಆಹಾರ ವೆಚ್ಚ, ಕಟ್ಟಡದ ಬಾಡಿಗೆ ಹಾಗೂ ನಿರ್ವಹಣಾ ವೆಚ್ಚ, ಸಮವಸ್ತ್ರ, ವೈದ್ಯಕೀಯ ವೆಚ್ಚ ಹಾಗೂ ಸಾದಿಲ್ವಾರು ವೆಚ್ಚಗಳು ಒಳಗೊಂಡಿರುತ್ತವೆ.

(ಇ) ಕೇಂದ್ರ ಸರ್ಕಾರದ ದೀನ್‌ದಯಾಳ್ ಪುನರ್ವಸತಿ ಯೋಜನೆಯಡಿ 8 ಸ್ವಯಂ ಸೇವಾ ಸಂಸ್ಥೆಗಳ ಮೂಲಕ ವಿಶೇಷ ಶಾಲೆ /ವೃತ್ತಿ ತರಬೇತಿ ಕೇಂದ್ರಗಳು ನಡೆಯುತ್ತಿದ್ದು, ಸದರಿ ಶಾಲೆ ಹಾಗೂ ತರಬೇತಿ ಕೇಂದ್ರಗಳಿಗೆ ಕೇಂದ್ರ ಸರ್ಕಾರದಿಂದ ಶೇ.90ರಷ್ಟು ಅನುದಾನವನ್ನು ಮಂಜೂರು ಮಾಡಲಾಗುತ್ತಿದ್ದು, ಉಳಿದ ಶೇ.10ರಷ್ಟು ವೆಚ್ಚವನ್ನು ಸಂಸ್ಥೆಯವರು ಭರಿಸಬೇಕಾಗಿರುತ್ತದೆ.

4. ಅಂಗವಿಕಲ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ಮತ್ತು ಪ್ರೋತ್ಸಾಹಧನ:

ಈ ಯೋಜನೆಯಡಿ ಒಂದನೇ ತರಗತಿಯಿಂದ ಸ್ನಾತಕೋತ್ತರ ಪದವಿಯವರೆಗೆ ವ್ಯಾಸಂಗ ಮಾಡುತ್ತಿರುವ ಅರ್ಹ ವಿಕಲಚೇತನ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನವನ್ನು ಆಯಾ ಜಿಲ್ಲಾ ಕಛೇರಿಗಳ ಮೂಲಕ ಮಂಜೂರು ಮಾಡಲಾಗುತ್ತಿದೆ. 2001-02ನೇ ಸಾಲಿನಿಂದ ಈ ಯೋಜನೆಯ ಫಲಾನುಭವಿಗಳಿಗೆ ಆದಾಯ ಮಿತಿಯಿಂದ ವಿನಾಯಿತಿಗೊಳಿಸಲಾಗಿದೆ.

ಪ್ರತಿಭಾವಂತ ಅಂಗವಿಕಲ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಧನ ಯೋಜನೆ:

ಸಾರ್ವತ್ರಿಕ ಪರೀಕ್ಷೆಗಳಲ್ಲಿ ಶೇಕಡ 60 ಕ್ಕಿಂತಲೂ ಹೆಚ್ಚಿನ ಅಂಕಗಳನ್ನು ಪಡೆದ ಪ್ರತಿಭಾನ್ವಿತ ವಿಕಲಚೇತನ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಧನ ನೀಡುವ ಯೋಜನೆ ಇದಾಗಿದೆ.ಈ ಯೋಜನೆಯನ್ನು 2001-02ನೇ ಸಾಲಿನಿಂದ ಬಿ.ಎಡ್, ಎಂ.ಎಡ್. ಮತ್ತು ಟಿ.ಸಿ.ಹೆಚ್. ವಿದ್ಯಾರ್ಥಿಗಳಿಗೂ ವಿಸ್ತರಿಸಲಾಗಿದೆ.

ಉನ್ನತ ಶಿಕ್ಷಣ ಪಡೆಯುವ ವಿಕಲಚೇತನರಿಗೆ ಶುಲ್ಕ ಮರುಪಾವತಿ:

ಉನ್ನತ ಶಿಕ್ಷಣ ಪಡೆಯುವ ವಿಕಲಚೇತನರಿಗೆ ಎಸ್.ಎಸ್.ಎಲ್.ಸಿ ನಂತರ ಉನ್ನತ ಶಿಕ್ಷಣ, ವೃತ್ತಿ ಶಿಕ್ಷಣ, ತಾಂತ್ರಿಕ ಶಿಕ್ಷಣ, ಸ್ನಾತಕೋತ್ತರ, ಔದ್ಯೋಗಿಕ ಶಿಕ್ಷಣಗಳಿಗೆ ನಿಯಮಾನುಸಾರ ಆಯ್ಕೆಯಾಗುವ ವಿದ್ಯಾರ್ಥಿಗಳಿಗೆ ಸರ್ಕಾರವು ನಿಗದಿಪಡಿಸಿರುವ ಪರೀಕ್ಷಾ ಶುಲ್ಕ ಬೋಧನಾ ಶುಲ್ಕ, ಪ್ರಯೋಗಾಲಯ ಶುಲ್ಕ, ಕ್ರೀಡಾ ಶುಲ್ಕ ಹಾಗೂ ಗ್ರಂಥಾಲಯ ಶುಲ್ಕಗಳನ್ನು ಮರುಪಾವತಿಸುವ ಯೋಜನೆಯನ್ನು 2013-14ನೇ ಸಾಲಿನಿಂದ ಅನುಷ್ಠಾನಗೊಳಿಸಲಾಗುತ್ತಿದೆ. ಈ ಯೋಜನೆಯಡಿ ಸೌಲಭ್ಯ ಪಡೆಯುವ ವಿದ್ಯಾರ್ಥಿಗಳಿಗೆ ಯಾವುದೇ ಆದಾಯಮಿತಿ ಇರುವುದಿಲ್ಲ. ವೈದ್ಯಕೀಯ ಮಂಡಳಿಯವರು ಶಿಫಾರಸ್ಸು ಮಾಡಿರುವ ವಿಕಲಚೇತನ ಅಭ್ಯರ್ಥಿಗಳು ಮಾತ್ರ ಈ ಯೋಜನೆಯಡಿ ಸೌಲಭ್ಯ ಪಡೆಯಲು ಅರ್ಹರಾಗಿರುತ್ತಾರೆ

ಬ್ರೈಲ್ ಮುದ್ರಣಾಲಯ:

ದೃಷ್ಟಿದೋಷವುಳ್ಳ ಮಕ್ಕಳಿಗೆ ಬೇಕಾಗುವ ಬ್ರೈಲ್ ಪುಸ್ತಕಗಳನ್ನು ಮುದ್ರಿಸಿ ಸಂಬಂಧಪಟ್ಟ ಅಂಧರ ಶಾಲೆಗಳಿಗೆ ಮೈಸೂರಿನಲ್ಲಿರುವ ಬ್ರೈಲ್ ಮುದ್ರಣಾಲಯದ ಮೂಲಕ ಉಚಿತವಾಗಿ ಸರಬರಾಜು ಮಾಡಲಾಗುತ್ತಿದೆ.

8. **ವಿಶೇಷ ಶಿಕ್ಷಣ ತರಬೇತಿ ಕೇಂದ್ರ ಯೋಜನೆ:**

ದೃಷ್ಟಿದೋಷವುಳ್ಳ ಹಾಗೂ ಶ್ರವಣದೋಷವುಳ್ಳ ವಿದ್ಯಾರ್ಥಿಗಳಿಗೆ ಬೋಧಿಸುವ ಶಿಕ್ಷಕರಿಗೆ ವಿಶೇಷ ಶಿಕ್ಷಣ ನೀಡಲು ತಲಾ ಒಂದರಂತೆ ವಿಶೇಷ ಶಿಕ್ಷಕರ ತರಬೇತಿ ಕೇಂದ್ರವನ್ನು ಮೈಸೂರಿನಲ್ಲಿ ನಡೆಸುತ್ತಿದ್ದು, ಪ್ರತಿ ವರ್ಷ ಪ್ರತಿ ಕೇಂದ್ರದಲ್ಲಿ 25 ಪ್ರಶಿಕ್ಷಣಾರ್ಥಿಗಳು ತರಬೇತಿ ಪಡೆಯಲು ಅವಕಾಶವಿರುತ್ತದೆ.

9. **ಮಾನಸಿಕ ಅಸ್ವಸ್ಥ, ಸೆರಬ್ರಲ್ ಪಾಲ್ಸಿ, ಆಟಿಸಂ ಮಕ್ಕಳ ಹಗಲು ಯೋಗಕ್ಷೇಮ ಕೇಂದ್ರಗಳು:** ಸೆರಬ್ರಲ್ ಪಾಲ್ಸಿ, ಆಟಿಸಂ, ಮಾನಸಿಕ ಅಸ್ವಸ್ಥ ಹಾಗೂ ತೀವ್ರತರದ ಅಂಗವೈಕಲ್ಯತೆ ಹೊಂದಿರುವ ಮೂರರಿಂದ 25 ವರ್ಷದ ಒಳಗಿನ ಮಕ್ಕಳಿಗಾಗಿ 02 ಹಗಲು ಯೋಗಕ್ಷೇಮ ಕೇಂದ್ರಗಳನ್ನು ಬೆಂಗಳೂರು ನಗರ ಜಿಲ್ಲೆಯಲ್ಲಿ ಸ್ವಯಂ ಸೇವಾ ಸಂಸ್ಥೆಗಳ ಮೂಲಕ ನಡೆಸುತ್ತಿದ್ದು, ಪ್ರತಿ ಕೇಂದ್ರದಲ್ಲಿ 25 ಮಕ್ಕಳನ್ನು ದಾಖಲಿಸಲು ಅವಕಾಶವಿದ್ದು, ಪ್ರತಿ ಮಗುವಿಗೆ ಮಾಸಿಕ ರೂ.10,000/-ಗಳಂತೆ ವಾರ್ಷಿಕ 25.00 ಲಕ್ಷಗಳನ್ನು ಮಂಜೂರು ಮಾಡಲಾಗುತ್ತಿದೆ.

(ಬಿ) ಉದ್ಯೋಗ ಮತ್ತು ತರಬೇತಿ:

2. ಅಂಗವಿಕಲ ಪುರುಷ ಹಾಗೂ ಮಹಿಳೆಯರ ವಸತಿನಿಲಯ:

ಬೆಂಗಳೂರಿನ ಕೆಂಗೇರಿಯಲ್ಲಿ ವಿಕಲಚೇತನ ಮಹಿಳೆ ಮತ್ತು ವಿಕಲಚೇತನ ಪುರುಷರಿಗಾಗಿ ಅಂಗವಿಕಲ ಉದ್ಯೋಗಸ್ಥ ನೌಕರರು ಮತ್ತು ಪ್ರಶಿಕ್ಷಣಾರ್ಥಿಗಳಿಗಾಗಿ ಮಹಿಳೆಯರು ಹಾಗೂ ಪುರುಷರಿಗಾಗಿ ಪ್ರತ್ಯೇಕವಾದ ವಸತಿ ನಿಲಯವನ್ನು ಬೆಂಗಳೂರು ನಗರ ಜಿಲ್ಲೆಯಲ್ಲಿ ನಡೆಸಲಾಗುತ್ತಿದೆ. ಪ್ರಸ್ತುತ ಈ ಎರಡೂ ವಸತಿ ನಿಲಯಗಳು ಬೆಂಗಳೂರಿನ ಕೆಂಗೇರಿಯಲ್ಲಿ ನಡೆಯುತ್ತಿವೆ. ಪ್ರತಿ ವಸತಿ ನಿಲಯದಲ್ಲಿ 50 ನಿವಾಸಿಗಳನ್ನು ದಾಖಲಿಸಲು ಅವಕಾಶವಿರುತ್ತದೆ.

3. ಆಧಾರ ಯೋಜನೆ :

ವಿಕಲಚೇತನರು ಸ್ವಯಂ ಉದ್ಯೋಗ ಕೈಗೊಂಡು ಜೀವನ ಸಾಗಿಸಲು ಅನುಕೂಲವಾಗುವಂತೆ ಆಧಾರ ಎಂಬ ಸಾಲ ಯೋಜನೆಯನ್ನು ಜಿಲ್ಲಾ ಮಟ್ಟದಲ್ಲಿ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳ ನೇತೃತ್ವದಲ್ಲಿ ಜಾರಿಗೊಳಿಸಲಾಗುತ್ತಿದೆ.ಈ ಯೋಜನೆಯಡಿ ರೂ.1.00 ಲಕ್ಷ ರೂ.ಗಳ ಸಹಾಯಧನವನ್ನು ನೀಡಲು ಅವಕಾಶವಿದ್ದು, ಇದರಲ್ಲಿ ಶೇ.50ರಷ್ಟು ಬಡ್ಡಿ ಸಹಿತವಾಗಿ ಬ್ಯಾಂಕ್ ಸಾಲ ಮತ್ತು ಶೇ.50ರಷ್ಟು ಸಹಾಯಧನ ಒದಗಿಸಲಾಗುವುದು.

4. ಗ್ರಾಮೀಣ ಪುನರ್ವಸತಿ ಯೋಜನೆ:

ಈ ಯೋಜನೆಯನ್ನು ರಾಜ್ಯದ ಎಲ್ಲಾ 30 ಜಿಲ್ಲೆಗಳ 176 ತಾಲ್ಲೂಕುಗಳಲ್ಲಿ ಅನುಷ್ಠಾನ ಗೊಳಿಸಲಾಗುತ್ತಿದೆ.ಪ್ರತಿ ಗ್ರಾಮ ಪಂಚಾಯತಿ ಅಡಿಯಲ್ಲಿ ಎಸ್.ಎಸ್.ಎಲ್.ಸಿ. ಉತ್ತೀರ್ಣ/ ಅನುತ್ತೀರ್ಣರಾದ ಸಮರ್ಥ ವಿಕಲಚೇತನರನ್ನು ಗ್ರಾಮೀಣ ಪುನರ್ವಸತಿ ಕಾರ್ಯಕರ್ತರೆಂದು ಹಾಗೂ ತಾಲ್ಲೂಕು ಪಂಚಾಯಿತಿ ಕಚೇರಿಯಲ್ಲಿ ಸ್ಥಳೀಯ ಸಮರ್ಥ ಪದವೀಧರ ವಿಕಲಚೇತನರೊಬ್ಬರನ್ನು ವಿವಿಧೋದ್ದೇಶ ಪುನರ್ವಸತಿ

ಕಾರ್ಯಕರ್ತರೆಂದು, ಸ್ಥಳೀಯ ನಗರ ಪ್ರದೇಶಗಳಲ್ಲಿ ನಗರ ಪುನರ್ವಸತಿ ಕಾರ್ಯಕರ್ತರೆಂದು ಮತ್ತು ನಿರ್ದೇಶನಾಲಯದಲ್ಲಿ ರಾಜ್ಯ ಸಂಯೋಜಕರನ್ನು ಗೌರವಧನ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲಾಗಿದೆ. ಈ ಕಾರ್ಯಕರ್ತರ ಮೂಲಕ ವಿಕಲಚೇತನರಿಗೆ ಎಲ್ಲಾ ಸೇವಾ ಸೌಲಭ್ಯಗಳನ್ನು ಅವರಿರುವ ಸ್ಥಳಗಳಲ್ಲಿಯೇ ವಿಕಲಚೇತನರ ಮೂಲಕವೇ ತಲುಪಿಸಲಾಗುವುದು.

ಸರ್ಕಾರದ ಆದೇಶ ಸಂಖ್ಯೆ:ಮಮಇ/241/ಪಿಹೆಚ್‌ಪಿ/2019, ದಿನಾಂಕ: 07-02--2020ರಂತೆ ಗ್ರಾಮೀಣ ಪುನರ್ವಸತಿ ಕಾರ್ಯಕರ್ತರು ಹಾಗೂ ನಗರ ಪುನರ್ವಸತಿ ಕಾರ್ಯಕರ್ತರುಗಳ ಗೌರವಧನವನ್ನು ರೂ.3000/-ಗಳಿಂದ ರೂ.6000/-ಗಳಿಗೆ ಹಾಗೂ ವಿವಿದ್ದೊದ್ದೇಶ ಪುನರ್ವಸತಿ ಕಾರ್ಯಕರ್ತರ ಗೌರವಧನವನ್ನು ರೂ.6000/-ಗಳಿಂದ ರೂ.12,000/-ಗಳಿಗೆ ಹೆಚ್ಚಿಸಿ ಆದೇಶ ಹೊರಡಿಸಲಾಗಿದೆ.

<u>ಮರಣ ಪರಿಹಾರ ನಿಧಿ ಯೋಜನೆ:</u> ಗ್ರಾಮೀಣ ಪುನರ್ವಸತಿ ಯೋಜನೆಯಡಿ ಕಾರ್ಯನಿರ್ವಹಿಸುತ್ತಿರುವ ಕಾರ್ಯಕರ್ತರು ನಿಧನ ಹೊಂದಿದ್ದಲ್ಲಿ ರೂ.50,000/-ಗಳ ಪರಿಹಾರ ಧನ ನೀಡಲು ಅವಕಾಶವಿರುತ್ತದೆ.

5. ಉದ್ಯೋಗಸ್ಥ ವಿಕಲಚೇತನ ಮಹಿಳೆಯರಿಗೆ ವಸತಿ ನಿಲಯಗಳು:

ಅಂಗವಿಕಲ ಉದ್ಯೋಗಸ್ಥ ಮಹಿಳೆಯರಿಗಾಗಿ ಹಾಗೂ ವಿದ್ಯಾರ್ಥಿನಿ/ತರಬೇತಾರ್ಥಿಗಳಿಗೆ ಸ್ವಯಂ ಸೇವಾ ಸಂಸ್ಥೆಗಳ ಮೂಲಕ 25 ಜಿಲ್ಲೆಗಳಲ್ಲಿ ಮಹಿಳಾ ವಸತಿ ನಿಲಯಗಳು (ಬೆಂಗಳೂರು ನಗರ ಜಿಲ್ಲೆಯಲ್ಲಿ 4 ವಸತಿ ನಿಲಯಗಳು) ನಡೆಯುತ್ತಿವೆ. ಸದರಿ ವಸತಿ ನಿಲಯದಲ್ಲಿ ಉದ್ಯೋಗಸ್ಥ ವಿಕಲಚೇತನ ಮಹಿಳೆಯರಿಗೆ ಮತ್ತು ವಿದ್ಯಾರ್ಥಿನಿಯರಿಗೆ ಹಾಗೂ ತರಬೇತಿದಾರರಿಗೆ ವಸತಿ ಸೌಲಭ್ಯವನ್ನು ಕಲ್ಪಿಸಲಾಗಿದೆ. ಸದರಿ ವಸತಿ ನಿಲಯದಲ್ಲಿ ವಿದ್ಯಾರ್ಥಿನಿಯರು ಹಾಗೂ ತರಬೇತಿದಾರರಿಗೆ ಉಚಿತ ಊಟದ ವ್ಯವಸ್ಥೆಯಿದ್ದು, ಉದ್ಯೋಗಸ್ಥ ಮಹಿಳೆಯರು ಮಾಸಿಕ 800/-ಗಳನ್ನು ಪಾವತಿಸಬೇಕಾಗಿರುತ್ತದೆ. ರಾಮನಗರ, ದಾವಣಗೆರೆ, ರಾಯಚೂರು, ಉತ್ತರ ಕನ್ನಡ ಹಾಗೂ ಚಿಕ್ಕಮಗಳೂರು ಈ ಜಿಲ್ಲೆಗಳಲ್ಲಿ ಆಡಳಿತಾತ್ಮಕ ಕಾರಣಗಳಿಂದ ವಸತಿ ನಿಲಯಗಳನ್ನು ನಡೆಯುತ್ತಿಲ್ಲ.

ಸಿ. ಸಾಮಾಜಿಕ ಭದ್ರತಾ ಯೋಜನೆಗಳು:

1. ಸಮಾಜ ಸೇವಾ ಸಂಕೀರ್ಣ:

ನಿರ್ಗತಿಕ ಬುದ್ಧಿಮಾಂದ್ಯ ಪುರುಷರಿಗಾಗಿ ಸಮಾಜ ಸೇವಾ ಸಂಕೀರ್ಣ ಸಂಸ್ಥೆಯು ಬೆಂಗಳೂರಿನಲ್ಲಿ ಸರ್ಕಾರದ ವತಿಯಿಂದ ನಡೆಯುತ್ತಿದ್ದು, ಈ ಸಂಸ್ಥೆಯಲ್ಲಿ ಉಚಿತ ಊಟ, ವಸತಿ, ವೈದ್ಯಕೀಯ ಸೌಲಭ್ಯ, ಸಂರಕ್ಷಣೆ ಒದಗಿಸಲಾಗುತ್ತಿದೆ. ಪ್ರಸ್ತುತ ಸಂಸ್ಥೆಯಲ್ಲಿ 85 ನಿವಾಸಿಗಳು ದಾಖಲಾಗಿರುತ್ತಾರೆ.

2. ಮಂದಮತಿ ಮಹಿಳೆಯರ ಅನುಪಾಲನಾ ಗೃಹ:

18 ವರ್ಷ ಮೇಲ್ಪಟ್ಟ ನಿರ್ಗತಿಕ ಮಹಿಳಾ ಬುದ್ಧಿಮಾಂದ್ಯರಿಗೆ ಉಚಿತ ಊಟ, ವಸತಿ, ವೈದ್ಯಕೀಯ ಸೌಲಭ್ಯ ಮತ್ತು ಸಂರಕ್ಷಣೆ ಒದಗಿಸುವ ಉದ್ದೇಶದಿಂದ ಮಂದಮತಿ ಮಹಿಳೆಯರ ಅನುಪಾಲನಾ ಗೃಹಗಳನ್ನು ಬೆಂಗಳೂರು ನಗರ ಹಾಗೂ ಹುಬ್ಬಳ್ಳಿಯಲ್ಲಿ ಇಲಾಖಾವತಿಯಿಂದ ನಡೆಸಲಾಗುತ್ತಿದೆ. ಪ್ರಸ್ತುತ ಬೆಂಗಳೂರು ಅನುಪಾಲನಾ ಕೇಂದ್ರದಲ್ಲಿ 100 ಮಂದಿ ಹಾಗೂ ಹುಬ್ಬಳ್ಳಿ ಅನುಪಾಲನ ಕೇಂದ್ರದಲ್ಲಿ 70 ನಿವಾಸಿಗಳು ದಾಖಲಾಗಿರುತ್ತಾರೆ.

3. ಮಾನಸಿಕ ಅಸ್ವಸ್ಥರಿಗೆ ಮಾನಸ ಕೇಂದ್ರಗಳು:

ಮಾನಸಿಕ ಅಸ್ವಸ್ಥರಿಗಾಗಿ ಮಾನಸ ಕೇಂದ್ರಗಳನ್ನು ಬೆಂಗಳೂರು ನಗರ ಹಾಗೂ ಬೆಳಗಾವಿ ಜಿಲ್ಲೆಗಳಲ್ಲಿ ನಡೆಸುತ್ತಿದ್ದು, ರಾಜ್ಯ ಉಚ್ಚ ನ್ಯಾಯಾಲಯ ಮತ್ತು ಅಧೀನ ನ್ಯಾಯಾಲಯಗಳಿಂದ ಆದೇಶಿಸಲ್ಪಡುವ ಮಾನಸಿಕ ಅಸ್ವಸ್ಥರನ್ನು ಹಾಗೂ ರಸ್ತೆಗಳಲ್ಲಿ ಓಡಾಡುವ ನಿರ್ಗತಿಕ ಮಾನಸಿಕ ಅಸ್ವಸ್ಥರನ್ನು ಈ ಕೇಂದ್ರಗಳಲ್ಲಿ ನಿರ್ದಿಷ್ಟ ವೈದ್ಯಕೀಯ ಪ್ರಾಧಿಕಾರದ ಆದೇಶದ ಮೇರೆಗೆ ದಾಖಲಿಸಲು ಅವಕಾಶವಿರುತ್ತದೆ. ಈ ಕೇಂದ್ರಗಳಲ್ಲಿ ಫಲಾನುಭವಿಗಳಿಗೆ ಉಚಿತ ಊಟ, ವಸತಿ, ವೈದ್ಯಕೀಯ ಶುಶ್ರೂಷೆ, ವೈದ್ಯಕೀಯ ಸಲಹೆ(ಕೌನ್ಸಲಿಂಗ್) ಸೌಲಭ್ಯವನ್ನು ನೀಡಲಾಗುತ್ತಿದ್ದು, ಇವು ಅಲ್ಪಾವಧಿ ಕೇಂದ್ರಗಳಾಗಿರುತ್ತವೆ.

4. ಬುದ್ಧಿಮಾಂದ್ಯ ಮಕ್ಕಳ ಪೋಷಕರಿಗೆ ವಿಮಾ ಯೋಜನೆ:

ಬುದ್ಧಿಮಾಂದ್ಯ ಮಕ್ಕಳ/ವ್ಯಕ್ತಿಗಳ ತಂದೆ: ತಾಯಿ: ಪೋಷಕರ ವಿಮಾ ಯೋಜನೆಯನ್ನು ಭಾರತೀಯ ಜೀವ ವಿಮಾ ನಿಗಮದ ಮೂಲಕ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದ್ದು, ಬುದ್ಧಿಮಾಂದ್ಯ ಮಕ್ಕಳ/ವ್ಯಕ್ತಿಗಳ ತಂದೆ:ತಾಯಿ: ಪೋಷಕರು ಮರಣ ಹೊಂದಿದ ನಂತರ ಬುದ್ಧಿಮಾಂದ್ಯ ಮಕ್ಕಳ ಜೀವನ ನಿರ್ವಹಣೆಗಾಗಿ ರೂ.20,000/-ಗಳ ಪರಿಹಾರ ಧನವನ್ನು ಕುಟುಂಬದ ನಾಮ ನಿರ್ದೇಶಿತ ಸದಸ್ಯರಿಗೆ ಪಾವತಿಸಲಾಗುತ್ತಿದೆ.

5. ವಿಕಲಚೇತನ ವ್ಯಕ್ತಿಗಳನ್ನು ಸಾಮಾನ್ಯರು ಮದುವೆಯಾದಲ್ಲಿ ಪ್ರೋತ್ಸಾಹ ಧನ ನೀಡುವ ಯೋಜನೆ:

ವಿಕಲಚೇತನ ಯುವಕ/ಯುವತಿಯರನ್ನು ವಿವಾಹವಾಗುವ ಸಾಮಾನ್ಯ ಯುವಕ/ ಯುವತಿಯರಿಗೆ ನಿರಂತರವಾಗಿ ಮಾಸಿಕ ಆದಾಯ ದೊರಕಿಸಲು ವಿಕಲಚೇತನ ವ್ಯಕ್ತಿಯ ಹೆಸರಿನಲ್ಲಿ ರೂ.50,000/-ಗಳನ್ನು ಮದುವೆಯಾದ ಸಾಮಾನ್ಯ ವ್ಯಕ್ತಿ ಹಾಗೂ ವಿಕಲಚೇತನರ ಜಂಟಿ ಹೆಸರಿನಲ್ಲಿ 05 ವರ್ಷದ ಅವಧಿಗೆ ಹೂಡಿಕೆಯ ರೂಪದಲ್ಲಿ ನೀಡಿ ಪ್ರೋತ್ಸಾಹ ನೀಡಲು ಹಾಗೂ ಅದರಿಂದ ಬರುವ ಬಡ್ಡಿ ಹಣವನ್ನು ಉಪಯೋಗಿಸುವುದು ಹಾಗೂ 05 ವರ್ಷಗಳ ನಂತರ ಠೇವಣಿ ಮೊತ್ತವನ್ನು ವಾಪಸ್ಸು ಪಡೆಯಬಹುದು ಅಥವಾ ಮುಂದುವರೆಸಲು ಅವಕಾಶವಿರುತ್ತದೆ.

6. ಅಂಧ ಮಹಿಳೆಯರಿಗೆ ಜನಿಸುವ ಮಕ್ಕಳಿಗೆ ಆರೈಕೆ ಭತ್ಯೆ ಒದಗಿಸುವ ಯೋಜನೆ :

ಅಂಧ ಮಹಿಳೆಯರು ಮಗುವಿಗೆ ಜನ್ಮ ನೀಡಿದಾಗ ಆ ಮಗುವನ್ನು ಇತರೆ ಸಾಮಾನ್ಯ ತಾಯಂದಿರಂತೆ ಆರೈಕೆ ಮಾಡುವುದು ಕಷ್ಟಕರವಾಗಿರುತ್ತದೆ.ಇಂತಹ ಅಂಧ ಮಹಿಳೆಯರಿಗೆ ಜನಿಸುವ ಮಕ್ಕಳಿಗೆ ಆರೈಕೆ ಮಾಡಲು ಆಯಾ ಸೇವೆ, ಆರೋಗ್ಯ ಪಾಲನೆ, ಪೌಷ್ಟಿಕ ಆಹಾರ, ಔಷಧೋಪಚಾರಗಳಿಗೆ ಮಾಹೆಯಾನ ರೂ.2000/- ದಂತೆ **5** ವರ್ಷಗಳ ಅವಧಿಗೆ ಸಹಾಯಧನವನ್ನು ನೀಡಲಾಗುತ್ತಿದೆ.ಈ ಸೌಲಭ್ಯವನ್ನು ಕನಿಷ್ಠ 2 ಮಕ್ಕಳವರೆಗೆ ಪಡೆಯಬಹುದಾಗಿದೆ.

(ಡಿ) ಪುನರ್ವಸತಿ ಯೋಜನೆಗಳು:

1. ಅಂಗವಿಕಲರಿಗೆ ಸಾಧನ ಸಲಕರಣೆಗಳು :

ಈ ಯೋಜನೆಯಡಿಯಲ್ಲಿ ಅಂಗವಿಕಲರಿಗೆ ಅವಶ್ಯವಾಗಿರುವ ಸಾಧನ ಸಲಕರಣೆಗಳನ್ನು ನೀಡಲಾಗುತ್ತಿದೆ. ಫಲಾನುಭವಿಯ ಕುಟುಂಬದ ವಾರ್ಷಿಕ ಆದಾಯ ಮಿತಿಯನ್ನು ಗ್ರಾಮೀಣ ಪ್ರದೇಶದ ಫಲಾನುಭವಿಗಳಿಗೆ ರೂ.11,500/- ಮತ್ತು ನಗರ ಪ್ರದೇಶದ ಫಲಾನುಭವಿಗಳಿಗೆ ರೂ.24,000/- ನಿಗದಿಗೊಳಿಸಲಾಗಿದೆ. ಈ ಯೋಜನೆಯಡಿ ರೂ.15,000/-ಗಳ ಮಿತಿಯೊಳಗೆ ವಿಕಲಚೇತನರಿಗೆ

ಅವಶ್ಯವಿರುವ ಕ್ಯಾಲಿಪರ್ಸ್, ಕ್ರಚರ್ಸ್, ಶ್ರವಣ ಸಾಧನ, ವೈಟ್ ಕೇನ್, ಬ್ರೈಲ್ ವಾಚ್ ಇನ್ನಿತರ ಸಲಕರಣೆಗಳನ್ನು ಉಚಿತವಾಗಿ ನೀಡಲಾಗುತ್ತಿದೆ.

ಅ. **ಅಂಧ ವಿದ್ಯಾರ್ಥಿಗಳಿಗೆ ಟಾಕಿಂಗ್ ಲ್ಯಾಪ್‌ಟಾಪ್ ಯೋಜನೆ :**

ಎಸ್.ಎಸ್.ಎಲ್.ಸಿ ನಂತರ ವ್ಯಾಸಂಗ ಮಾಡುವ ದೃಷ್ಟಿದೋಷವುಳ್ಳ ವಿಕಲಚೇತನ ವಿದ್ಯಾರ್ಥಿಗಳು ಇತ್ತೀಚಿನ ತಂತ್ರಜ್ಞಾನ ಮತ್ತು ತಂತ್ರಾಂಶದ ಉಪಯೋಗದಿಂದ ಉನ್ನತ ಶಿಕ್ಷಣವನ್ನು ಪಡೆಯಲು ಅನುಕೂಲವಾಗುವಂತೆ ಮಾತನಾಡುವ (ಟಾಕಿಂಗ್) ಲ್ಯಾಪ್‌ಟಾಪ್‌ಗಳನ್ನು ಅರ್ಹ ಫಲಾನುಭವಿಗಳಿಗೆ ನೀಡಲಾಗುತ್ತಿದೆ.

ತೀವ್ರತೆರೆನಾದ ದೈಹಿಕ ವಿಕಲಚೇತನರಿಗೆ ಯಂತ್ರಚಾಲಿತ ದ್ವಿಚಕ್ರವಾಹನ ಯೋಜನೆ :

20 ರಿಂದ 60 ವರ್ಷದ ವಯೋಮಾನದ ತೀವ್ರತರವಾದ ದೈಹಿಕ ವಿಕಲಚೇತನರಿಗೆ ಓಡಾಡಲು ಅನುಕೂಲವಾಗುವಂತೆ ಜೀವಿತ ಕಾಲದಲ್ಲಿ ಒಂದು ಬಾರಿಗೆ ಯಂತ್ರಚಾಲಿತ ದ್ವಿಚಕ್ರ ವಾಹನವನ್ನು ಮಂಜೂರು ಮಾಡಲಾಗುತ್ತದೆ. ಈ ಯೋಜನೆಯಡಿ ಫಲಾನುಭವಿಯ ಕುಟುಂಬದ ವಾರ್ಷಿಕ ವರಮಾನ ರೂ.2.00 ಲಕ್ಷಗಳಿಗಿಂತ ಕಡಿಮೆ ಇರಬೇಕಾಗಿರುತ್ತದೆ.

2.ಜಿಲ್ಲಾ ಅಂಗವಿಕಲರ ಪುನರ್ವಸತಿ ಕೇಂದ್ರ ಯೋಜನೆ:-

ವಿಕಲಚೇತನರನ್ನು ಗುರುತಿಸಿ ಅವರಿಗೆ ಶೈಕ್ಷಣಿಕ, ಉದ್ಯೋಗ ಮತ್ತು ತರಬೇತಿ, ಸಾಮಾಜಿಕ ಭದ್ರತೆ ಹಾಗೂ ಪುನರ್ವಸತಿ ಸೇವೆಗಳನ್ನು ಅವರ ಮನೆ ಬಾಗಿಲಿನಲ್ಲಿಯೇ ಒದಗಿಸಿ ಅವರ ಸರ್ವಾಂಗೀಣ ಪುನರ್ವಸತಿಯನ್ನು ಕಲ್ಪಿಸುವುದು ಈ ಯೋಜನೆಯ ಪ್ರಮುಖ ಉದ್ದೇಶವಾಗಿದೆ.ಈ ಯೋಜನೆಯಡಿ

ವಿಕಲಚೇತನರಿಗೆ ಅಗತ್ಯವಿರುವ ವೈದ್ಯಕೀಯ ಸೇವೆ, ವೃತ್ತಿ ಚಿಕಿತ್ಸೆ, ವಿವಿಧ ರೀತಿಯ ಸಾಧನ ಸಲಕರಣೆಗಳನ್ನು ಕೇಂದ್ರಗಳಲ್ಲಿ ತಯಾರಿಸಿ ಒದಗಿಸಲಾಗುವುದು. ಪ್ರಸ್ತುತ 16 ಜಿಲ್ಲೆಗಳಲ್ಲಿ ಜಿಲ್ಲಾ ಪುನರ್ವಸತಿ ಕೇಂದ್ರಗಳು ನಡೆಯುತ್ತಿವೆ. (ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ಬೆಳಗಾವಿ, ಬೀದರ್, ಚಿತ್ರದುರ್ಗ, ದಕ್ಷಿಣ ಕನ್ನಡ, ಮೈಸೂರು, ಉಡುಪಿ, ಹಾಸನ, ವಿಜಯಪುರ, ರಾಯಚೂರು, ಚಿಕ್ಕಮಗಳೂರು, ಬಳ್ಳಾರಿ, ಹಾವೇರಿ, ಚಾಮರಾಜನಗರ, ಗದಗ)

3. **ಅಂಗವಿಕಲತೆಯನ್ನು ನಿವಾರಿಸುವ ಶಸ್ತ್ರಚಿಕಿತ್ಸೆಗಾಗಿ ವೈದ್ಯಕೀಯ ಪರಿಹಾರ ನಿಧಿ ಯೋಜನೆ:-**

ಅಂಗವಿಕಲ ವ್ಯಕ್ತಿಗಳಿಗೆ ಅಂಗವಿಕಲತೆಯನ್ನು ನಿವಾರಿಸಲು ಶಸ್ತ್ರ ಚಿಕಿತ್ಸೆಗಾಗಿ ಸರ್ಕಾರಿ ಆಸ್ಪತ್ರೆ, ಸಂಜಯಗಾಂಧಿ ಆಸ್ಪತ್ರೆಗಳಲ್ಲಿ ಹಾಗೂ ಸುಸಜ್ಜಿತ ಖಾಸಗಿ ಆಸ್ಪತ್ರೆಗಳಲ್ಲಿ ಅಂಗವಿಕಲತೆ ನಿವಾರಣಾ ಶಸ್ತ್ರ ಚಿಕಿತ್ಸೆಗಾಗಿ ರೂ.1.00 ಲಕ್ಷಗಳವರೆಗೆ ಸಹಾಯ ಧನವನ್ನು ಮಂಜೂರು ಮಾಡಲಾಗುತ್ತಿದೆ.

4. <u>ಸಾಧನೆ ಮತ್ತು ಪ್ರತಿಭೆ ಯೋಜನೆ:</u>

ವಿಕಲಚೇತನ ಕ್ರೀಡಾಪಟುಗಳಿಗೆ ಪ್ರೋತ್ಸಾಹ ನೀಡಿ ಧನಸಹಾಯ ನೀಡಲು "ಸಾಧನೆ" ಎಂಬ ಯೋಜನೆಯು ಜಾರಿಯಲ್ಲಿದ್ದು, ಕ್ರೀಡೆಗಳಲ್ಲಿ ವಿಶೇಷ ಸಾಧನೆಗೈದ ವಿಕಲಚೇತನರಿಗೆ ರೂ.50,000/–ಗಳ ಧನ ಸಹಾಯವನ್ನು ನೀಡಲಾಗುತ್ತಿದೆ.

ವಿಕಲಚೇತನರು ನೀಡುವ ಸಾಂಸ್ಕೃತಿಕ ಚಟುವಟಿಕೆಗಳಿಗೆ ಪ್ರೋತ್ಸಾಹ ನೀಡಿ ಧನಸಹಾಯ ನೀಡುವ ಸಲುವಾಗಿ "ಪ್ರತಿಭೆ" ಎಂಬ ಯೋಜನೆಯು ಜಾರಿಯಲ್ಲಿದ್ದು, ವೈಯಕ್ತಿಕ ಸಾಂಸ್ಕೃತಿಕ ರೂ.2,000/–ಗಳು ಹಾಗೂ ಸಮೂಹ ಕಾರ್ಯಕ್ರಮಕ್ಕೆ ರೂ.10,000/–ಗಳ ಪ್ರೋತ್ಸಾಹಧನ ನೀಡಲಾಗುತ್ತದೆ.

5. <u>ನಿರಾಮಯ ಆರೋಗ್ಯ ವಿಮಾ ಯೋಜನೆ :</u>

ಬುದ್ಧಿಮಾಂದ್ಯ, ಸೆರಬ್ರಲ್ ಪಾಲ್ಸಿ, ಆಟಿಸಂ ಮತ್ತು ಬಹುವಿಧ ಅಂಗವಿಕಲತೆ ಹೊಂದಿರುವ ಪ್ರತಿ ವ್ಯಕ್ತಿ ಹಾಗೂ ಮಗುವಿಗೆ ವರ್ಷಕ್ಕೆ ಒಂದು ಬಾರಿ ಪ್ರೀಮಿಯಂ ಮೊತ್ತ ರೂ.250/–ಗಳನ್ನು ಭಾರತ ಸರ್ಕಾರದಿಂದ ಗುರುತಿಸಲ್ಪಟ್ಟ ಅಧಿಕೃತ ಸಂಸ್ಥೆಯಾದ ಅಂಗವಿಕಲರ ಪುನಶ್ಚೇತನ ಸಂಸ್ಥೆ (ರಿ) (ಎ.ಪಿ.ಡಿ) ಬೆಂಗಳೂರು ರವರಿಗೆ ಪಾವತಿಸಲಾಗುವುದು. ಪ್ರತಿ ವರ್ಷ ಯೋಜನೆಯಡಿ ಬರುವ ಫಲಾನುಭವಿಗಳು ರೂ.1.00 ಲಕ್ಷಗಳವರೆಗೆ ವೈದ್ಯಕೀಯ ಸೌಲಭ್ಯ ಪಡೆಯಬಹುದಾಗಿರುತ್ತದೆ. ಈ ಮೊತ್ತದಲ್ಲಿ ರೂ.60,000/–ಗಳವರೆಗೆ ಸರ್ಜರಿ ವೆಚ್ಚ ಉಳಿದ ರೂ.40,000/–ಗಳಲ್ಲಿ ವೈದ್ಯಕೀಯ ಖರ್ಚು ಥೆರಪಿ, ಪ್ರಯಾಣ ವೆಚ್ಚಗಳನ್ನು ಒಳಗೊಂಡಿರುತ್ತದೆ.

7. <u>ಸ್ಪರ್ಧಾ ಚೇತನ:–</u>

ಈ ಯೋಜನೆಯಡಿ ವಿಶೇಷ ಸಾಮರ್ಥ್ಯ/ಭಿನ್ನ ಸಾಮರ್ಥ್ಯದ ವಿದ್ಯಾವಂತ ವ್ಯಕ್ತಿಗೆಗಳಿಗೆ ಐ.ಎ.ಎಸ್./ಕೆ.ಎ.ಎಸ್. ಹಾಗೂ ಇತರೆ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಸರ್ಕಾರದ ಇತರೆ ಇಲಾಖೆಗಳಡಿ ಗುರುತಿಸಲ್ಪಟ್ಟ ಪೂರ್ವ ಪರೀಕ್ಷಾ ತರಬೇತಿ ಕೇಂದ್ರಗಳು ಹಾಗೂ ಈ ಇಲಾಖೆಯಿಂದ ಗುರುತಿಸಲ್ಪಟ್ಟ ತರಬೇತಿ ಕೇಂದ್ರಗಳ ಮೂಲಕ ತರಬೇತಿಯನ್ನು ಉಚಿತವಾಗಿ ನೀಡಲಾಗುತ್ತಿದೆ.

8. <u>ನಿರುದ್ಯೋಗ ಭತ್ಯೆ:–</u> ಎಸ್.ಎಸ್.ಎಲ್.ಸಿ ಹಾಗೂ ನಂತರ ವ್ಯಾಸಂಗ ಮಾಡಿರುವ ನಿರುದ್ಯೋಗಿ ವಿಕಲಚೇತನರಿಗೆ ಮಾಸಿಕ ರೂ.1000/–ಗಳ ನಿರುದ್ಯೋಗ ಭತ್ಯೆಯನ್ನು ಮಂಜೂರು ಮಾಡಲಾಗುತ್ತಿದೆ.

<u>(ಇ) ಸಾರ್ವಜನಿಕ ಅರಿವು ಮೂಡಿಸುವ ಯೋಜನೆಗಳು:</u>

1. <u>ವಿಕಲಚೇತನರ ಮಾಹಿತಿ ಸಲಹಾ ಕೇಂದ್ರ :</u>

ಅಂಗವಿಕಲರಿಗೆ ಲಭ್ಯವಿರುವ ರಾಜ್ಯ ಸರ್ಕಾರದ ಹಾಗೂ ಕೇಂದ್ರ ಸರ್ಕಾರದ ಯೋಜನೆಗಳ ಹಾಗೂ ವಿಶೇಷ ಶಾಲೆಗಳು ಹಾಗೂ ವೃತ್ತಿ ತರಬೇತಿ ಸಂಸ್ಥೆಗಳ ಬಗ್ಗೆ ಮಾಹಿತಿಯನ್ನು ಒದಗಿಸಲು ನಿರ್ದೇಶನಾಲಯದಲ್ಲಿ ಹಾಗೂ ರಾಜ್ಯದ 30 ಜಿಲ್ಲೆಗಳಲ್ಲಿ ವಿಕಲಚೇತನರ ಸಹಾಯವಾಣಿ / ಮಾಹಿತಿ ಕೇಂದ್ರಗಳನ್ನು ನಡೆಸಲಾಗುತ್ತಿದೆ.ಈ ಕೇಂದ್ರಗಳಲ್ಲಿ ಒಳ್ಳೆಯ ಗುಣ ಮಟ್ಟದ ಕೃತಕಾಂಗಗಳು ದೊರೆಯುವ ಮಾಹಿತಿ ಹಾಗೂ ಅಂಗವಿಕಲರಿಗೆ ಬೇಕಾಗಿರುವ ಮಾಹಿತಿಗಳನ್ನು ಮತ್ತು ಇದರ ಜೊತೆಗೆ ರಾಜ್ಯ ಸರ್ಕಾರ, ಕೇಂದ್ರ ಸರ್ಕಾರ, ಸಾರ್ವಜನಿಕ ಉದ್ಯಮ ಹಾಗೂ ಖಾಸಗಿ ಉದ್ಯಮಗಳಲ್ಲಿ ಅಂಗವಿಕಲರಿಗೆ ಉದ್ಯೋಗ ಅವಕಾಶಗಳ ಬಗ್ಗೆ ಮಾಹಿತಿಯನ್ನು ನೀಡಲಾಗುವುದು.

2) **ವಿಕಲಚೇತನರಿಗೆ ಗುರುತಿನ ಚೀಟಿ ನೀಡುವ ಯೋಜನೆ:-**

ಈ ಯೋಜನೆಯಡಿಯಲ್ಲಿ ವಿಕಲಚೇತನ ವ್ಯಕ್ತಿಗಳಿಗೆ ಗುರುತಿನ ಚೀಟಿಗಳನ್ನು ನೀಡಲಾಗುತ್ತಿದೆ.ಈ ಗುರುತಿನ ಚೀಟಿಯನ್ನು ವಿವಿಧ ಸರ್ಕಾರಿ ಸೌಲಭ್ಯಗಳನ್ನು ಪಡೆಯಲು ಉಪಯೋಗಿಸಿಕೊಳ್ಳಬಹುದಾಗಿದೆ. **ವಿಕಲಚೇತನರಿಗೆ ವಿಶಿಷ್ಟ ಗುರುತಿನ ಚೀಟಿ (UNIQUE DISABILITY ID)**ನೀಡುವ ಯೋಜನೆಯು ಕೇಂದ್ರ ಸರ್ಕಾರ ಪ್ರಾಯೋಜಿತ ಯೋಜನೆಯಾಗಿದೆ. ರಾಜ್ಯ ಸರ್ಕಾರದಿಂದ ನೇಮಿಸಲಾಗುವ ವೈದ್ಯಕೀಯ ಪ್ರಾಧಿಕಾರಗಳಿಂದ ದೃಢೀಕರಿಸಲಾಗುವ ವೈದ್ಯಕೀಯ ಪ್ರಮಾಣ ಪತ್ರದ ಸಮಗ್ರ ಮಾಹಿತಿಯುಳ್ಳ ಗಣಕೀಕೃತ ಗುರುತಿನ ಚೀಟಿಯನ್ನು ವಿಕಲಚೇತನ ವ್ಯಕ್ತಿಗಳಿಗೆ ನೀಡುವ ವ್ಯವಸ್ಥೆಯಾಗಿದ್ದು, ಇದರಲ್ಲಿ ವಿಕಲಚೇತನ ವ್ಯಕ್ತಿಯ ವಿವರಗಳು ಹಾಗೂ ಅವರಲ್ಲಿರುವ ವಿಕಲತೆಯ ವಿವರ ಮತ್ತು ಪ್ರಮಾಣವನ್ನು ನಮೂದಿಸಲಾಗಿರುತ್ತದೆ.

3).ವಿಕಲಚೇತನರಿಗೆ ರಿಯಾಯಿತಿ ದರದ ಬಸ್ ಪಾಸ್:

ಈ ಯೋಜನೆಯಡಿ ವಿಕಲಚೇತನರಿಗೆ 100 ಕಿ.ಮೀ. ವ್ಯಾಪ್ತಿಯೊಳಗೆ ಸಂಚರಿಸಲು ವಾರ್ಷಿಕ ರೂ.660/- ರಿಯಾಯಿತಿ ದರದಲ್ಲಿ ಬಸ್ ಪಾಸ್‌ಗಳನ್ನು ಕೆ.ಎಸ್.ಆರ್.ಟಿ.ಸಿ ಹಾಗೂ ಬಿ.ಎಂ.ಟಿ.ಸಿ ವತಿಯಿಂದ ವಿತರಿಸಲಾಗುತ್ತಿದೆ ಪೂರ್ಣ ಅಂಧರು ಉಚಿತವಾಗಿ ರಾಜ್ಯದಲ್ಲಿ ಸಂಚರಿಸಲು ಅವಕಾಶವಿರುತ್ತದೆ.

ಅನುಬಂಧ-2

(ರೂ.ಲಕ್ಷಗಳಲ್ಲಿ)

ಕ್ರ ಸಂ	ಯೋಜನೆಗಳ ವಿವರ	2017-18			2018-19			2019-20		
		ನಿಗದಿ	ಬಿಡುಗಡೆ	ವೆಚ್ಚ	ನಿಗದಿ	ಬಿಡುಗಡೆ	ವೆಚ್ಚ	ನಿಗದಿ	ಬಿಡುಗಡೆ	ವೆಚ್ಚ
I	ರಾಜ್ಯ ವಲಯ									
1	ಸಮಾಜ ಸೇವಾ ಸಂಕೀರ್ಣ 2235-02-001-0-03	112.00	112.00	63.12	155.00	155.00	62.75	114.00	114.00	67.96
2	ಅಂಗವಿಕಲರಿಗಾಗಿ ನಿರ್ದೇಶನಾಲಯ 2235-02-001-0-05	351.00	351.00	239.74	700.00	700.00	686.11	411.29	411.29	355.74
3	ಕಿವುಡು & ಅಂಧ ಮಕ್ಕಳ ಶಾಲೆಗಳ ಅಭಿವೃದ್ಧಿ 2235-02-101-0-02	71.00	71.00	41.35	70.00	70.00	56.22	83.00	83.00	62.33
4	ವಿದ್ಯಾರ್ಥಿ ವೇತನ ಮತ್ತು ಪ್ರೋತ್ಸಾಹ ಧನ 2235-02-101-0-05	596.00	596.00	526.57	596.00	596.00	504.08	596.00	596.00	550.61
5	ಬಡ ಅಂಗವಿಕಲರಿಗೆ ಮಾಸಿಕ ನಿರ್ವಹಣಾ ಭತ್ಯೆ 2235-02-101-0-20	88372.05	88372.05	87250.11	109779.00	109779.00	106018.44	0.00	0.00	0.00
6	ಅಂಗವಿಕಲರ ಅಧಿನಿಯಮ 1995ರ ಮೇರೆಗೆ ಆಯುಕ್ತಾಲಯ 2235-02-101-0-47	50.00	50.00	38.81	43.00	43.00	61.22	77.85	77.85	67.69
7	ಮಾನಸಿಕವಾಗಿ ಸವಾಲಿಗೊಳಗಾದವರಿಗೆ ನಿವಾಸಿ ಗೃಹಗಳು 2235-02-101-0-49	22.00	22.00	17.98	56.00	56.00	27.34	49.00	49.00	26.56
8	ಮಹಿಳಾ ಅಂಗವಿಕಲರಿಗೆ ಹಾಸ್ಟಲ್‌ಗಳು 2235-02-101-0-50	350.00	350.00	309.28	350.00	350.00	313.32	350.00	350.00	319.85
9	ಅಂಗವಿಕಲರಿಗೆ ಸಾಧನ ಸಲಕರಣೆಗಳು 2235-02-101-0-52	3000.00	3000.00	2783.43	1268.00	1268.00	240.85	1960.00	1960.00	1862.47
10	ಅಂಗವಿಕಲರಿಗೆ ಗ್ರಾಮೀಣ ಪುನರ್ವಸತಿ ಕಾರ್ಯಕ್ರಮ 2235-02-101-0-53	1971.04	1971.04	1738.55	2271.00	2271.00	1756.93	2022.00	2022.00	1960.35
11	ವಿಕಲಚೇತನರಿಗೆ ಉದ್ಯೋಗ ಕೋಶ 2235-02-101-0-55	200.00	200.00	12.60	45.00	45.00	10.40	9.00	9.00	3.40
12	ದೈಹಿಕ ಮತ್ತು ಮಾನಸಿಕ ಸವಾಲಿಗೊಳಗಾದವರ ಕಲ್ಯಾಣ 2235-02-101-0-99	3535.00	3535.00	2783.01	2600.00	2600.00	2464.95	3600.50	3600.50	2472.13
13	ಸ್ವಯಂ ಸೇವಾ ಸಂಸ್ಥೆಗಳು ನಡೆಸುವ ವಿಶೇಷ ಶಾಲೆಗಳಿಗೆ ಸಹಾಯಾನುಧಾನ 2235-02-104-2-06	6856.96	6856.96	5751.10	5502.00	5502.00	5257.55	6168.00	6168.00	5359.76
14	ಕಟ್ಟಡಗಳು 4235-02-101-1-01	221.00	221.00	221.00	132.00	132.00	113.97	100.00	100.00	80.14
15	ಸ್ವಾವಲಂಬನ್ ಛಾತ್ರವಾಸ್ 4235-02-103-1-06	3.00	3.00	0.00	0.00	0.00	0.00	0.00	0.00	0.00
16	ಅಶಕ್ತರಿಗಾಗಿ ಅಶಕ್ತ ಅಧಿನಿಯಮಗಳ ಅನುಷ್ಠಾನ (ಸಿಪ್ಡಾ) 2235-02-101-0-41	0.00	0.00	0.00	0.00	0.00	0.00	1104.11	1104.00	1094.21
17	ಮಾದಕ ವಸ್ತುಗಳ ಬೇಡಿಕೆಯನ್ನು ಕಡಿತಗೊಳಿಸಲು ರಾಷ್ಟ್ರೀಯ ಕ್ರಿಯಾ ಯೋಜನೆ (ಕೇ.ಪು.ಯೋ.) 2235-02-200-0-07	0.00	0.00	0.00	0.00	0.00	0.00	112.50	112.50	0.00
	ಒಟ್ಟು ರೂ. (I)	**105711.05**	**105711.05**	**101776.65**	**123567.00**	**123567.00**	**117574.13**	**16757.25**	**16757.14**	**14283.20**

ಕ್ರ	ಯೋಜನೆಗಳ ವಿವರ	2017–18			2018–19			2019–20		
II	**ಜಿಲ್ಲಾ ವಲಯ**									
1	ಸರ್ಕಾರೇತರ ಸಂಸ್ಥೆಗಳಿಗೆ ಸಹಾಯಧನ ವಿಶೇಷ ಶಾಲೆಗಳು 2235-00-101-0-28	1668.00	1668.00	1668.00	1676.00	1676.00	1676.00	2046.00	1192.89	1192.89
2	ಸರ್ಕಾರೇತರ ಸಂಸ್ಥೆಗಳಿಗೆ ಸಹಾಯಧನ ವೃದ್ಧಾಶ್ರಮಗಳು 2235-00-101-0-30	253.00	253.00	253.00	240.00	240.00	239.70	240.00	161.13	161.13
	ಒಟ್ಟು ರೂ. (II)	**1921.00**	**1921.00**	**1921.00**	**1916.00**	**1916.00**	**1915.70**	**2286.00**	**1354.02**	**1354.02**
	ಒಟ್ಟು ರೂ. (I+ II)	**107632.05**	**107632.05**	**103697.65**	**125483.00**	**125483.00**	**119489.83**	**19043.25**	**18111.16**	**15637.22**

ನಿರ್ದೇಶಕರು,
ವಿಕಲಚೇತನರ ಹಾಗೂ ಹಿರಿಯ ನಾಗರಿಕರ
ಸಬಲೀಕರಣ ಇಲಾಖೆ, ಬೆಂಗಳೂರು

ಅನುಬಂಧ-3

(ರೂ.ಲಕ್ಷಗಳಲ್ಲಿ)

ಕ್ರ ಸಂ	ಯೋಜನೆಗಳ ವಿವರ	2019-20		
		ನಿಗದಿ	ಬಿಡುಗಡೆ	ವೆಚ್ಚ
I	ರಾಜ್ಯ ವಲಯ			
1	ಸಮಾಜ ಸೇವಾ ಸಂಕೀರ್ಣ 2235-02-001-0-03	114.00	114.00	67.96
2	ಅಂಗವಿಕಲರಿಗಾಗಿ ನಿರ್ದೇಶನಾಲಯ 2235-02-001-0-05	411.29	411.29	355.74
3	ಕಿವುಡು & ಅಂಧ ಮಕ್ಕಳ ಶಾಲೆಗಳ ಅಭಿವೃದ್ಧಿ 2235-02-101-0-02	83.00	83.00	62.33
4	ವಿದ್ಯಾರ್ಥಿ ವೇತನ ಮತ್ತು ಪ್ರೋತ್ಸಾಹ ಧನ 2235-02-101-0-05	596.00	596.00	550.61
5	ಬಡ ಅಂಗವಿಕಲರಿಗೆ ಮಾಸಿಕ ನಿರ್ವಹಣಾ ಭತ್ಯೆ 2235-02-101-0-20	0.00	0.00	0.00
6	ಅಂಗವಿಕಲರ ಅಧಿನಿಯಮ 1995ರ ಮೇರೆಗೆ ಆಯುಕ್ತಾಲಯ 2235-02-101-0-47	77.85	77.85	67.69
7	ಮಾನಸಿಕವಾಗಿ ಸವಾಲಿಗೊಳಗಾದವರಿಗೆ ನಿವಾಸಿ ಗೃಹಗಳು 2235-02-101-0-49	49.00	49.00	26.56
8	ಮಹಿಳಾ ಅಂಗವಿಕಲರಿಗೆ ಹಾಸ್ಟೆಲ್‌ಗಳು 2235-02-101-0-50	350.00	350.00	319.85
9	ಅಂಗವಿಕಲರಿಗೆ ಸಾಧನ ಸಲಕರಣೆಗಳು 2235-02-101-0-52	1960.00	1960.00	1862.47
10	ಅಂಗವಿಕಲರಿಗೆ ಗ್ರಾಮೀಣ ಪುನರ್ವಸತಿ ಕಾರ್ಯಕ್ರಮ 2235-02-101-0-53	2022.00	2022.00	1960.35
11	ವಿಕಲಚೇತನರಿಗೆ ಉದ್ಯೋಗ ಕೋಶ 2235-02-101-0-55	9.00	9.00	3.40
12	ದೈಹಿಕ ಮತ್ತು ಮಾನಸಿಕ ಸವಾಲಿಗೊಳಗಾದವರ ಕಲ್ಯಾಣ 2235-02-101-0-99	3600.50	3600.50	2472.13
13	ಸ್ವಯಂ ಸೇವಾ ಸಂಸ್ಥೆಗಳು ನಡೆಸುವ ವಿಶೇಷ ಶಾಲೆಗಳಿಗೆ ಸಹಾಯಾನುಧಾನ 2235-02-104-2-06	6168.00	6168.00	5359.76
14	ಕಟ್ಟಡಗಳು 4235-02-101-1-01	100.00	100.00	80.14
15	ಸ್ವಾವಲಂಬನ್ ಛಾತ್ರವಾಸ್ 4235-02-103-1-06	0.00	0.00	0.00
16	ಅಶಕ್ತರಿಗಾಗಿ ಅಶಕ್ತ ಅಧಿನಿಯಮಗಳ ಅನುಷ್ಠಾನ (ಸಿಪ್ಡಾ) 2235-02-101-0-41	1104.11	1104.00	1094.21
17	ಮಾದಕ ವಸ್ತುಗಳ ಬೇಡಿಕೆಯನ್ನು ಕಡಿತಗೊಳಿಸಲು ರಾಷ್ಟ್ರೀಯ ಕ್ರಿಯಾ ಯೋಜನೆ (ಕೇ.ಪು.ಯೋ.) 2235-02-200-0-07	112.50	112.50	0.00
	ಒಟ್ಟು ರೂ. (I)	**16757.25**	**16757.14**	**14283.20**
II	ಜಿಲ್ಲಾ ವಲಯ			
1	ಸರ್ಕಾರೇತರ ಸಂಸ್ಥೆಗಳಿಗೆ ಸಹಾಯಧನ ವಿಶೇಷ ಶಾಲೆಗಳು 2235-00-101-0-28	2046.00	1192.89	1192.89
2	ಸರ್ಕಾರೇತರ ಸಂಸ್ಥೆಗಳಿಗೆ ಸಹಾಯಧನ ವೃದ್ಧಾಶ್ರಮಗಳು 2235-00-101-0-30	240.00	161.13	161.13
	ಒಟ್ಟು ರೂ. (II)	**2286.00**	**1354.02**	**1354.02**
	ಒಟ್ಟು ರೂ. (I+ II)	**19043.25**	**18111.16**	**15637.22**

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	3628
ವಿಧಾನ ಸಭೆಯ ಸದಸ್ಯರ ಹೆಸರು	:	ಶ್ರೀ ಬಸನಗೌಡ ಆರ್ ಪಾಟೀಲ್ (ಯತ್ನಾಳ್) (ವಿಜಯಪುರ ನಗರ)
ಉತ್ತರಿಸುವ ದಿನಾಂಕ	:	24.03.2021
ಉತ್ತರಿಸುವವರು	:	ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖಾ ಸಚಿವರು.

ಕ್ರ.ಸಂ	ಪ್ರಶ್ನೆ	ಉತ್ತರ
ಅ)	ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಲ್ಲಿರುವ ಯೋಜನೆಗಳಾವುವು; ಸದರಿ ಯೋಜನೆಗಳಿಗೆ ಕಳೆದ 3 ವರ್ಷಗಳಿಂದ ನಿಗದಿಪಡಿಸಿರುವ ಅನುದಾನವೆಷ್ಟು; (ಯೋಜನಾವಾರು ಸಂಪೂರ್ಣ ವಿವರ ನೀಡುವುದು)	ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಲ್ಲಿರುವ ಯೋಜನೆಗಳು ಮತ್ತು ಸದರಿ ಯೋಜನೆಗಳಿಗೆ ಸಂಬಂಧಿಸಿದಂತೆ ಕಳೆದ 3 ವರ್ಷಗಳಿಂದ ನಿಗದಿಪಡಿಸಿರುವ ಅನುದಾನದ ವಿವರವನ್ನು **ಅನುಬಂಧ-1** ರಲ್ಲಿ ಒದಗಿಸಿದೆ.
1	ಕೇಂದ್ರ ಪುರಸ್ಕೃತ ಪ್ರದಾನ ಮಂತ್ರಿಗಳ ಕೃಷಿ ಸಿಂಚಾಯಿ ಯೋಜನೆ	0.492	ಫಲಾನುಭವಿ ಆಧಾರಿತ ಕಾರ್ಯಕ್ರಮಗಳು/ಚಟುವಟಿಕೆಗಳು	1	1	-	-
2	ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ – ಸಾಮಾನ್ಯ	0.357		2	2	-	-
3	ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ – ವಿಶೇಷ ಘಟಕ ಯೋಜನೆ	0.207		1	1	-	-
4	ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ – ವಿಶೇಷ ಘಟಕ ಯೋಜನೆ	0.196		1	1	-	-
5	ಜಿಲ್ಲಾ ಪಂಚಾಯತ್ ಯೋಜನೆ	0.800		8	8	-	-
6	ತಾಲ್ಲೂಕು ಪಂಚಾಯತ್ ಯೋಜನೆ	0.050		1	1	-	-
		2.102		14	14	-	-
ಸಾರ್ವಜನಿಕ ಶಿಕ್ಷಣ ಇಲಾಖೆ							
1	ರಾಜ್ಯ ವಲದ ಮುಂದುವರೆದ ಯೋಜನೆಯ	19.00	ಶಾಲಾ ಕೊಠಡಿ ದುರಸ್ಥಿ	4	4	-	-
2	ರಾಜ್ಯ ವಲದ ಮುಂದುವರೆದ ಯೋಜನೆಯ	8.700	ಶಾಲಾ ಕೊಠಡಿ ನಿರ್ಮಾಣ	1	1	-	-
3	ಸರ್ಕಾರಿ ಶಾಲಾ ಕೊಠಡಿ ನಿರ್ಮಾಣ ಯೋಜನೆ	95.70	ಎಸ್.ಸಿ.ಪಿ./ಟಿಎಸ್.ಪಿ ಯೋಜನೆಯಡಿಯಲ್ಲಿ ಕೊಠಡಿ ನಿರ್ಮಾಣ	11	11	-	-
4	ಲಿಂಕ್ ಡಾಕ್ಯುಮೆಂಟ್‌ನ ತಾಲ್ಲೂಕು ಪಂಚಾಯಿತಿ ಯಿಂದ ಬಿಡುಗಡೆಯಾದ ಅನುದಾನ	7.00	ಲಿಂಕ್ ಡಾಕ್ಯುಮೆಂಟ್‌ನ ತಾಲ್ಲೂಕು ಪಂಚಾಯಿತಿ ಯಿಂದ ಬಿಡುಗಡೆಯಾದ ಅನುದಾನ	8	8	-	-
5	ಜಿಲ್ಲಾ ಪಂಚಾಯಿತಿ ಲಿಂಕ್ ಡಾಕ್ಯುಮೆಂಟ್ ನಿಂದ ಬಿಡುಗಡೆಯಾದ ಅನುದಾನ	5.00	ಜಿಲ್ಲಾ ಪಂಚಾಯಿತಿ ಲಿಂಕ್ ಡಾಕ್ಯುಮೆಂಟ್ ನಿಂದ ಬಿಡುಗಡೆಯಾದ ಅನುದಾನ	5	5	-	-
6	ನರೇಗಾ ಯೋಜನೆಯಡಿ ಶೌಚಾಲಯ ನಿರ್ಮಾಣ	1.00	ನರೇಗಾ ಒಗೂಡಿಸುವಿಕೆಯ ಕಾಮಗಾರಿ	1	1	-	-
	ಒಟ್ಟು	136.40		30	30	-	-
ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ							
1	ಸ್ವಯಂ ಉದ್ಯೋಗ ಯೋಜನೆ	2.45	ವೈಯಕ್ತಿಕವಾಗಿ ಸ್ವಯಂ ಉದ್ಯೋಗ ಕೈಗೊಳ್ಳಲು ಸಹಾಯಧನ ಬಿಡುಗಡೆ ಮಾಡಲಾಗುವುದು.				
2	ಸ್ವಯಂ ಉದ್ಯೋಗ (ನೇರ ಸಾಲ) ಯೋಜನೆ	11.60	ವೈಯಕ್ತಿಕವಾಗಿ ಹೈನುಗಾರಿಕೆ ಉದ್ದೇಶಕ್ಕಾಗಿ ಸಾಲ & ಸಹಾಯಧನ ಬಿಡುಗಡೆ ಮಾಡಲಾಗುವುದು.	ಅನ್ವಯಿಸುವುದಿಲ್ಲ	ಅನ್ವಯಿಸುವುದಿಲ್ಲ	ಅನ್ವಯಿಸುವುದಿಲ್ಲ	
3	ಸ್ವಯಂ ಉದ್ಯೋಗ (ವೃತ್ತಿ ಕೌಶಲ್ಯ) ಯೋಜನೆ	2.50	ವೈಯಕ್ತಿಕವಾಗಿ ವೃತ್ತಿ ಕೌಶಲ್ಯ ಉದ್ದೇಶಕ್ಕಾಗಿ ಸಹಾಯಧನ್ ಬಿಡುಗಡೆ ಮಾಡಲಾಗುವುದು.	ಅನ್ವಯಿಸುವುದಿಲ್ಲ	ಅನ್ವಯಿಸುವುದಿಲ್ಲ	ಅನ್ವಯಿಸುವುದಿಲ್ಲ	
4	ಉದ್ಯಮ ಶೀಲತಾ ಯೋಜನೆ (ಪ್ರವಾಸಿ ಟ್ಯಾಕ್ಸಿ ಯೋಜನೆ)	6.00	ವೈಯಕ್ತಿಕವಾಗಿ ಪ್ರವಾಸಿ ಟ್ಯಾಕ್ಸಿ ಉದ್ದೇಶಕ್ಕಾಗಿ ಸಹಾಯಧನ ಬಿಡುಗಡೆ ಮಾಡಲಾಗುವುದು.	ಅನ್ವಯಿಸುವುದಿಲ್ಲ	ಅನ್ವಯಿಸುವುದಿಲ್ಲ	ಅನ್ವಯಿಸುವುದಿಲ್ಲ	

5	ಉದ್ಯಮ ಶೀಲತಾ ಯೋಜನೆ	5.00	ವೈಯಕ್ತಿಕವಾಗಿ ಸ್ವಯಂ ಉದ್ಯೋಗ ಕೈಗೊಳ್ಳಲು ಸಹಾಯಧನ ಬಿಡುಗಡೆ ಮಾಡಲಾಗುವುದು.				
6	ಉದ್ಯಮ ಶೀಲತಾ ಯೋಜನೆ	3.50	ವೈಯಕ್ತಿಕವಾಗಿ ಸ್ವಯಂ ಉದ್ಯೋಗ ಕೈಗೊಳ್ಳಲು ಸಹಾಯಧನ ಬಿಡುಗಡೆ ಮಾಡಲಾಗುವುದು.				
7	ಮೈಕ್ರೋ ಕ್ರೆಡಿಟ್ ಯೋಜನೆ	1.50	ಗುಂಪು ಚಟುವಟಿಕೆಗಳಿಗೆ ಸ್ವಯಂ ಉದ್ಯೋಗ ಕೈಗೊಳ್ಳಲು ಸಾಲ & ಸಹಾಯಧನ ಬಿಡುಗಡೆ				
8	ಗಂಗಾ ಕಲ್ಯಾಣ ಯೋಜನೆ	34.02	ವೈಯಕ್ತಿಕವಾಗಿ ಕೊಳವೆಬಾವಿ ಕೊರೆಯಲು ಸಾಲ & ಸಹಾಯಧನ ಬಿಡುಗಡೆ ಮಾಡಲಾಗುವುದು.				
	ಒಟ್ಟು	66.57					

2018-19 ನೇ ಸಾಲಿನಲ್ಲಿ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ನೆಲಮಂಗಲ ವಿಧಾನಸಭಾ ಕ್ಷೇತ್ರದ ಪಂಚಾಯಿತಿಗಳಿಗೆ (ಜಿಲ್ಲಾ/ತಾಲ್ಲೂಕು/ಗ್ರಾಮ) ಇತರೆ ಇಲಾಖೆಗಳಿಂದ ಅನುಷ್ಠಾನಿಸಲಾದ ಪ್ರಮುಖ ಯೋಜನೆಗಳಡಿ ಹಂಚಿಕೆಯಾದ ಅನುದಾನ ಹಾಗೂ ಕೈಗೊಂಡ ಕಾಮಗಾರಿಗಳ ವಿವರ

ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ (ಒಗ್ಗೂಡಿಸುವಿಕೆ)

ಕ್ರ. ಸಂ.	ಇಲಾಖೆ ಹೆಸರು	ಹಂಚಿಕೆಯಾದ ಅನುದಾನ	ಕೈಗೊಂಡ ಕಾಮಗಾರಿಗಳ ಸ್ವರೂಪ	ಕಾಮಗಾರಿಗಳ ಸಂಖ್ಯೆ			
				ಕೈಗೆತ್ತಿ ಕೊಂಡ	ಪೂರ್ಣ ಗೊಂಡ	ಪ್ರಗತಿ ಯಲ್ಲಿರುವ	ಪ್ರಾರಂಭ ಮಾಡಬೇಕಾ ಗಿರುವ
1	ಪಿ.ಆರ್.ಇ.ಡಿ	323.98	ರಸ್ತೆ ಅಭಿವೃದ್ಧಿ ಕಾಮಗಾರಿ, ಚರಂಡಿ ಕಾಮಗಾರಿ ಮಳೆ ನೀರು ಕಾಲುವೆ ಕಾಮಗಾರಿ, ಚೆಕ್ ಡ್ಯಾಂ.	121	121	-	-
2	ಅರಣ್ಯ ಇಲಾಖೆ	50.97	ರಸ್ತೆಬದಿ ನೆಡುತೋಪು ನಿರ್ಮಾಣ & ನಿರ್ವಹಣೆ,ಕೆರೆ ಅಂಗಳ, ಶಾಲೆ ಆವರಣ, ಸಂಘ ಸಂಸ್ಥೆ ನೆಡುತೋಪು, ಕೃಷಿ ಅರಣ್ಯ ನೆಡುತೋಪು, ಸಸ್ಯಕ್ಷೇತ್ರ ನಿರ್ಮಾಣ & ನಿರ್ವಹಣೆ	214	214	-	-
3	ಕೃಷಿ ಇಲಾಖೆ	24.74	ಎರೆಹುಳ ತೊಟ್ಟಿ ಮತ್ತು ರೀಚಾರ್ಜ್ ಪಿಟ್, ಬದು ನಿರ್ಮಾಣ ಕಾಮಗಾರಿ,	80	80	-	-
4	ರೇಷ್ಮೆ ಇಲಾಖೆ	3.83	ಹಿಪ್ಪು ನೇರಳೆ ತೋಟ ಅಭಿವೃದ್ಧಿ ಕಾಮಗಾರಿ	3	3	-	-
5	ತೋಟಗಾರಿಕೆ ಇಲಾಖೆ	18.9	ತೆಂಗು ಮತ್ತು ಬಾಳೆ ತೋಟ ಅಭಿವೃದ್ಧಿ ಕಾಮಗಾರಿ	138	138	-	-
		422.42		556	556	-	-

ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ

ಕ್ರ. ಸಂ.	ಯೋಜನೆ	ಹಂಚಿಕೆಯಾದ ಅನುದಾನ (ರೂ.ಲಕ್ಷಗಳಲ್ಲಿ)	ಕೈಗೊಂಡ ಕಾಮಗಾರಿಗಳ ಸ್ವರೂಪ	ಕಾಮಗಾರಿಗಳ ಸಂಖ್ಯೆ			
				ಕೈಗೆತ್ತಿ ಕೊಂಡ	ಪೂರ್ಣ ಗೊಂಡ	ಪ್ರಗತಿ ಯಲ್ಲಿರುವ	ಪ್ರಾರಂಭ ಮಾಡಬೇಕಾ ಗಿರುವ
1	ಪ್ರಗತಿ ಕಾಲೋನಿ ಯೋಜನೆ	65.00	ಸಿ.ಸಿ.ರಸ್ತೆ & ಚರಂಡಿ ನಿರ್ಮಾಣ	7	7	-	-
2	ವಾಲ್ಮೀಕಿ ಭವನ	190.00	ವಾಲ್ಮೀಕಿ ಭವನ	1	ಪ್ರಗತಿಯಲ್ಲಿರುತ್ತದೆ	-	-

ರೇಷ್ಮೆ ಇಲಾಖೆ

1	ರೇಷ್ಮೆ ಅಭಿವೃದ್ಧಿ ಯೋಜನೆ – ಸಾಮಾನ್ಯ	3.669	ಫಲಾನುಭವಿ ಆಧಾರಿತ ಕಾರ್ಯಕ್ರಮಗಳು/ಚಟುವಟಿಕೆಗಳು	4	4	-	-
2	ಕೇಂದ್ರ ಪುರಸ್ಕೃತ ಪ್ರಧಾನ ಮಂತ್ರಿಗಳ ಕೃಷಿ ಸಿಂಚಾಯಿ ಯೋಜನೆ	4.575		5	5	-	-
	ಒಟ್ಟು	8.244		9	9	-	-

ಸಾರ್ವಜನಿಕ ಶಿಕ್ಷಣ ಇಲಾಖೆ

ಕ್ರ ಸಂ	ಯೋಜನೆ	ಬಿಡುಗಡೆ ಮಾಡಿರುವ ಅನುದಾನ(ಲಕ್ಷಗಳಲ್ಲಿ)	ಕೈಗೊಂಡ ಕಾಮಗಾರಿಗಳ ಸ್ವರೂಪ	ಕಾಮಗಾರಿಗಳ ಸಂಖ್ಯೆ			
				ಕೈಗೆತ್ತಿಕೊಂಡ	ಪೂರ್ಣಗೊಂಡ	ಪ್ರಗತಿ ಯಲ್ಲಿರುವ	ಪ್ರಾರಂಭ ಮಾಡ ಬೇಕಾಗಿರುವ
1	ರಾಜ್ಯ ವಲಯ ಮುಂದುವರೆದ ಯೋಜನೆಯ	17.98	ಶಾಲಾ ಕೊಠಡಿ ದುರಸ್ಥಿ	12	12	-	-
2	ರಾಜ್ಯ ವಲಯ ಮುಂದುವರೆದ ಯೋಜನೆಯ	31.50	ಶಾಲಾ ಕೊಠಡಿ ನಿರ್ಮಾಣ	2	1	-	1
3	ತಾಲ್ಲೂಕು ಪಂಚಾಯಿತಿ ಲಿಂಕ್ ಡಾಕ್ಯುಮೆಂಟ್ ನಿಂದ ಬಿಡುಗಡೆಯಾದ ಅನುದಾನ	22.50	ತಾಲ್ಲೂಕು ಪಂಚಾಯಿತಿ ಲಿಂಕ್ ಡಾಕ್ಯುಮೆಂಟ್ ನಿಂದ ಬಿಡುಗಡೆಯಾದ ಅನುದಾನ	21	21	-	-
4	ಜಿಲ್ಲಾ ಪಂಚಾಯಿತಿ ಲಿಂಕ್ ಡಾಕ್ಯುಮೆಂಟ್ ನಿಂದ ಬಿಡುಗಡೆಯಾದ ಅನುದಾನ	8.00	ಜಿಲ್ಲಾ ಪಂಚಾಯಿತಿ ಲಿಂಕ್ ಡಾಕ್ಯುಮೆಂಟ್ ನಿಂದ ಬಿಡುಗಡೆಯಾದ ಅನುದಾನ	5	5	-	-
5	ವಿಶೇಷ ಪ್ಯಾಕೇಜ್ ಯೋಜನೆ(3 ವರ್ಷದ ಪ್ಯಾಕೇಜ್ ಯೋಜನೆ)	195.05	ವಿಶೇಷ ಪಾಕೇಜ್ ಯೋಜನೆಯಡಿ ಕೊಠಡಿ ನಿರ್ಮಾಣ	15	15	-	-
6	ಸ್ವಚ್ಛ ಭಾರತ್ ಮಿಷನ್ ಯೋಜನೆಯಡಿ ಶೌಚಾಲಯ ನಿರ್ಮಾಣಕ್ಕೆ ಸಮಗ್ರ ಶಿಕ್ಷಣದಿಂದ ಅನುದಾನ ಬಿಡುಗಡೆ	10.00	ಸ್ವಚ್ಛ ಭಾರತ್ ಮಿಷನ್ ಯೋಜನೆಯಡಿ ಶೌಚಾಲಯ ನಿರ್ಮಾಣ	5	5	-	-
	ಒಟ್ಟು	285.03		60	59	-	-

ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ

1	ಉದ್ಯಮ ಶೀಲತಾ ಯೋಜನೆ	5.00	ವೈಯಕ್ತಿಕವಾಗಿ ಸ್ವಯಂ ಉದ್ಯೋಗ ಕೈಗೊಳ್ಳಲು ಸಹಾಯಧನ ಬಿಡುಗಡೆ ಮಾಡಲಾಗುವುದು.
2	ಉದ್ಯಮ ಶೀಲತಾ ಯೋಜನೆ	3.50	ವೈಯಕ್ತಿಕವಾಗಿ ಸ್ವಯಂ ಉದ್ಯೋಗ ಕೈಗೊಳ್ಳಲು ಸಹಾಯಧನ ಬಿಡುಗಡೆ ಮಾಡಲಾಗುವುದು.
3	ಮೈಕ್ರೋ ಕ್ರೆಡಿಟ್ ಯೋಜನೆ	2.50	ಗುಂಪು ಚಟುವಟಿಕೆಗಳಿಗೆ ಸ್ವಯಂ ಉದ್ಯೋಗ ಕೈಗೊಳ್ಳಲು ಸಾಲ & ಸಹಾಯಧನ ಬಿಡುಗಡೆ ಮಾಡಲಾಗುವುದು.
4	ಗಂಗಾ ಕಲ್ಯಾಣ ಯೋಜನೆ	28.00	ವೈಯಕ್ತಿಕವಾಗಿ ಕೊಳವೆಬಾವಿ ಕೊರೆಯಲು ಸಾಲ & ಸಹಾಯಧನ ಬಿಡುಗಡೆ ಮಾಡಲಾಗುವುದು.
5	ಐರಾವತ ಯೋಜನೆ	10.00	ವೈಯಕ್ತಿಕವಾಗಿ ವಾಹನ ಉದ್ದೇಶಕ್ಕಾಗಿ ಸಹಾಯಧನ ಬಿಡುಗಡೆ ಮಾಡಲಾಗುವುದು.
	ಒಟ್ಟು	49.00	

2019-20 ನೇ ಸಾಲಿನಲ್ಲಿ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ನೆಲಮಂಗಲ ವಿಧಾನಸಭಾ ಕ್ಷೇತ್ರದ ಪಂಚಾಯಿತಿಗಳಿಗೆ (ಜಿಲ್ಲಾ/ತಾಲ್ಲೂಕು/ಗ್ರಾಮ) ಇತರೆ ಇಲಾಖೆಗಳಿಂದ ಅನುಷ್ಠಾನಿಸಲಾದ ಪ್ರಮುಖ ಯೋಜನೆಗಳಡಿ ಹಂಚಿಕೆಯಾದ ಅನುದಾನ ಹಾಗೂ ಕೈಗೊಂಡ ಕಾಮಗಾರಿಗಳ ವಿವರ

ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ (ಒಗ್ಗೂಡಿಸುವಿಕೆ)

ಕ್ರ. ಸಂ.	ಇಲಾಖೆ ಹೆಸರು	ಹಂಚಿಕೆಯಾದ ಅನುದಾನ	ಕೈಗೊಂಡ ಕಾಮಗಾರಿಗಳ ಸ್ವರೂಪ	ಕಾಮಗಾರಿಗಳ ಸಂಖ್ಯೆ			
				ಕೈಗೆತ್ತಿ ಕೊಂಡ	ಪೂರ್ಣ ಗೊಂಡ	ಪ್ರಗತಿ ಯಲ್ಲಿರುವ	ಪ್ರಾರಂಭ ಮಾಡಬೇಕಾ ಗಿರುವ
1	ಪಿ.ಆರ್.ಇ.ಡಿ	244.46	ರಸ್ತೆ ಅಭಿವೃದ್ಧಿ ಕಾಮಗಾರಿ, ಚರಂಡಿ ಕಾಮಗಾರಿ ಮಳೆ ನೀರು ಕಾಲುವೆ ಕಾಮಗಾರಿ, ಚೆಕ್ ಡ್ಯಾಂ.	166	166	-	-
2	ಅರಣ್ಯ ಇಲಾಖೆ	62.86	ರಸ್ತೆಬದಿ ನೆಡುತೋಪು ನಿರ್ಮಾಣ & ನಿರ್ವಹಣೆ,ಕೆರೆ ಅಂಗಳ, ಶಾಲೆ ಆವರಣ, ಸಂಘ ಸಂಸ್ಥೆ ನೆಡುತೋಪು, ಕೃಷಿ ಅರಣ್ಯ ನೆಡುತೋಪು, ಸಸ್ಯಕ್ಷೇತ್ರ ನಿರ್ಮಾಣ & ನಿರ್ವಹಣೆ	365	365	-	-
3	ಕೃಷಿ ಇಲಾಖೆ	26.6	ಕಂದಕ ಬದು ಮತ್ತು ಕೋಡಿ ನಿರ್ಮಾಣ ಕಾಮಗಾರಿ, ಕೃಷಿಹೊಂಡ ನಿರ್ಮಾಣ,	123	123	-	-
4	ರೇಷ್ಮೆ ಇಲಾಖೆ	3	ಹಿಪ್ಪು ನೇರಳೆ ತೋಟ ಅಭಿವೃದ್ಧಿ ಕಾಮಗಾರಿ	42	42	-	-
5	ತೋಟಗಾರಿಕೆ ಇಲಾಖೆ	13.87	ತೆಂಗು ಮತ್ತು ಬಾಳೆ, ಸಿಬೇ , ತೋಟ ಅಭಿವೃದ್ಧಿ ಕಾಮಗಾರಿ	73	73	-	-
		350.79		769	769	-	-

ರೇಷ್ಮೆ ಇಲಾಖೆ

ಕ್ರ. ಸಂ.	ಯೋಜನೆ	ಹಂಚಿಕೆಯಾದ ಅನುದಾನ (ರೂ.ಲಕ್ಷಗಳಲ್ಲಿ)	ಕೈಗೊಂಡ ಕಾಮಗಾರಿಗಳ ಸ್ವರೂಪ	ಕಾಮಗಾರಿಗಳ ಸಂಖ್ಯೆ			
				ಕೈಗೆತ್ತಿ ಕೊಂಡ	ಪೂರ್ಣ ಗೊಂಡ	ಪ್ರಗತಿ ಯಲ್ಲಿರುವ	ಪ್ರಾರಂಭ ಮಾಡಬೇಕಾಗಿರುವ
1	ರೇಷ್ಮೆ ಅಭಿವೃದ್ಧಿ ಯೋಜನೆ – ಸಾಮಾನ್ಯ	3.900	ಫಲಾನುಭವಿ ಆಧಾರಿತ ಕಾರ್ಯಕ್ರಮಗಳು/ಚಟುವಟಿಕೆಗಳು	5	5	-	-
3	ರೇಷ್ಮೆ ಭಿವೃದ್ಧಿ ಯೋಜನೆ – ಗಿರಿಜನ ಉಪಯೋಜನೆ	2.700		1	1	-	-
4	ನೂತನ ಕರ್ತೃತ್ವ ಶಕ್ತಿ ಯೋಜನೆ – ಸಾಮಾನ್ಯ	0.371		3	3	-	-
5	ಕೇಂದ್ರ ಪುರಸ್ಕೃತ ಪ್ರದಾನ ಮಂತ್ರಿಗಳ ಕೃಷಿ ಸಿಂಚಾಯಿ ಯೋಜನೆ	5.228		6	6	-	-
6	ಜಿಲ್ಲಾ ಪಂಚಾಯತ್ ಯೋಜನೆ	16.210		15	15	-	-
	ಒಟ್ಟು	28.409		30	30	-	-

ಸಾರ್ವಜನಿಕ ಶಿಕ್ಷಣ ಇಲಾಖೆ

ಕ್ರ ಸಂ	ಯೋಜನೆ	ಬಿಡುಗಡೆ ಮಾಡಿರುವ ಅನುದಾನ (ಲಕ್ಷಗಳಲ್ಲಿ)	ಕೈಗೊಂಡ ಕಾಮಗಾರಿಗಳ ಸ್ವರೂಪ	ಕಾಮಗಾರಿಗಳ ಸಂಖ್ಯೆ			
				ಕೈಗೆತ್ತಿಕೊಂಡ	ಪೂರ್ಣಗೊಂಡ	ಪ್ರಗತಿ ಯಲ್ಲಿರುವ	ಪ್ರಾರಂಭ ಮಾಡಬೇಕಾಗಿರುವ
1	ರಾಜ್ಯ ವಲದ ಮುಂದುವರೆದ ಯೋಜನೆಯ	13.78	ಶಾಲಾ ಕೊಠಡಿ ದುರಸ್ಥಿ	4	3	-	1
2	ರಾಜ್ಯ ವಲದ ಮುಂದುವರೆದ ಯೋಜನೆಯ	36.950	ಶಾಲಾ ಕೊಠಡಿ ನಿರ್ಮಾಣ	2	1	-	1
3	ಲಿಂಕ್ ಡಾಕ್ಯುಮೆಂಟ್‌ನ ತಾಲ್ಲೂಕು ಪಂಚಾಯಿತಿ ನಿಂದ ಬಿಡುಗಡೆಯಾದ ಅನುದಾನ	22.00	ತಾಲ್ಲೂಕು ಪಂಚಾಯತಿ ಲಿಂಕ್ ಡಾಕ್ಯುಮೆಂಟ್ ನಿಂದ ದುರಸ್ಥಿ	14	14	-	-
4	ಜಿಲ್ಲಾ ಪಂಚಾಯಿತಿ ಲಿಂಕ್ ಡಾಕ್ಯುಮೆಂಟ್ ನಿಂದ ಬಿಡುಗಡೆಯಾದ ಅನುದಾನ	15.00	ಜಿಲ್ಲಾ ಪಂಚಾಯಿತಿ ಲಿಂಕ್ ಡಾಕ್ಯುಮೆಂಟ್ ನಿಂದ ದುರಸ್ಥಿ	9	9	-	-
5	ಸಮಗ್ರ ಶಿಕ್ಷಣ ವತಿಯಿಂದ ದುರಸ್ಥಿ ಕಾಮಗಾರಿಗೆ ಬಿಡುಗಡೆಯಾದ ಅನುದಾನ	4.00	ಸಮಗ್ರ ಶಿಕ್ಷಣ ವತಿಯಿಂದ ದುರಸ್ಥಿ ಕಾಮಗಾರಿ	2	2	-	-
	ಒಟ್ಟು	91.73		31	29	-	-

ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ

1	ಉದ್ಯಮ ಶೀಲತಾ ಯೋಜನೆ (ರೂ:5.00)	5.00	ವೈಯಕ್ತಿಕವಾಗಿ ಸ್ವಯಂ ಉದ್ಯೋಗ ಕೈಗೊಳ್ಳಲು ಸಹಾಯಧನ ಬಿಡುಗಡೆ ಮಾಡಲಾಗುವುದು.
2	ಉದ್ಯಮ ಶೀಲತಾ ಯೋಜನೆ (ರೂ:3.50)	3.50	ವೈಯಕ್ತಿಕವಾಗಿ ಸ್ವಯಂ ಉದ್ಯೋಗ ಕೈಗೊಳ್ಳಲು ಸಹಾಯಧನ ಬಿಡುಗಡೆ ಮಾಡಲಾಗುವುದು.
3	ಮೈಕ್ರೋ ಕ್ರೆಡಿಟ್ ಯೋಜನೆ	2.50	ಗುಂಪು ಚಟುವಟಿಕೆಗಳಿಗೆ ಸ್ವಯಂ ಉದ್ಯೋಗ ಕೈಗೊಳ್ಳಲು ಸಾಲ & ಸಹಾಯಧನ ಬಿಡುಗಡೆ ಮಾಡಲಾಗುವುದು.
4	ಗಂಗಾ ಕಲ್ಯಾಣ ಯೋಜನೆ	20.00	ವೈಯಕ್ತಿಕವಾಗಿ ಕೊಳವೆಬಾವಿ ಕೊರೆಯಲು ಸಾಲ & ಸಹಾಯಧನ ಬಿಡುಗಡೆ ಮಾಡಲಾಗುವುದು.
	ಒಟ್ಟು	**31.00**	

ವಿಧಾನಸಭೆ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:3631

ಅನುಬಂಧ-6

2017-18 ನೇ ಸಾಲಿನಲ್ಲಿ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ನೆಲಮಂಗಲ ವಿಧಾನಸಭಾ ಕ್ಷೇತ್ರದ (ಜಿಲ್ಲಾ/ತಾಲ್ಲೂಕು/ಗ್ರಾಮ) ಪಂಚಾಯಿತಿಗಳಿಗೆ ಇತರೆ ಇಲಾಖೆಗಳಿಂದ ಅನುಷ್ಠಾನಿಸಲಾದ ಪ್ರಮುಖ ಯೋಜನೆಗಳಡಿ ಹಂಚಿಕೆಯಾದ ಅನುದಾನ ಹಾಗೂ ಕೈಗೊಂಡ ಕಾಮಗಾರಿಗಳ ವಿವರ

ಮಹಾತ್ಮಗಾಂಧಿ ನರೇಗಾ ಯೋಜನೆ (ಒಗ್ಗೂಡಿಸುವಿಕೆ)

ಕ್ರ. ಸಂ.	ಇಲಾಖೆ ಹೆಸರು	ಯೋಜನೆ	ಹಂಚಿಕೆಯಾದ ಅನುದಾನ	ಕೈಗೊಂಡ ಕಾಮಗಾರಿಗಳ ಸ್ವರೂಪ	ಕಾಮಗಾರಿಗಳ ಸಂಖ್ಯೆ			
					ಕೈಗೆತ್ತಿ ಕೊಂಡ	ಪೂರ್ಣ ಗೊಂಡ	ಪ್ರಗತಿ ಯಲ್ಲಿರುವ	ಪ್ರಾರಂಭ ಮಾಡ ಬೇಕಾ ಗಿರುವ
1	ಪಿ.ಆರ್.ಇ.ಡಿ	ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನ	307.47	ರಸ್ತೆ ಅಭಿವೃದ್ಧಿ ಕಾಮಗಾರಿ, ಚರಂಡಿ ಕಾಮಗಾರಿ ಮಳೆ ನೀರು ಕಾಲುವೆ ಕಾಮಗಾರಿ	76	76	-	-
2	ಅರಣ್ಯ ಇಲಾಖೆ		52.71	ರಸ್ತೆಬದಿ ನೆಡುತೋಪು ನಿರ್ಮಾಣ & ನಿರ್ವಹಣೆ,ಕೆರೆ ಅಂಗಳ, ಶಾಲೆ ಆವರಣ, ಸಂಘ ಸಂಸ್ಥೆ ನೆಡುತೋಪು, ಕೃಷಿ ಅರಣ್ಯ ನೆಡುತೋಪು, ಸಸ್ಯಕ್ಷೇತ್ರ ನಿರ್ಮಾಣ & ನಿರ್ವಹಣೆ	180	180	-	-
3	ಕೃಷಿ ಇಲಾಖೆ		15.45	ಎರೆಹುಳ ತೊಟ್ಟಿ ಮತ್ತು ರಿಚಾರ್ಜ್ ಪಿಟ್	74	74	-	-
4	ರೇಷ್ಮೆ ಇಲಾಖೆ		4.11	ಹಿಪ್ಪು ನೇರಳೆ ತೋಟ ಅಭಿವೃದ್ಧಿ ಕಾಮಗಾರಿ,	3	3	-	-
5	ತೋಟಗಾರಿಕೆ ಇಲಾಖೆ		14.94	ತೆಂಗು ಮತ್ತು ಬಾಳೆ ಸಿಬೇ ತೋಟ ಅಭಿವೃದ್ಧಿ ಕಾಮಗಾರಿ	36	36	-	-

2018-19 ನೇ ಸಾಲಿನಲ್ಲಿ, ಬೆಂಗಳೂರು ಗ್ರಾಮಾಂತರ ಜಿಲ್ಲೆಯ ನೆಲಮಂಗಲ ವಿಧಾನಸಭಾ ಕ್ಷೇತ್ರದ ಪಂಚಾಯಿತಿಗಳಿಗೆ (ಜಿಲ್ಲಾ/ತಾಲ್ಲೂಕು/ಗ್ರಾಮ) ಇತರೆ ಇಲಾಖೆಗಳಿಂದ ಅನುಷ್ಠಾನಿಸಲಾದ ಪ್ರಮುಖ ಯೋಜನೆಗಳಡಿ ಹಂಚಿಕೆಯಾದ ಅನುದಾನ ಹಾಗೂ ಕೈಗೊಂಡ ಕಾಮಗಾರಿಗಳ ವಿವರ

ಮಹಾತ್ಮಗಾಂಧಿ ನರೇಗಾ ಯೋಜನೆ (ಒಗ್ಗೂಡಿಸುವಿಕೆ)

ಕ್ರ. ಸಂ.	ಇಲಾಖೆ ಹೆಸರು	ಯೋಜನೆ	ಹಂಚಿಕೆಯಾದ ಅನುದಾನ	ಕೈಗೊಂಡ ಕಾಮಗಾರಿಗಳ ಸ್ವರೂಪ	ಕಾಮಗಾರಿಗಳ ಸಂಖ್ಯೆ			
					ಕೈಗೆತ್ತಿಕೊಂಡ	ಪೂರ್ಣಗೊಂಡ	ಪ್ರಗತಿಯಲ್ಲಿರುವ	ಪ್ರಾರಂಭ ಮಾಡಬೇಕಾಗಿರುವ
1	ಪಿ.ಆರ್.ಇ.ಡಿ	ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ	323.98	ರಸ್ತೆ ಅಭಿವೃದ್ಧಿ ಕಾಮಗಾರಿ, ಚರಂಡಿ ಕಾಮಗಾರಿ ಮಳೆ ನೀರು ಕಾಲುವೆ ಕಾಮಗಾರಿ, ಚೆಕ್ ಡ್ಯಾಂ.	121	121	-	-
2	ಅರಣ್ಯ ಇಲಾಖೆ		50.97	ರಸ್ತೆಬದಿ ನೆಡುತೋಪು ನಿರ್ಮಾಣ & ನಿರ್ವಹಣೆ,ಕೆರೆ ಅಂಗಳ, ಶಾಲೆ ಆವರಣ, ಸಂಘ ಸಂಸ್ಥೆ ನೆಡುತೋಪು, ಕೃಷಿ ಅರಣ್ಯ ನೆಡುತೋಪು, ಸಸ್ಯಕ್ಷೇತ್ರ ನಿರ್ಮಾಣ & ನಿರ್ವಹಣೆ	214	214	-	-
3	ಕೃಷಿ ಇಲಾಖೆ		24.74	ಎರೆಹುಳ ತೊಟ್ಟಿ ಮತ್ತು ರಿಚಾರ್ಜ್ ಪಿಟ್, ಬದು ನಿರ್ಮಾಣ ಕಾಮಗಾರಿ.	80	80	-	-
4	ರೇಷ್ಮೆ ಇಲಾಖೆ		3.83	ಹಿಪ್ಪು ನೇರಳೆ ತೋಟ ಅಭಿವೃದ್ಧಿ ಕಾಮಗಾರಿ	3	3	-	-
5	ತೋಟಗಾರಿಕೆ ಇಲಾಖೆ		18.9	ತೆಂಗು ಮತ್ತು ಬಾಳೆ ತೋಟ ಅಭಿವೃದ್ಧಿ ಕಾಮಗಾರಿ	138	138	-	-

2019-20 ನೇ ಸಾಲಿನಲ್ಲಿ, ಬೆಂಗಳೂರು ಗ್ರಾಮಾಂತರ ಜಿಲ್ಲೆಯ ನೆಲಮಂಗಲ ವಿಧಾನಸಭಾ ಕ್ಷೇತ್ರದ ಪಂಚಾಯಿತಿಗಳಿಗೆ (ಜಿಲ್ಲಾ/ತಾಲ್ಲೂಕು/ಗ್ರಾಮ) ಇತರೆ ಇಲಾಖೆಗಳಿಂದ ಅನುಷ್ಠಾನಿಸಲಾದ ಪ್ರಮುಖ ಯೋಜನೆಗಳಡಿ ಹಂಚಿಕೆಯಾದ ಅನುದಾನ ಹಾಗೂ ಕೈಗೊಂಡ ಕಾಮಗಾರಿಗಳ ವಿವರ

ಮಹಾತ್ಮಗಾಂಧಿ ನರೇಗಾ ಯೋಜನೆ (ಒಗ್ಗೂಡಿಸುವಿಕೆ)

ಕ್ರ. ಸಂ.	ಇಲಾಖೆ ಹೆಸರು	ಯೋಜನೆ	ಹಂಚಿಕೆಯಾದ ಅನುದಾನ	ಕೈಗೊಂಡ ಕಾಮಗಾರಿಗಳ ಸ್ವರೂಪ	ಕಾಮಗಾರಿಗಳ ಸಂಖ್ಯೆ			
					ಕೈಗೆತ್ತಿಕೊಂಡ	ಪೂರ್ಣಗೊಂಡ	ಪ್ರಗತಿಯಲ್ಲಿರುವ	ಪ್ರಾರಂಭ ಮಾಡಬೇಕಾಗಿರುವ
1	ಪಿ.ಆರ್.ಇ.ಡಿ	ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ	244.46	ರಸ್ತೆ ಅಭಿವೃದ್ಧಿ ಕಾಮಗಾರಿ, ಚರಂಡಿ ಕಾಮಗಾರಿ ಮಳೆ ನೀರು ಕಾಲುವೆ ಕಾಮಗಾರಿ, ಚೆಕ್ ಡ್ಯಾಂ.	166	166	-	-
2	ಅರಣ್ಯ ಇಲಾಖೆ		62.86	ರಸ್ತೆಬದಿ ನೆಡುತೋಪು ನಿರ್ಮಾಣ & ನಿರ್ವಹಣೆ,ಕೆರೆ ಅಂಗಳ, ಶಾಲೆ ಆವರಣ, ಸಂಘ ಸಂಸ್ಥೆ ನೆಡುತೋಪು, ಕೃಷಿ ಅರಣ್ಯ ನೆಡುತೋಪು, ಸಸ್ಯಕ್ಷೇತ್ರ ನಿರ್ಮಾಣ & ನಿರ್ವಹಣೆ	365	365	-	-
3	ಕೃಷಿ ಇಲಾಖೆ		26.6	ಕಂದಕ ಬದು ಮತ್ತು ಕೋಡಿ ನಿರ್ಮಾಣ ಕಾಮಗಾರಿ, ಕೃಷಿಹೊಂಡ ನಿರ್ಮಾಣ,	123	123	-	-
4	ರೇಷ್ಮೆ ಇಲಾಖೆ		3.00	ಹಿಪ್ಪು ನೇರಳೆ ತೋಟ ಅಭಿವೃದ್ಧಿ ಕಾಮಗಾರಿ	42	42	-	-
5	ತೋಟಗಾರಿಕೆ ಇಲಾಖೆ		13.87	ತೆಂಗು ಮತ್ತು ಬಾಳೆ, ಸಿಬೇ , ತೋಟ ಅಭಿವೃದ್ಧಿ ಕಾಮಗಾರಿ	73	73	-	-

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 3633
ಮಾನ್ಯ ಸದಸ್ಯರ ಹೆಸರು : ಶ್ರೀ. ಶ್ರೀನಿವಾಸಮೂರ್ತಿ ಕೆ. ಡಾ॥ (ನೆಲಮಂಗಲ)
ಉತ್ತರಿಸುವವರು : ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖಾ ಸಚಿವರು
ಉತ್ತರಿಸಬೇಕಾದ ದಿನಾಂಕ : 24-03-2021.

ಕ್ರ.ಸಂ.	ಪ್ರಶ್ನೆ	ಉತ್ತರ
ಅ)	ಕಳೆದ 3 ವರ್ಷಗಳಿಂದ ನೆಲಮಂಗಲ ವಿಧಾನ ಸಭಾ ಕ್ಷೇತ್ರಕ್ಕೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ನಿಗಮದಿಂದ ಬಿಡುಗಡೆ ಮಾಡಿದ ಅನುದಾನವೆಷ್ಟು; (ಯೋಜನಾವಾರು, ಉದ್ದೇಶವಾರು ವಿವರ ನೀಡುವುದು)	ಕಳೆದ ಮೂರು ವರ್ಷಗಳಿಂದ ಕರ್ನಾಟಕ ರಾಜ್ಯ ಮಹಿಳಾ ಅಬಿವೃದ್ಧಿ ನಿಗಮದಿಂದ ನೆಲಮಂಗಲ ವಿಧಾನಸಭಾ ಕ್ಷೇತ್ರಕ್ಕೆ ಬಿಡುಗಡೆ ಮಾಡಿದ ಯೋಜನೆವಾರು, ಉದ್ದೇಶವಾರು ಮಾಹಿತಿಯನ್ನು ಅನುಬಂಧ-1 ರಲ್ಲಿ ಒದಗಿಸಲಾಗಿದೆ.
ಆ)	ಮಹಿಳಾ ಅಭಿವೃದ್ಧಿ ನಿಗಮದಿಂದ ಜಾರಿಯಲ್ಲಿರುವ ಯೋಜನೆಗಳಾವುವು; ಇದರ ಅನುಷ್ಠಾನಕ್ಕೆ ಇರುವ ಮಾನದಂಡಗಳೇನು	ಮಹಿಳಾ ಅಭಿವೃದ್ಧಿ ನಿಗಮದಿಂದ ಜಾರಿಯಲ್ಲಿರುವ ಯೋಜನೆಗಳ ಮಹಿತಿಯನ್ನು ಅನುಬಂಧ-2 ರಲ್ಲಿ ಒದಗಿಸಲಾಗಿದೆ.
ಇ)	ಈ ಕ್ಷೇತ್ರದಲ್ಲಿರುವ ಒಟ್ಟು ಅಂಗನವಾಡಿ ಕಾರ್ಯಕರ್ತರ ಸಂಖ್ಯೆ ಎಷ್ಟು; ಇವರಿಗೆ ರಾಜ್ಯ ಸರ್ಕಾರ ನೀಡುತ್ತಿರುವ ವೇತನ ಮತ್ತು ಸೌಲಭ್ಯಗಳೇನು; (ವಿವರ ನೀಡುವುದು)	ನೆಲಮಂಗಲ ವಿಧಾನಸಭಾ ಕ್ಷೇತ್ರದಲ್ಲಿ ಒಟ್ಟು 280 ಅಂಗನವಾಡಿ ಕಾರ್ಯಕರ್ತೆಯರು ಹಾಗೂ 220 ಅಂಗನವಾಡಿ ಸಹಾಯಕಿಯರಿದ್ದು ಇವರಿಗೆ ರಾಜ್ಯ ಸರ್ಕಾರದ ವತಿಯಿಂದ ಕ್ರಮವಾಗಿ ಮಾಹೆಯಾನ ರೂ. 5500/- ಹಾಗೂ ರೂ. 2750/- ಗಳ ಗೌರವಧನವನ್ನು ಹಾಗೂ ಕೇಂದ್ರ ಸರ್ಕಾರದ ವತಿಯಿಂದ ಕ್ರಮವಾಗಿ ಮಾಹೆಯಾನ ರೂ. 4500/- ಹಾಗೂ ರೂ. 2500/- ಗಳನ್ನು ಒಟ್ಟು ಅಂಗನವಾಡಿ ಕಾರ್ಯಕರ್ತೆಯರಿಗೆ ರೂ. 10000/- ಹಾಗೂ ಸಹಾಯಕಿಯರಿಗೆ ರೂ. 5250/-ಗಳ ಗೌರವಧನವನ್ನು ಪಾವತಿಸಲಾಗುತ್ತಿದೆ. ಸಾದಿಲ್ವಾರು ವೆಚ್ಚ, ಟಿ.ಎ, ಡಿ.ಎ, ಸಮವಸ್ತ್ರ, ಪೂರಕ ಪೌಷ್ಠಿಕ ಆಹಾರ, ಪ್ರಧಾನ ಮಂತ್ರಿ ಮಾತೃವಂದನಾ ಯೋಜನೆಯಡಿ ಒಂದು ಫಲಾನುಭವಿಯ ಮೂರು ಕಂತುಗಳ ಮೂರು ಅರ್ಜಿಗಳನ್ನು ಪಡೆದು ನೀಡುವುದಕ್ಕೆ 200 ರೂಗಳ ಹಾಗೂ ಭಾಗ್ಯಲಕ್ಷ್ಮಿ ಯೋಜನೆಯಡಿ ಫಲಾನುಭವಿಗಳಿಂದ ಅರ್ಜಿಗಳನ್ನು ಸ್ವೀಕರಿಸಿ ನೀಡುವುದಕ್ಕೆ ವಾರ್ಷಿಕ 300 ಪ್ರೋತ್ಸಾಹಧನವನ್ನು ನೀಡಲಾಗುತ್ತಿದೆ.
ಈ)	ಹಿರಿಯ ನಾಗರೀಕರ ಹಾಗೂ ವಿಕಲಚೇತನರಿಗೆ ಇರುವ ಯೋಜನೆಗಳಾವುವು; ಈ ಯೋಜನೆಗಳ ಅನುಷ್ಠಾನಕ್ಕೆ ಇರುವ ಮಾನದಂಡಗಳೇನು	ಹಿರಿಯ ನಾಗರಿಕರ ಹಾಗೂ ವಿಕಲಚೇತನರಿಗೆ ಇರುವ ಯೋಜನೆಗಳ ವಿವರಗಳನ್ನು ಅನುಬಂಧ-3 ರಲ್ಲಿ ಒದಗಿಸಲಾಗಿದೆ. ಹಾಗೂ ಯೋಜನೆಗಳ ಅನುಷ್ಠಾನಕ್ಕೆ ಇರುವ ಮಾನದಂಡಗಳ ವಿವರಗಳನ್ನು ಅನುಬಂಧ-4ರಲ್ಲಿ ಒದಗಿಸಲಾಗಿದೆ.
ಉ)	ನೆಲಮಂಗಲ ಕ್ಷೇತ್ರದಲ್ಲಿ ಯಾವ ಯಾವ ಸ್ತ್ರೀಶಕ್ತಿ ಗುಂಪುಗಳಿಗೆ ಸಹಾಯಧನ ನೀಡಲಾಗಿದೆ? (ಸ್ತ್ರೀಶಕ್ತಿ ಸಂಘವಾರು ಮಾಹಿತಿ ಒದಗಿಸುವುದು)	ನೆಲಮಂಗಲ ಕ್ಷೇತ್ರದಲ್ಲಿರುವ ಸ್ತ್ರೀಶಕ್ತಿ ಗುಂಪುಗಳಿಗೆ ನೀಡಲಾಗಿರುವ ಸಹಾಯಧನ ವಿವರವನ್ನು ಅನುಬಂಧ-5 ರಲ್ಲಿ ಒದಗಿಸಲಾಗಿದೆ.

ಸಂಖ್ಯೆ: ಮಮಇ/34/ಮಲನಿ 2021

(ಶಶಿಕಲಾ ಅ. ಜೊಲ್ಲೆ)
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಮತ್ತು ವಿಕಲಚೇತನರ
ಹಾಗೂ ಹಿರಿಯ ನಾಗರೀಕರ ಸಬಲೀಕರಣ ಸಚಿವರು.

ಅನುಬಂಧ-1

ಕಳೆದ ಮೂರು ವರ್ಷಗಳಿಂದ ನೆಲಮಂಗಲ ವಿಧಾನಸಭಾ ಕ್ಷೇತ್ರಕ್ಕೆ ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ವಿವಿಧ ಯೋಜನೆಗಳಡಿ ಬಿಡುಗಡೆ ಮಾಡಿದ ಅನುದಾನ ಮತ್ತು ಯೋಜನೆಗಳ ಉದ್ದೇಶ.

(ರೂ.ಲಕ್ಷಗಳಲ್ಲಿ)

ಕ್ರಸಂ	ಯೋಜನೆಯ ಹೆಸರು	ವರ್ಷ	ಬಿಡುಗಡೆಯಾದ ಅನುದಾನ	ಯೋಜನೆಯ ಉದ್ದೇಶ
1	ಉದ್ಯೋಗಿನಿ	2017-18	4.49	ಮಹಿಳೆಯರು ಆದಾಯೋತ್ಪನ್ನ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡು, ಆರ್ಥಿಕವಾಗಿ ಸ್ವಾವಲಂಬನೆಯನ್ನು ಹೊಂದುವುದು.
		2018-19	5.13	
		2019-20	6.45	
2	ಕಿರುಸಾಲ	2017-18	4.00	ಸ್ತ್ರೀ-ಶಕ್ತಿ ಸ್ವಸಹಾಯ ಗುಂಪಿನ ಸದಸ್ಯರು ಆರ್ಥಿಕ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡು, ಸ್ವಾವಲಂಬನೆಯನ್ನು ಹೊಂದುವುದು.
		2018-19	2.00	
		2019-20	2.00	
3	ಸಮೃದ್ಧಿ	2017-18	7.90	ಮಹಿಳಾ ಬೀದಿ ಬದಿ ವ್ಯಾಪಾರಿಗಳು ಲೇವಾದೇವಿದಾರರಿಂದ ಹೆಚ್ಚಿನ ಬಡ್ಡಿ ನೀಡಿ ಸಾಲ ಪಡೆಯುವುದನ್ನು ತಡೆಗಟ್ಟಲು, ನಿರುದ್ಯೋಗ ಸಮಸ್ಯೆಯ ಸುಧಾರಣೆಗಾಗಿ.
		2018-19	1.90	
		2019-20	1.90	
4	ಧನಶ್ರೀ	2017-18	2.50	ಹೆಚ್.ಐ.ವಿ ಸೋಂಕಿತ ಮಹಿಳೆಯರು ಸ್ವಯಂ ಉದ್ಯೋಗ ಕೈಗೊಂಡು ಆರ್ಥಿಕ ಅಭಿವೃದ್ಧಿ ಹೊಂದಲು ಪ್ರೇರೇಪಿಸುವುದು
		2018-19	3.50	
		2019-20	0.00	
5	ಲಿಂಗತ್ವ ಅಲ್ಪಸಂಖ್ಯಾತರು	2017-18	1.50	ಲಿಂಗತ್ವ ಅಲ್ಪಸಂಖ್ಯಾತ್ಯರು ಆದಾಯೋತ್ಪನ್ನ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡು, ಸಮಾಜದಲ್ಲಿ ಗೌರವಾನ್ವಿತ ಜೀವನ ನಡೆಸಲು ಸಹಾಯ ಹಾಗೂ ಈ ಸಮುದಾಯವನ್ನು ಸಮಾಜದ ಮುಖ್ಯವಾಹಿನಿಗೆ ತರುವುದು.
		2018-19	3.50	
		2019-20	0.00	
6	ಮಹಿಳಾ ಉದ್ದಿಮೆದಾರರಿಗೆ ಬಡ್ಡಿಸಹಾಯಧನದ ಯೋಜನೆ (ಕೆಎಸ್ಎಫ್‌ಸಿ ಮುಖಾಂತರ)	2017-18	22.14	ಮಹಿಳೆಯರು ಸಣ್ಣ/ಮಧ್ಯಮ ಕೈಗಾರಿಕೆಗಳು, ಸೇವಾ ಘಟಕಗಳು, ಹಾಗೂ ಉದ್ಯೋಗ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಲು ನಿಗಮದಿಂದ ಬಡ್ಡಿ ಸಹಾಯಧನ.
		2018-19	101.55	
		2019-20	157.23	
7	ಚೇತನ	2017-18	0.00	ಲೈಂಗಿಕ ಕಾರ್ಯಕರ್ತೆಯರಿಗೆ ಸಾಲ ಮತ್ತು ಸಹಾಯ ಧನ ಆದಾಯೋತ್ಪನ್ನ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡು, ಸಮಾಜದಲ್ಲಿ ಗೌರವಾನ್ವಿತ ಜೀವನ ನಡೆಸಲು ಸಹಾಯ.
		2018-19	0.00	
		2019-20	0.00	

ಅನುಬಂಧ–2

ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ವಿವಿಧ ಯೋಜನೆಗಳಡಿ ಸೌಲಭ್ಯ ಪಡೆಯಲು ಹೊಂದಿರಬೇಕಾದ ಅರ್ಹತೆಗಳು

ಕ್ರ.ಸಂ	ಫಲಾನುಭವಿ ಆಧಾರಿತ ಯೋಜನೆ/ಕಾರ್ಯ ಕ್ರಮ	ಅನುಷ್ಠಾನಗೊಳಿಸಲು ಅನುಸರಿಸುತ್ತಿರುವ ಮಾನದಂಡಗಳು
1	ಉದ್ಯೋಗಿನಿ	1. ಕುಟುಂಬದ ವಾರ್ಷಿಕ ಆದಾಯ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ರೂ.2,00,000/– ಗಳು ಹಾಗೂ ವಿಶೇಷ ವರ್ಗ ಹಾಗೂ ಸಾಮಾನ್ಯ ವರ್ಗದ ಮಹಿಳೆಯರಿಗೆ ರೂ.1,50,000/–ಗಳಿಗೆ ಮೀರಿರಬಾರದು.2. ಎಲ್ಲಾ ವರ್ಗದ ಮಹಿಳೆಯರಿಗೆ ವಯೋಮಿತಿ 18 ರಿಂದ 55 ವರ್ಷಗಳು. 3. ಸಾಲ ಮಂಜೂರಾದ ನಂತರ ಉದ್ಯಮಶೀಲತ ತರಬೇತಿಗೆ ಕಡ್ಡಾಯವಾಗಿ ಹಾಜರಾಗಬೇಕು. 4. ರಾಷ್ಟ್ರೀಕೃತ ಬ್ಯಾಂಕುಗಳಲ್ಲಿ ಬ್ಯಾಂಕ್ ಖಾತೆ ಹೊಂದುವುದು. ಬ್ಯಾಂಕ್ ಖಾತೆಯೊಂದಿಗೆ ಅರ್ಜಿದಾರರ ಆಧಾರ ಸೀಡಿಂಗ್ ಆಗಿರಬೇಕು. 5. ಮಾನ್ಯ ವಿಧಾನಸಭಾ ಸದಸ್ಯರ ಅಧ್ಯಕ್ಷತೆಯ ಆಯ್ಕೆ ಸಮಿತಿಯಲ್ಲಿ ಫಲಾನುಭವಿಗಳ ಆಯ್ಕೆ ಮಾಡಲಾಗುತ್ತದೆ.
2	ಲಿಂಗತ್ವ ಅಲ್ಪಸಂಖ್ಯಾತರ ಪುನರ್ವಸತಿ ಯೋಜನೆ	1. ವಯೋಮಿತಿ 18 ವರ್ಷ ಮೀರಿರಬೇಕು. 2.ಲಿಂಗತ್ವ ಅಲ್ಪಸಂಖ್ಯಾತರು ಸಮುದಾಯ ಆಧಾರಿತ ಸಂಸ್ಥೆ ಅಥವಾ ಜಿಲ್ಲಾಧಿಕಾರಿಗಳು ಅನುಮೋದಿಸಿದ ಸಂಸ್ಥೆಗಳಾದ ಸಂಗಮ ಅಥವಾ ಕೆ.ಎಸ್.ಎಂ.ಎಫ್. ಸಂಸ್ಥೆಗಳಲ್ಲಿ ನೊಂದಣಿಯಾಗಿರಬೇಕು. 3.ರಾಷ್ಟ್ರೀಕೃತ ಬ್ಯಾಂಕುಗಳಲ್ಲಿ ಬ್ಯಾಂಕ್ ಖಾತೆ ಹೊಂದುವುದು. ಬ್ಯಾಂಕ್ ಖಾತೆಯೊಂದಿಗೆ ಅರ್ಜಿದಾರರ ಆಧಾರ ಸೀಡಿಂಗ್ ಆಗಿರಬೇಕು. 4.ಯಾವುದೇ ಬ್ಯಾಂಕು/ಸಂಸ್ಥೆಗಳಲ್ಲಿ ಸುಸ್ತಿದಾರರಾಗಿರಬಾರದು ಎನ್ನುವುದು ಕಡ್ಡಾಯವಾಗಿರುತ್ತದೆ. 5. ಮಾನ್ಯ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯ ಆಯ್ಕೆ ಸಮಿತಿಯಲ್ಲಿ ಫಲಾನುಭವಿಗಳನ್ನು ಆಯ್ಕೆ ಮಾಡಲಾಗುತ್ತದೆ.
3	ಕಿರುಸಾಲ ಯೋಜನೆ	1. ಗುಂಪಿನ ಉಳಿತಾಯ ಕನಿಷ್ಟ ರೂ.1.00 ಲಕ್ಷ ಅಥವಾ ಅದಕ್ಕಿಂತ ಹೆಚ್ಚು ಇರಬೇಕು. 2.ಸ್ತ್ರೀಶಕ್ತಿ ಗುಂಪು ತಾಲ್ಲೂಕು ಒಕ್ಕೂಟದಲ್ಲಿ ನೊಂದಣಿಯಾಗಿದ್ದು, ಸದಸ್ಯತ್ವ ಹೊಂದಿರಬೇಕು. 3.ಗುಂಪಿನ ಸದಸ್ಯರೆಲ್ಲರೂ ಸೇರಿ ಒಂದೇ ಉದ್ದಿಮೆ ಕೈಗೊಳ್ಳಬೇಕು. 4.ರಾಷ್ಟ್ರೀಕೃತ ಬ್ಯಾಂಕುಗಳಲ್ಲಿ ಬ್ಯಾಂಕ್ ಖಾತೆ ಹೊಂದುವುದು. 5.ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ಸಂಘದ ಗ್ರೇಡಿಂಗ್ ಆಗಿರಬೇಕು. ಎ ಅಥವಾ ಬಿ ಗ್ರೇಡ್ ಪಡೆದಿರಬೇಕು. 6. ಮಾನ್ಯ ವಿಧಾನಸಭಾ ಸದಸ್ಯರ ಅಧ್ಯಕ್ಷತೆಯ ಆಯ್ಕೆ ಸಮಿತಿಯಲ್ಲಿ ಫಲಾನುಭವಿಗಳನ್ನು ಆಯ್ಕೆ ಮಾಡಲಾಗುತ್ತದೆ.
4	ಚೇತನ ಯೋಜನೆ	1. ವಯೋಮಿತಿ 18 ವರ್ಷ ಮೀರಿರಬೇಕು. 2.ಲೈಂಗಿಕ ಕಾರ್ಯಕರ್ತೆಯರ ಸಮುದಾಯ ಆಧಾರಿತ ಸಂಸ್ಥೆಯ ಗುರುತಿನ ಚೀಟಿ ಹೊಂದಿರಬೇಕು 3.ರಾಷ್ಟ್ರೀಕೃತ ಬ್ಯಾಂಕುಗಳಲ್ಲಿ ಬ್ಯಾಂಕ್ ಖಾತೆ ಹೊಂದುವುದು. ಬ್ಯಾಂಕ್ ಖಾತೆಯೊಂದಿಗೆ ಅರ್ಜಿದಾರರ ಆಧಾರ ಸೀಡಿಂಗ್ ಆಗಿರಬೇಕು. 4.ಯಾವುದೇ ಬ್ಯಾಂಕು/ಸಂಸ್ಥೆಗಳಲ್ಲಿ ಸುಸ್ತಿದಾರರಾಗಿರಬಾರದು ಎನ್ನುವುದು ಕಡ್ಡಾಯವಾಗಿರುತ್ತದೆ. 5.ಎಲ್ಲಾ ವರ್ಗದ ದಮನಿತ ಮಹಿಳೆಯರಿಗೆ ಇ.ಡಿ.ಪಿ. ತರಬೇತಿಯೊಂದಿಗೆ ಸೌಲಭ್ಯ ನೀಡಲಾಗುತ್ತದೆ. 6.ಮಾನ್ಯ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯ ಆಯ್ಕೆ ಸಮಿತಿಯಲ್ಲಿ ಫಲಾನುಭವಿಗಳನ್ನು ಆಯ್ಕೆಮಾಡಲಾಗುತ್ತದೆ.

5	ಮಹಿಳಾ ತರಬೇತಿ ಯೋಜನೆ	1 ಆರ್ಥಿಕವಾಗಿ ಹಿಂದುಳಿದ ಮಹಿಳೆಯರಿಗೆ, ವಿಧವೆಯರಿಗೆ, ನಿರ್ಗತಿಕ ಮತ್ತು ವಿಕಲಚೇತನರಿಗೆ ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಮಹಿಳೆಯರಿಗೆ ತರಬೇತಿ ನೀಡಿ ಉದ್ಯಮಶೀಲತೆ ಬೆಳೆಸುವುದು. 2.ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯಿಂದ ಮಾನ್ಯತೆ ಪಡೆದ ತರಬೇತಿ ಸಂಸ್ಥೆಗಳ ಮೂಲಕ ತರಬೇತಿಯನ್ನು ನೀಡುವುದು. 3. ವಯೋಮಿತಿ 18 ರಿಂದ 45 ವರ್ಷಗಳು.
6	ಸಮೃದ್ಧಿ ಯೋಜನೆ	1. 18 ರಿಂದ 60 ವರ್ಷ ವಯೋಮಿತಿ. 2. ನಗರ ಪ್ರದೇಶಗಳ ವ್ಯಾಪ್ತಿಯಲ್ಲಿ ಮಹಾನಗರ ಪಾಲಿಕೆ, ನಗರ ಸಭೆ, ಪುರಸಭೆ ಹಾಗೂ ಪಟ್ಟಣ ಪಂಚಾಯಿತಿಗಳಲ್ಲಿ ಪೌರಾಡಳಿತ ಇಲಾಖೆಯಲ್ಲಿ ಮತ್ತು ಬೆಂಗಳೂರು ನಗರ ಪ್ರದೇಶಕ್ಕೆ ಸಂಬಂಧಿಸಿದಂತೆ ಬೃಹತ್ ಮಹಾನಗರ ಪಾಲಿಕೆಯಲ್ಲಿ 'ಬೀದಿಬದಿ ವ್ಯಾಪಾರಿ' ಎಂದು ನೊಂದಣಿ ಮಾಡಿಸಿರುವ ಗುರುತಿನ ಚೀಟಿಯನ್ನು ಹೊಂದಿರಬೇಕು. ಗ್ರಾಮೀಣ ಪ್ರದೇಶಗಳ ವ್ಯಾಪ್ತಿಯಲ್ಲಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ (ಪಿ.ಡಿ.ಓ) ರವರಿಂದ ಬೀದಿಬದಿ ವ್ಯಾಪಾರಿ ಎಂದು ದೃಢೀಕರಿಸಿದ ದಾಖಲೆಯನ್ನು ಪಡೆದಿರಬೇಕು. 3. ರಾಷ್ಟ್ರೀಕೃತ ಬ್ಯಾಂಕುಗಳಲ್ಲಿ ಬ್ಯಾಂಕ್ ಖಾತೆ ಹೊಂದುವುದು. ಬ್ಯಾಂಕ್ ಖಾತೆಯೊಂದಿಗೆ ಅರ್ಜಿದಾರರ ಆಧಾರ ಸೀಡಿಂಗ್ ಆಗಿರಬೇಕು. 4.ಮಾನ್ಯ ವಿಧಾನಸಭಾ ಶಾಸಕರ ಅಧ್ಯಕ್ಷತೆಯ ಆಯ್ಕೆ ಸಮಿತಿಯಲ್ಲಿ ಫಲಾನುಭವಿಗಳನ್ನು ಆಯ್ಕೆ ಮಾಡಲಾಗುತ್ತದೆ. 5.ಅರ್ಜಿದಾರರು ಕಡ್ಡಾಯವಾಗಿ ಬಿ.ಪಿ.ಎಲ್. ಕಾರ್ಡ್ ಹೊಂದಿರವಂತಹ ಮಹಿಳೆಯಾಗಿರಬೇಕು.
7	ಧನಶ್ರೀ ಯೋಜನೆ	1. ಅರ್ಜಿದಾರರು ಹೆಚ್.ಐ.ವಿ. ಸೋಂಕಿತರೆಂದು ಆರೋಗ್ಯ ಕೇಂದ್ರದಲ್ಲಿ/ಐ.ಸಿ.ಟಿ.ಸಿ. ಕೇಂದ್ರಗಳಲ್ಲಿ ಪಡೆದ ವೈದ್ಯಕೀಯ ವರದಿಯನ್ನು ಹೊಂದಿರುವುದು. 2. ಮಾನ್ಯ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯ ಆಯ್ಕೆ ಸಮಿತಿಯಲ್ಲಿ ಫಲಾನುಭವಿಗಳನ್ನು ಆಯ್ಕೆ ಮಾಡಲಾಗುತ್ತದೆ. 3.ಅರ್ಜಿದಾರರು ರಾಷ್ಟ್ರೀಕೃತ ಬ್ಯಾಂಕ್ ಖಾತೆಯನ್ನು ಹೊಂದಿದ್ದು, ಚಾಲ್ತಿಯಲ್ಲಿರಬೇಕು. 4.ಅರ್ಜಿದಾರರು 18 ರಿಂದ 60 ವರ್ಷದೊಳಗಿರಬೇಕು. 5. ಅರ್ಜಿದಾರರು ಖಾತೆ ಹೊಂದಿರುವ ಆರ್ಥಿಕ ಸಂಸ್ಥೆ/ ಬ್ಯಾಂಕುಗಳಲ್ಲಿ ಸಾಲಗಾರರಾಗಿರಬಾರದು.
8	ಬಡ್ಡಿ ಸಹಾಯಧನ ಯೋಜನೆ (ಕೆ.ಎಸ್.ಎಫ್.ಸಿ. ಮುಖಾಂತರ)	1.ಹಾಲಿ ಕಾರ್ಯನಿರ್ವಹಿಸುತ್ತಿರುವ ಸಣ್ಣ/ಮಧ್ಯಮ ಕೈಗಾರಿಕೆಗಳು ಹಾಗೂ ಸೇವಾ ಘಟಕಗಳ ಉದ್ದಿಮೆದಾರರಿಗೆ ತಮ್ಮ ಘಟಕವನ್ನು ಅಭಿವೃದ್ಧಿ ಪಡಿಸುವ ಸಲುವಾಗಿ/ ಆಧುನೀಕರಣಗೊಳಿಸುವ ಸಲುವಾಗಿ. ಘಟಕ ವೆಚ್ಚ ಕನಿಷ್ಠ ರೂ.5ಲಕ್ಷದಿಂದ ಗರಿಷ್ಠ ರೂ.2ಕೋಟಿಗಳ ವರೆಗೆ ಆರ್ಥಿಕ ನೆರವು ಒದಗಿಸಲಾಗುವುದು. 2. * ಈ ಘಟಕದ ಮಾಲೀಕರು ಮಹಿಳಾ ಅಭ್ಯರ್ಥಿಯಾಗಿರಬೇಕು. * ಪಾಲುದಾರಿಕೆಯ ಉದ್ಯಮ/ನಿಯಮಿತ ಕಂಪನಿಗಳಲ್ಲಿ ಹೆಚ್ಚಿನ ಷೇರು/ನಿರ್ದೇಶಕರು ಶೇ 5ರಷ್ಟು ಇರಬೇಕು. * ಫಲಾನುಭವಿಗಳು ಒಂದು ಸಲ ಮಾತ್ರ ಸೌಲಭ್ಯ ಪಡೆಯಲು ಅರ್ಹರಾಗಿರುತ್ತಾರೆ.

9	ಮಾಜಿ ದೇವದಾಸಿ ಪುನರ್ವಸತಿ ಯೋಜನೆ(ಆದಾಯೋತ್ಪನ್ನಕರ ಚಟುವಟಿಕೆ)	1. 1993–94 ಹಾಗೂ 2007–08ನೇ ಸಾಲಿನಲ್ಲಿ ಮಾಡಿದ ಸಮೀಕ್ಷೆಯಲ್ಲಿ ಗುರುತಿಸಲ್ಪಟ್ಟಿರಬೇಕು. 2. ರಾಷ್ಟ್ರೀಕೃತ ಬ್ಯಾಂಕುಗಳಲ್ಲಿ ಬ್ಯಾಂಕ್ ಖಾತೆ ಹೊಂದುವುದು. ಬ್ಯಾಂಕ್ ಖಾತೆಯೊಂದಿಗೆ ಅರ್ಜಿದಾರರ ಆಧಾರ ಸೀಡಿಂಗ್ ಆಗಿರಬೇಕು. 3. ಯಾವುದೇ ಬ್ಯಾಂಕು/ಸಂಸ್ಥೆಗಳಲ್ಲಿ ಸುಸ್ತಿದಾರರಾಗಿರಬಾರದು ಎನ್ನುವುದು ಕಡ್ಡಾಯವಾಗಿರುತ್ತದೆ. 4. ಮಾಜಿ ದೇವದಾಸಿ ಮಹಿಳೆಯರಿಗೆ ಇ.ಡಿ.ಪಿ. ತರಬೇತಿಯೊಂದಿಗೆ , ಸೌಲಭ್ಯ ನೀಡಲಾಗುತ್ತದೆ. 5. ಮಾನ್ಯ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯ ಆಯ್ಕೆ ಸಮಿತಿಯಲ್ಲಿ ಫಲಾನುಭವಿಗಳನ್ನು ಆಯ್ಕೆ ಮಾಡಲಾಗುತ್ತದೆ.
10	ಮಾಜಿ ದೇವದಾಸಿಯರಿಗೆ ಮಾಸಾಶನ	1. 1993–94ನೇ ಮತ್ತು 2007–08ನೇ ಸಾಲಿನಲ್ಲಿ ನಡೆಸಿದ ಸಮೀಕ್ಷೆಯಲ್ಲಿ ಗುರುತಿಸಲ್ಪಟ್ಟ ಹಾಗೂ ಪುನರ್ ಖಾತರೀಕರಣದಲ್ಲಿಯೂ ಗುರುತಿಸಲ್ಪಟ್ಟ ಮಾಜಿ ದೇವದಾಸಿಯರು ಮಾತ್ರ ಮಾಸಾಶನಕ್ಕೆ ಅರ್ಹರಿರುತ್ತಾರೆ. 2. 45 ವರ್ಷ ಅಥವಾ 45 ವರ್ಷಕ್ಕಿಂತ ಹೆಚ್ಚಿನ ವಯಸ್ಸಿನವಳಾಗಿರತಕ್ಕದ್ದು. 3. ಮಾಸಾಶನಕ್ಕೆ ಅರ್ಹರಿವ ಮಾಜಿ ದೇವದಾಸಿಯರ ಸಂಪೂರ್ಣ ವಿವರವನ್ನು ಪರಿಶೀಲಿಸಿ ಆಯಾಯಾ ತಾಲ್ಲೂಕಿನ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಅನುಮೋದನೆ ನೀಡುವುದು. 4.ಅನುಮೋದನೆಯಾದ ಮಾಜಿ ದೇವದಾಸಿ ಮಹಿಳೆಯರಿಗೆ ಮಾಸಿಕ ರೂ.1500/–ಗಳಂತೆ ಮಾಸಾಶನವನ್ನು ನಿಗಮದ ಮೂಲಕ ನೇರವಾಗಿ ಅವರ ಖಾತೆಗೆ ಜಮೆ ಮಾಡಲಾಗುವುದು.
11	ಮಹಿಳಾ ಅಭಿವೃದ್ಧಿ ನಿಗಮದಿಂದ ಬಡ್ಡಿ ಸಹಾಯಧ ಯೋಜನೆ ದ್ವಿ–ಚಕ್ರ ವಾಹನ ಖರೀದಿಗೆ ಮುಂಗಡ (ಇಂದಿರಾ)	1.ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಐ.ಸಿ.ಡಿ.ಎಸ್ ಯೋಜನೆಯಲ್ಲಿ ಅಂಗನವಾಡಿ ಮೇಲ್ವಿಚಾರಕಿಯರಾಗಿರಬೇಕು 2.ದ್ವಿ–ಚಕ್ರ ವಾಹನ ಚಾಲನೆಮಾಡಲು ಪಡೆದ ಡ್ರೈವಿಂಗ್ ಲೈಸನ್ಸ್/ ಲರ್ನಿಂಗ್ ಲೈಸನ್ಸ್‌ನ್ನು ಹೊಂದಿರಬೇಕು. 3.ಸಾಲ ಮರುಪಾವತಿ ಕುರಿತಂತೆ ಸ್ಕೂಟರ್ ಖರೀದಿಗೆ ತಗಲುವ ಮೊತ್ತದ ಇನ್‌ವಾಯ್ಸ್‌ನ್ನು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಮತ್ತು ಉಪ ನಿರ್ದೇಶಕರ ಮುಖಾಂತರ ಸಲ್ಲಿಸುವುದು.

ಅನುಬಂಧ–3

ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯಿಂದ ವಿಕಲಚೇತನ ಹಾಗೂ ಹಿರಿಯ ನಾಗರೀಕರಿಗಾಗಿ ಅನುಷ್ಠಾನಗೊಳಿಸುತ್ತಿರುವ ಯೋಜನೆಗಳು

(ಎ) ಶೈಕ್ಷಣಿಕ:–

1) ಶ್ರವಣದೋಷವುಳ್ಳ ಮಕ್ಕಳಿಗಾಗಿ ವಸತಿಯುತ ಶಾಲೆಗಳು:

ಶ್ರವಣದೋಷವುಳ್ಳ ಮಕ್ಕಳಿಗಾಗಿ ಮೈಸೂರು, ಕಲಬುರ್ಗಿ, ಬಳ್ಳಾರಿ, ಬೆಳಗಾವಿ ಜಿಲ್ಲೆಗಳಲ್ಲಿ 4 ಕಿವುಡು ಮಕ್ಕಳ ವಸತಿ ಶಾಲೆಗಳನ್ನು ಇಲಾಖಾವತಿಯಿಂದ ನಡೆಸಲಾಗುತ್ತಿದೆ.ಈ ಶಾಲೆಗಳಲ್ಲಿ ಮಕ್ಕಳಿಗೆ ಉಚಿತ ವಸತಿ, ಊಟ ಮತ್ತು ಶಿಕ್ಷಣವನ್ನು ನೀಡಲಾಗುತ್ತಿದೆ.ಈ ಪೈಕಿ ಶ್ರವಣದೋಷವುಳ್ಳ ಹೆಣ್ಣು ಮಕ್ಕಳಿಗಾಗಿ ಬೆಳಗಾವಿಯಲ್ಲಿ ಪ್ರತ್ಯೇಕ ವಸತಿ ಶಾಲೆ ಇರುತ್ತದೆ.

2. ಅಂಧ ಮಕ್ಕಳಿಗಾಗಿ ವಸತಿಯುತ ಶಾಲೆಗಳು:

ಅಂಧ ಮಕ್ಕಳಿಗಾಗಿ ಕಲಬುರ್ಗಿ, ಮೈಸೂರು, ದಾವಣಗೆರೆ ಹಾಗೂ ಹುಬ್ಬಳ್ಳಿಯಲ್ಲಿ ವಿಶೇಷ ಶಾಲೆಗಳನ್ನು ನಡೆಸಲಾಗುತ್ತಿದೆ.ಈ ಶಾಲೆಗಳಲ್ಲಿ ದೃಷ್ಟಿದೋಷವುಳ್ಳ ಮಕ್ಕಳಿಗೆ ಉಚಿತ ಊಟ, ವಸತಿ ಮತ್ತು ಶಿಕ್ಷಣವನ್ನು ನೀಡಲಾಗುತ್ತಿದೆ.ಈ ಪೈಕಿ ದೃಷ್ಟಿದೋಷವುಳ್ಳ ಹೆಣ್ಣು ಮಕ್ಕಳಿಗಾಗಿ ದಾವಣಗೆರೆಯಲ್ಲಿ ಪ್ರತ್ಯೇಕ ವಸತಿ ಶಾಲೆ ಇರುತ್ತದೆ.

3. 1982ರ ರಾಜ್ಯ ಅನುದಾನ ಸಂಹಿತೆಯಡಿ ನಡೆಯುತ್ತಿರುವ ವಿಶೇಷ ಶಾಲೆಗಳು:

(ಅ) 1982ರ ರಾಜ್ಯ ಅನುದಾನ ಸಂಹಿತೆಯಡಿ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಸ್ವಯಂ ಸೇವಾ ಸಂಸ್ಥೆಗಳ ಮೂಲಕ 34 ವಿಶೇಷ ಶಾಲೆ/ ತರಬೇತಿ ಕೇಂದ್ರಗಳನ್ನು ದೈಹಿಕ, ಅಂಧ, ಶ್ರವಣದೋಷ ಹಾಗೂ ಬುದ್ಧಿಮಾಂದ್ಯ ಮಕ್ಕಳಿಗಾಗಿ ನಡೆಸಲಾಗುತ್ತಿದೆ.ರಾಜ್ಯ ಸರ್ಕಾರದಿಂದ ಅನುದಾನವನ್ನು ಜಿಲ್ಲಾ ಪಂಚಾಯತ್ ಮೂಲಕ ಬಿಡುಗಡೆ ಮಾಡಲಾಗುತ್ತಿದೆ.

ವಿಕಲಚೇತನರಿಗೆ ವೃತ್ತಿ ತರಬೇತಿ ಕೇಂದ್ರಗಳು:

ಈ ಯೋಜನೆಯಡಿ ವಿವಿಧ ರೀತಿಯ ವಿಕಲಚೇತನರಿಗೆ ವೃತ್ತಿ ತರಬೇತಿಯನ್ನು ನೀಡುವುದಾಗಿದೆ.1982ರ ರಾಜ್ಯ ಅನುದಾನ ಸಂಹಿತೆಯಡಿ 5 ವೃತ್ತಿ ತರಬೇತಿ ಕೇಂದ್ರಗಳನ್ನು ರಾಜ್ಯ ಸಹಾಯಾನುದಾನದಡಿ ಬೆಂಗಳೂರಿನಲ್ಲಿ 03 ಮತ್ತು ಮೈಸೂರಿನಲ್ಲಿ 02 ಹಾಗೂ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಒಂದು ವಾಕ್ ಶ್ರವಣ ಕೇಂದ್ರವನ್ನು ಸ್ವಯಂ ಸೇವಾ ಸಂಸ್ಥೆಗಳ ಮೂಲಕ ನಡೆಸಲಾಗುತ್ತಿದೆ. ವೃತ್ತಿ ತರಬೇತಿ ಕೇಂದ್ರಗಳಲ್ಲಿ ವಿವಿಧ ರೀತಿಯ ವಿಕಲಚೇತನರಿಗೆ ಫಿಟ್ಟರ್, ಟರ್ನರ್, ಸರಳ ಇಂಜಿನಿಯರಿಂಗ್, ಬೆತ್ತ, ಹಗ್ಗ, ಚಾಪೆ ಹೆಣೆಯುವುದು ಹಾಗೂ ಪ್ಲಾಸ್ಟಿಕ್ ಮೌಲ್ಡಿಂಗ್ ತರಬೇತಿಯನ್ನು ನೀಡಲಾಗುತ್ತಿದೆ.ಪ್ರತಿ ತರಬೇತಿ ಕೇಂದ್ರದಲ್ಲಿ ವಾರ್ಷಿಕ 25 ಫಲಾನುಭವಿಗಳು ತರಬೇತಿ ಪಡೆಯಲು ಅವಕಾಶವಿರುತ್ತದೆ.

(ಆ)ಅಂಗವಿಕಲ ಮಕ್ಕಳ ಕೇಂದ್ರೀಕೃತ ವಿಶೇಷ ಶೈಕ್ಷಣಿಕ ಯೋಜನೆ:

ಈ ಯೋಜನೆಯಡಿ ಬುದ್ಧಿಮಾಂದ್ಯ (ಸೆರಬ್ರಲ್ ಪಾಲ್ಸಿ, ಆಟಿಸಂ), ದೃಷ್ಟಿದೋಷ, ಶ್ರವಣದೋಷವುಳ್ಳ ಮಕ್ಕಳಿಗಾಗಿ ವಸತಿಯುತ ಹಾಗೂ ವಸತಿರಹಿತ ಶಾಲೆಗಳು ಸೇರಿದಂತೆ ಒಟ್ಟು 138 ವಿಶೇಷ ಶಾಲೆಗಳು ಸ್ವಯಂ ಸೇವಾ ಸಂಸ್ಥೆಗಳ ಮೂಲಕ ನಡೆಯುತ್ತಿವೆ. ಮಕ್ಕಳ ಸಂಖ್ಯೆಗೆ ಅನುಗುಣವಾಗಿ ಶ್ರವಣದೋಷವುಳ್ಳ ಹಾಗೂ ದೃಷ್ಟಿದೋಷವುಳ್ಳ ಮಕ್ಕಳ ವಸತಿಯುತ ಶಾಲೆಯಲ್ಲಿ ವ್ಯಾಸಂಗ ಮಾಡುತ್ತಿರುವ ಪ್ರತಿ ಮಗುವಿನ

ನಿರ್ವಹಣೆಗೆ ಮಾಹೆಯಾನ ತಲಾ ರೂ.6200/- ರಂತೆ ಹಾಗೂ ವಸತಿರಹಿತ ಶಾಲೆಯಲ್ಲಿ ವ್ಯಾಸಂಗ ಮಾಡುತ್ತಿರುವ ಪ್ರತಿ ಮಗುವಿನ ನಿರ್ವಹಣೆಗೆ ಮಾಹೆಯಾನ ತಲಾ ರೂ.5200/- ರಂತೆ ಹಾಗೂ ಬುದ್ಧಿಮಾಂದ್ಯ ಮಕ್ಕಳ ಮಕ್ಕಳ ವಸತಿಯುತ ಶಾಲೆಯಲ್ಲಿ ವ್ಯಾಸಂಗ ಮಾಡುತ್ತಿರುವ ಪ್ರತಿ ಮಗುವಿನ ನಿರ್ವಹಣೆಗೆ ಮಾಹೆಯಾನ ತಲಾ ರೂ.6800/- ರಂತೆ ಹಾಗೂ ವಸತಿರಹಿತ ಶಾಲೆಯಲ್ಲಿ ವ್ಯಾಸಂಗ ಮಾಡುತ್ತಿರುವ ಪ್ರತಿ ಮಗುವಿನ ನಿರ್ವಹಣೆಗೆ ಮಾಹೆಯಾನ ತಲಾ ರೂ. 6000/- ರಂತೆ ವರ್ಷದಲ್ಲಿ 10 ತಿಂಗಳ ಅವಧಿಗೆ ಅನುದಾನವನ್ನು ಮಂಜೂರು ಮಾಡಲಾಗುತ್ತಿದೆ.ಈ ಅನುದಾನದಲ್ಲಿ ಶಿಕ್ಷಕರ ಗೌರವಧನ, ಮಕ್ಕಳ ಆಹಾರ ವೆಚ್ಚ, ಕಟ್ಟಡದ ಬಾಡಿಗೆ ಹಾಗೂ ನಿರ್ವಹಣಾ ವೆಚ್ಚ, ಸಮವಸ್ತ್ರ, ವೈದ್ಯಕೀಯ ವೆಚ್ಚ ಹಾಗೂ ಸಾದಿಲ್ವಾರು ವೆಚ್ಚಗಳು ಒಳಗೊಂಡಿರುತ್ತವೆ.

(ಇ) ಕೇಂದ್ರ ಸರ್ಕಾರದ ದೀನ್‌ದಯಾಳ್ ಪುನರ್ವಸತಿ ಯೋಜನೆಯಡಿ 8 ಸ್ವಯಂ ಸೇವಾ ಸಂಸ್ಥೆಗಳ ಮೂಲಕ ವಿಶೇಷ ಶಾಲೆ /ವೃತ್ತಿ ತರಬೇತಿ ಕೇಂದ್ರಗಳು ನಡೆಯುತ್ತಿದ್ದು, ಸದರಿ ಶಾಲೆ ಹಾಗೂ ತರಬೇತಿ ಕೇಂದ್ರಗಳಿಗೆ ಕೇಂದ್ರ ಸರ್ಕಾರದಿಂದ ಶೇ.90ರಷ್ಟು ಅನುದಾನವನ್ನು ಮಂಜೂರು ಮಾಡಲಾಗುತ್ತಿದ್ದು, ಉಳಿದ ಶೇ.10ರಷ್ಟು ವೆಚ್ಚವನ್ನು ಸಂಸ್ಥೆಯವರು ಭರಿಸಬೇಕಾಗಿರುತ್ತದೆ.

4. <u>ಅಂಗವಿಕಲ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ಮತ್ತು ಪ್ರೋತ್ಸಾಹಧನ:</u>

ಈ ಯೋಜನೆಯಡಿ ಒಂದನೇ ತರಗತಿಯಿಂದ ಸ್ನಾತಕೋತ್ತರ ಪದವಿಯವರೆಗೆ ವ್ಯಾಸಂಗ ಮಾಡುತ್ತಿರುವ ಅರ್ಹ ವಿಕಲಚೇತನ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನವನ್ನು ಆಯಾ ಜಿಲ್ಲಾ ಕಛೇರಿಗಳ ಮೂಲಕ ಮಂಜೂರು ಮಾಡಲಾಗುತ್ತಿದೆ. 2001-02ನೇ ಸಾಲಿನಿಂದ ಈ ಯೋಜನೆಯ ಫಲಾನುಭವಿಗಳಿಗೆ ಆದಾಯ ಮಿತಿಯಿಂದ ವಿನಾಯಿತಿಗೊಳಿಸಲಾಗಿದೆ.

<u>ಪ್ರತಿಭಾವಂತ ಅಂಗವಿಕಲ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಧನ ಯೋಜನೆ:</u>

ಸಾರ್ವತ್ರಿಕ ಪರೀಕ್ಷೆಗಳಲ್ಲಿ ಶೇಕಡ 60 ಕ್ಕಿಂತಲೂ ಹೆಚ್ಚಿನ ಅಂಕಗಳನ್ನು ಪಡೆದ ಪ್ರತಿಭಾನ್ವಿತ ವಿಕಲಚೇತನ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಧನ ನೀಡುವ ಯೋಜನೆ ಇದಾಗಿದೆ.ಈ ಯೋಜನೆಯನ್ನು 2001-02ನೇ ಸಾಲಿನಿಂದ ಬಿ.ಎಡ್, ಎಂ.ಎಡ್. ಮತ್ತು ಟಿ.ಸಿ.ಹೆಚ್. ವಿದ್ಯಾರ್ಥಿಗಳಿಗೂ ವಿಸ್ತರಿಸಲಾಗಿದೆ.

<u>ಉನ್ನತ ಶಿಕ್ಷಣ ಪಡೆಯುವ ವಿಕಲಚೇತನರಿಗೆ ಶುಲ್ಕ ಮರುಪಾವತಿ:</u>

ಉನ್ನತ ಶಿಕ್ಷಣ ಪಡೆಯುವ ವಿಕಲಚೇತನರಿಗೆ ಎಸ್.ಎಸ್.ಎಲ್.ಸಿ ನಂತರ ಉನ್ನತ ಶಿಕ್ಷಣ, ವೃತ್ತಿ ಶಿಕ್ಷಣ, ತಾಂತ್ರಿಕ ಶಿಕ್ಷಣ, ಸ್ನಾತಕೋತ್ತರ, ಔದ್ಯೋಗಿಕ ಶಿಕ್ಷಣಗಳಿಗೆ ನಿಯಮಾನುಸಾರ ಆಯ್ಕೆಯಾಗುವ ವಿದ್ಯಾರ್ಥಿಗಳಿಗೆ ಸರ್ಕಾರವು ನಿಗದಿಪಡಿಸಿರುವ ಪರೀಕ್ಷಾ ಶುಲ್ಕ ಬೋಧನಾ ಶುಲ್ಕ, ಪ್ರಯೋಗಾಲಯ ಶುಲ್ಕ, ಕ್ರೀಡಾ ಶುಲ್ಕ ಹಾಗೂ ಗ್ರಂಥಾಲಯ ಶುಲ್ಕಗಳನ್ನು ಮರುಪಾವತಿಸುವ ಯೋಜನೆಯನ್ನು 2013-14ನೇ ಸಾಲಿನಿಂದ ಅನುಷ್ಠಾನಗೊಳಿಸಲಾಗುತ್ತಿದೆ. ಈ ಯೋಜನೆಯಡಿ ಸೌಲಭ್ಯ ಪಡೆಯುವ ವಿದ್ಯಾರ್ಥಿಗಳಿಗೆ ಯಾವುದೇ ಆದಾಯಮಿತಿ ಇರುವುದಿಲ್ಲ. ವೈದ್ಯಕೀಯ ಮಂಡಳಿಯವರು ಶಿಫಾರಸ್ಸು ಮಾಡಿರುವ ವಿಕಲಚೇತನ ಅಭ್ಯರ್ಥಿಗಳು ಮಾತ್ರ ಈ ಯೋಜನೆಯಡಿ ಸೌಲಭ್ಯ ಪಡೆಯಲು ಅರ್ಹರಾಗಿರುತ್ತಾರೆ

ಬ್ರೈಲ್ ಮುದ್ರಣಾಲಯ:

ದೃಷ್ಟಿದೋಷವುಳ್ಳ ಮಕ್ಕಳಿಗೆ ಬೇಕಾಗುವ ಬ್ರೈಲ್ ಪುಸ್ತಕಗಳನ್ನು ಮುದ್ರಿಸಿ ಸಂಬಂಧಪಟ್ಟ ಅಂಧರ ಶಾಲೆಗಳಿಗೆ ಮೈಸೂರಿನಲ್ಲಿರುವ ಬ್ರೈಲ್ ಮುದ್ರಣಾಲಯದ ಮೂಲಕ ಉಚಿತವಾಗಿ ಸರಬರಾಜು ಮಾಡಲಾಗುತ್ತಿದೆ.

8. ವಿಶೇಷ ಶಿಕ್ಷಣ ತರಬೇತಿ ಕೇಂದ್ರ ಯೋಜನೆ:

ದೃಷ್ಟಿದೋಷವುಳ್ಳ ಹಾಗೂ ಶ್ರವಣದೋಷವುಳ್ಳ ವಿದ್ಯಾರ್ಥಿಗಳಿಗೆ ಬೋಧಿಸುವ ಶಿಕ್ಷಕರಿಗೆ ವಿಶೇಷ ಶಿಕ್ಷಣ ನೀಡಲು ತಲಾ ಒಂದರಂತೆ ವಿಶೇಷ ಶಿಕ್ಷಕರ ತರಬೇತಿ ಕೇಂದ್ರವನ್ನು ಮೈಸೂರಿನಲ್ಲಿ ನಡೆಸುತ್ತಿದ್ದು, ಪ್ರತಿ ವರ್ಷ ಪ್ರತಿ ಕೇಂದ್ರದಲ್ಲಿ 25 ಪ್ರಶಿಕ್ಷಣಾರ್ಥಿಗಳು ತರಬೇತಿ ಪಡೆಯಲು ಅವಕಾಶವಿರುತ್ತದೆ.

9. ಮಾನಸಿಕ ಅಸ್ವಸ್ಥ, ಸೆರಬ್ರಲ್ ಪಾಲ್ಸಿ, ಆಟಿಸಂ ಮಕ್ಕಳ ಹಗಲು ಯೋಗಕ್ಷೇಮ ಕೇಂದ್ರಗಳು: ಸೆರಬ್ರಲ್ ಪಾಲ್ಸಿ, ಆಟಿಸಂ, ಮಾನಸಿಕ ಅಸ್ವಸ್ಥ ಹಾಗೂ ತೀವ್ರತರದ ಅಂಗವೈಕಲ್ಯತೆ ಹೊಂದಿರುವ ಮೂರರಿಂದ 25 ವರ್ಷದ ಒಳಗಿನ ಮಕ್ಕಳಿಗಾಗಿ 02 ಹಗಲು ಯೋಗಕ್ಷೇಮ ಕೇಂದ್ರಗಳನ್ನು ಬೆಂಗಳೂರು ನಗರ ಜಿಲ್ಲೆಯಲ್ಲಿ ಸ್ವಯಂ ಸೇವಾ ಸಂಸ್ಥೆಗಳ ಮೂಲಕ ನಡೆಸುತ್ತಿದ್ದು, ಪ್ರತಿ ಕೇಂದ್ರದಲ್ಲಿ 25 ಮಕ್ಕಳನ್ನು ದಾಖಲಿಸಲು ಅವಕಾಶವಿದ್ದು, ಪ್ರತಿ ಮಗುವಿಗೆ ಮಾಸಿಕ ರೂ.10,000/–ಗಳಂತೆ ವಾರ್ಷಿಕ 25.00 ಲಕ್ಷಗಳನ್ನು ಮಂಜೂರು ಮಾಡಲಾಗುತ್ತಿದೆ.

(ಬಿ) ಉದ್ಯೋಗ ಮತ್ತು ತರಬೇತಿ:

2. ಅಂಗವಿಕಲ ಪುರುಷ ಹಾಗೂ ಮಹಿಳೆಯರ ವಸತಿನಿಲಯ:

ಬೆಂಗಳೂರಿನ ಕೆಂಗೇರಿಯಲ್ಲಿ ವಿಕಲಚೇತನ ಮಹಿಳೆ ಮತ್ತು ವಿಕಲಚೇತನ ಪುರುಷರಿಗಾಗಿ ಅಂಗವಿಕಲ ಉದ್ಯೋಗಸ್ಥ ನೌಕರರು ಮತ್ತು ಪ್ರಶಿಕ್ಷಣಾರ್ಥಿಗಳಿಗಾಗಿ ಮಹಿಳೆಯರು ಹಾಗೂ ಪುರುಷರಿಗಾಗಿ ಪ್ರತ್ಯೇಕವಾದ ವಸತಿ ನಿಲಯವನ್ನು ಬೆಂಗಳೂರು ನಗರ ಜಿಲ್ಲೆಯಲ್ಲಿ ನಡೆಸಲಾಗುತ್ತಿದೆ. ಪ್ರಸ್ತುತ ಈ ಎರಡೂ ವಸತಿ ನಿಲಯಗಳು ಬೆಂಗಳೂರಿನ ಕೆಂಗೇರಿಯಲ್ಲಿ ನಡೆಯುತ್ತಿವೆ. ಪ್ರತಿ ವಸತಿ ನಿಲಯದಲ್ಲಿ 50 ನಿವಾಸಿಗಳನ್ನು ದಾಖಲಿಸಲು ಅವಕಾಶವಿರುತ್ತದೆ.

3. ಆಧಾರ ಯೋಜನೆ :

ವಿಕಲಚೇತನರು ಸ್ವಯಂ ಉದ್ಯೋಗ ಕೈಗೊಂಡು ಜೀವನ ಸಾಗಿಸಲು ಅನುಕೂಲವಾಗುವಂತೆ ಆಧಾರ ಎಂಬ ಸಾಲ ಯೋಜನೆಯನ್ನು ಜಿಲ್ಲಾ ಮಟ್ಟದಲ್ಲಿ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳ ನೇತೃತ್ವದಲ್ಲಿ ಜಾರಿಗೊಳಿಸಲಾಗುತ್ತಿದೆ.ಈ ಯೋಜನೆಯಡಿ ರೂ.1.00 ಲಕ್ಷ ರೂ.ಗಳ ಸಹಾಯಧನವನ್ನು ನೀಡಲು ಅವಕಾಶವಿದ್ದು, ಇದರಲ್ಲಿ ಶೇ.50ರಷ್ಟು ಬಡ್ಡಿ ಸಹಿತವಾಗಿ ಬ್ಯಾಂಕ್ ಸಾಲ ಮತ್ತು ಶೇ.50ರಷ್ಟು ಸಹಾಯಧನ ಒದಗಿಸಲಾಗುವುದು.

4. ಗ್ರಾಮೀಣ ಪುನರ್ವಸತಿ ಯೋಜನೆ:

ಈ ಯೋಜನೆಯನ್ನು ರಾಜ್ಯದ ಎಲ್ಲಾ 30 ಜಿಲ್ಲೆಗಳ 176 ತಾಲ್ಲೂಕುಗಳಲ್ಲಿ ಅನುಷ್ಠಾನಗೊಳಿಸಲಾಗುತ್ತಿದೆ.ಪ್ರತಿ ಗ್ರಾಮ ಪಂಚಾಯತಿ ಅಡಿಯಲ್ಲಿ ಎಸ್.ಎಸ್.ಎಲ್.ಸಿ. ಉತ್ತೀರ್ಣ/ ಅನುತ್ತೀರ್ಣರಾದ ಸಮರ್ಥ ವಿಕಲಚೇತನರನ್ನು ಗ್ರಾಮೀಣ ಪುನರ್ವಸತಿ ಕಾರ್ಯಕರ್ತರೆಂದು ಹಾಗೂ ತಾಲ್ಲೂಕು ಪಂಚಾಯಿತಿ ಕಚೇರಿಯಲ್ಲಿ ಸ್ಥಳೀಯ ಸಮರ್ಥ ಪದವೀಧರ ವಿಕಲಚೇತನರೊಬ್ಬರನ್ನು ವಿವಿಧೋದ್ದೇಶ ಪುನರ್ವಸತಿ ಕಾರ್ಯಕರ್ತರೆಂದು, ಸ್ಥಳೀಯ ನಗರ ಪ್ರದೇಶಗಳಲ್ಲಿ ನಗರ ಪುನರ್ವಸತಿ ಕಾರ್ಯಕರ್ತರೆಂದು ಮತ್ತು ನಿರ್ದೇಶನಾಲಯದಲ್ಲಿ ರಾಜ್ಯ ಸಂಯೋಜಕರನ್ನು ಗೌರವಧನ ಆಧಾರದ

ಮೇಲೆ ನೇಮಕಾತಿ ಮಾಡಿಕೊಳ್ಳಲಾಗಿದೆ. ಈ ಕಾರ್ಯಕರ್ತರ ಮೂಲಕ ವಿಕಲಚೇತನರಿಗೆ ಎಲ್ಲಾ ಸೇವಾ ಸೌಲಭ್ಯಗಳನ್ನು ಅವರಿರುವ ಸ್ಥಳಗಳಲ್ಲಿಯೇ ವಿಕಲಚೇತನರ ಮೂಲಕವೇ ತಲುಪಿಸಲಾಗುವುದು.

ಸರ್ಕಾರದ ಆದೇಶ ಸಂಖ್ಯೆ:ಮಮಇ/241/ಪಿಹೆಚ್‌ಪಿ/2019, ದಿನಾಂಕ: 07–02–2020ರಂತೆ ಗ್ರಾಮೀಣ ಪುನರ್ವಸತಿ ಕಾರ್ಯಕರ್ತರು ಹಾಗೂ ನಗರ ಪುನರ್ವಸತಿ ಕಾರ್ಯಕರ್ತರುಗಳ ಗೌರವಧನವನ್ನು ರೂ.3000/–ಗಳಿಂದ ರೂ.6000/–ಗಳಿಗೆ ಹಾಗೂ ವಿವಿದ್ದೋದ್ದೇಶ ಪುನರ್ವಸತಿ ಕಾರ್ಯಕರ್ತರ ಗೌರವಧನವನ್ನು ರೂ.6000/–ಗಳಿಂದ ರೂ.12,000/–ಗಳಿಗೆ ಹೆಚ್ಚಿಸಿ ಆದೇಶ ಹೊರಡಿಸಲಾಗಿದೆ.

<u>ಮರಣ ಪರಿಹಾರ ನಿಧಿ ಯೋಜನೆ:</u> ಗ್ರಾಮೀಣ ಪುನರ್ವಸತಿ ಯೋಜನೆಯಡಿ ಕಾರ್ಯನಿರ್ವಹಿಸುತ್ತಿರುವ ಕಾರ್ಯಕರ್ತರು ನಿಧನ ಹೊಂದಿದ್ದಲ್ಲಿ ರೂ.50,000/–ಗಳ ಪರಿಹಾರ ಧನ ನೀಡಲು ಅವಕಾಶವಿರುತ್ತದೆ.

5. <u>ಉದ್ಯೋಗಸ್ಥ ವಿಕಲಚೇತನ ಮಹಿಳೆಯರಿಗೆ ವಸತಿ ನಿಲಯಗಳು:</u>

ಅಂಗವಿಕಲ ಉದ್ಯೋಗಸ್ಥ ಮಹಿಳೆಯರಿಗಾಗಿ ಹಾಗೂ ವಿದ್ಯಾರ್ಥಿನಿ/ತರಬೇತಾರ್ಥಿಗಳಿಗೆ ಸ್ವಯಂ ಸೇವಾ ಸಂಸ್ಥೆಗಳ ಮೂಲಕ 25 ಜಿಲ್ಲೆಗಳಲ್ಲಿ ಮಹಿಳಾ ವಸತಿ ನಿಲಯಗಳು (ಬೆಂಗಳೂರು ನಗರ ಜಿಲ್ಲೆಯಲ್ಲಿ 4 ವಸತಿ ನಿಲಯಗಳು) ನಡೆಯುತ್ತಿವೆ. ಸದರಿ ವಸತಿ ನಿಲಯದಲ್ಲಿ ಉದ್ಯೋಗಸ್ಥ ವಿಕಲಚೇತನ ಮಹಿಳೆಯರಿಗೆ ಮತ್ತು ವಿದ್ಯಾರ್ಥಿನಿಯರಿಗೆ ಹಾಗೂ ತರಬೇತಿದಾರರಿಗೆ ವಸತಿ ಸೌಲಭ್ಯವನ್ನು ಕಲ್ಪಿಸಲಾಗಿದೆ. ಸದರಿ ವಸತಿ ನಿಲಯದಲ್ಲಿ ವಿದ್ಯಾರ್ಥಿನಿಯರು ಹಾಗೂ ತರಬೇತಿದಾರರಿಗೆ ಉಚಿತ ಊಟದ ವ್ಯವಸ್ಥೆಯಿದ್ದು, ಉದ್ಯೋಗಸ್ಥ ಮಹಿಳೆಯರು ಮಾಸಿಕ 800/–ಗಳನ್ನು ಪಾವತಿಸಬೇಕಾಗಿರುತ್ತದೆ. ರಾಮನಗರ, ದಾವಣಗೆರೆ, ರಾಯಚೂರು, ಉತ್ತರ ಕನ್ನಡ ಹಾಗೂ ಚಿಕ್ಕಮಗಳೂರು ಈ ಜಿಲ್ಲೆಗಳಲ್ಲಿ ಆಡಳಿತಾತ್ಮಕ ಕಾರಣಗಳಿಂದ ವಸತಿ ನಿಲಯಗಳನ್ನು ನಡೆಯುತ್ತಿಲ್ಲ.

<u>ಸಿ. ಸಾಮಾಜಿಕ ಭದ್ರತಾ ಯೋಜನೆಗಳು:</u>

1. <u>ಸಮಾಜ ಸೇವಾ ಸಂಕೀರ್ಣ:</u>

ನಿರ್ಗತಿಕ ಬುದ್ಧಿಮಾಂದ್ಯ ಪುರುಷರಿಗಾಗಿ ಸಮಾಜ ಸೇವಾ ಸಂಕೀರ್ಣ ಸಂಸ್ಥೆಯು ಬೆಂಗಳೂರಿನಲ್ಲಿ ಸರ್ಕಾರದ ವತಿಯಿಂದ ನಡೆಯುತ್ತಿದ್ದು, ಈ ಸಂಸ್ಥೆಯಲ್ಲಿ ಉಚಿತ ಊಟ, ವಸತಿ, ವೈದ್ಯಕೀಯ ಸೌಲಭ್ಯ, ಸಂರಕ್ಷಣೆ ಒದಗಿಸಲಾಗುತ್ತಿದೆ. ಪ್ರಸ್ತುತ ಸಂಸ್ಥೆಯಲ್ಲಿ 85 ನಿವಾಸಿಗಳು ದಾಖಲಾಗಿರುತ್ತಾರೆ.

2. <u>ಮಂದಮತಿ ಮಹಿಳೆಯರ ಅನುಪಾಲನಾ ಗೃಹ:</u>

18 ವರ್ಷ ಮೇಲ್ಪಟ್ಟ ನಿರ್ಗತಿಕ ಮಹಿಳಾ ಬುದ್ಧಿಮಾಂದ್ಯರಿಗೆ ಉಚಿತ ಊಟ, ವಸತಿ, ವೈದ್ಯಕೀಯ ಸೌಲಭ್ಯ ಮತ್ತು ಸಂರಕ್ಷಣೆ ಒದಗಿಸುವ ಉದ್ದೇಶದಿಂದ ಮಂದಮತಿ ಮಹಿಳೆಯರ ಅನುಪಾಲನಾ ಗೃಹಗಳನ್ನು ಬೆಂಗಳೂರು ನಗರ ಹಾಗೂ ಹುಬ್ಬಳ್ಳಿಯಲ್ಲಿ ಇಲಾಖಾವತಿಯಿಂದ ನಡೆಸಲಾಗುತ್ತಿದೆ. ಪ್ರಸ್ತುತ ಬೆಂಗಳೂರು ಅನುಪಾಲನಾ ಕೇಂದ್ರದಲ್ಲಿ 100 ಮಂದಿ ಹಾಗೂ ಹುಬ್ಬಳ್ಳಿ ಅನುಪಾಲನ ಕೇಂದ್ರದಲ್ಲಿ 70 ನಿವಾಸಿಗಳು ದಾಖಲಾಗಿರುತ್ತಾರೆ.

3. <u>ಮಾನಸಿಕ ಅಸ್ವಸ್ಥರಿಗೆ ಮಾನಸ ಕೇಂದ್ರಗಳು:</u>

ಮಾನಸಿಕ ಅಸ್ವಸ್ಥರಿಗಾಗಿ ಮಾನಸ ಕೇಂದ್ರಗಳನ್ನು ಬೆಂಗಳೂರು ನಗರ ಹಾಗೂ ಬೆಳಗಾವಿ ಜಿಲ್ಲೆಗಳಲ್ಲಿ ನಡೆಸುತ್ತಿದ್ದು, ರಾಜ್ಯ ಉಚ್ಚ ನ್ಯಾಯಾಲಯ ಮತ್ತು ಅಧೀನ ನ್ಯಾಯಾಲಯಗಳಿಂದ ಆದೇಶಿಸಲಡುವ ಮಾನಸಿಕ ಅಸಸ್ಥರನು, ಹಾಗೂ ರಸೆಗಳಲ್ಲಿ ಓಡಾಡುವ ನಿರ್ಗತಿಕ ಮಾನಸಿಕ

ಅಸ್ವಸ್ಥರನ್ನು ಈ ಕೇಂದ್ರಗಳಲ್ಲಿ ನಿರ್ದಿಷ್ಟ ವೈದ್ಯಕೀಯ ಪ್ರಾಧಿಕಾರದ ಆದೇಶದ ಮೇರೆಗೆ ದಾಖಲಿಸಲು ಅವಕಾಶವಿರುತ್ತದೆ. ಈ ಕೇಂದ್ರಗಳಲ್ಲಿ ಫಲಾನುಭವಿಗಳಿಗೆ ಉಚಿತ ಊಟ, ವಸತಿ, ವೈದ್ಯಕೀಯ ಶುಶ್ರೂಷೆ, ವೈದ್ಯಕೀಯ ಸಲಹೆ(ಕೌನ್ಸಲಿಂಗ್) ಸೌಲಭ್ಯವನ್ನು ನೀಡಲಾಗುತ್ತಿದ್ದು, ಇವು ಅಲ್ಪಾವಧಿ ಕೇಂದ್ರಗಳಾಗಿರುತ್ತವೆ.

4. ಬುದ್ಧಿಮಾಂದ್ಯ ಮಕ್ಕಳ ಪೋಷಕರಿಗೆ ವಿಮಾ ಯೋಜನೆ:

ಬುದ್ಧಿಮಾಂದ್ಯ ಮಕ್ಕಳ/ವ್ಯಕ್ತಿಗಳ ತಂದೆ: ತಾಯಿ: ಪೋಷಕರ ವಿಮಾ ಯೋಜನೆಯನ್ನು ಭಾರತೀಯ ಜೀವ ವಿಮಾ ನಿಗಮದ ಮೂಲಕ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದ್ದು, ಬುದ್ಧಿಮಾಂದ್ಯ ಮಕ್ಕಳ/ವ್ಯಕ್ತಿಗಳ ತಂದೆ:ತಾಯಿ: ಪೋಷಕರು ಮರಣ ಹೊಂದಿದ ನಂತರ ಬುದ್ಧಿಮಾಂದ್ಯ ಮಕ್ಕಳ ಜೀವನ ನಿರ್ವಹಣೆಗಾಗಿ ರೂ.20,000/-ಗಳ ಪರಿಹಾರ ಧನವನ್ನು ಕುಟುಂಬದ ನಾಮ ನಿರ್ದೇಶಿತ ಸದಸ್ಯರಿಗೆ ಪಾವತಿಸಲಾಗುತ್ತಿದೆ.

5. ವಿಕಲಚೇತನ ವ್ಯಕ್ತಿಗಳನ್ನು ಸಾಮಾನ್ಯರು ಮದುವೆಯಾದಲ್ಲಿ ಪ್ರೋತ್ಸಾಹ ಧನ ನೀಡುವ ಯೋಜನೆ:

ವಿಕಲಚೇತನ ಯುವಕ/ಯುವತಿಯರನ್ನು ವಿವಾಹವಾಗುವ ಸಾಮಾನ್ಯ ಯುವಕ/ ಯುವತಿಯರಿಗೆ ನಿರಂತರವಾಗಿ ಮಾಸಿಕ ಆದಾಯ ದೊರಕಿಸಲು ವಿಕಲಚೇತನ ವ್ಯಕ್ತಿಯ ಹೆಸರಿನಲ್ಲಿ ರೂ.50,000/-ಗಳನ್ನು ಮದುವೆಯಾದ ಸಾಮಾನ್ಯ ವ್ಯಕ್ತಿ ಹಾಗೂ ವಿಕಲಚೇತನರ ಜಂಟಿ ಹೆಸರಿನಲ್ಲಿ 05 ವರ್ಷದ ಅವಧಿಗೆ ಹೂಡಿಕೆಯ ರೂಪದಲ್ಲಿ ನೀಡಿ ಪ್ರೋತ್ಸಾಹ ನೀಡಲು ಹಾಗೂ ಅದರಿಂದ ಬರುವ ಬಡ್ಡಿ ಹಣವನ್ನು ಉಪಯೋಗಿಸುವುದು ಹಾಗೂ 05 ವರ್ಷಗಳ ನಂತರ ಠೇವಣಿ ಮೊತ್ತವನ್ನು ವಾಪಸ್ಸು ಪಡೆಯಬಹುದು ಅಥವಾ ಮುಂದುವರೆಸಲು ಅವಕಾಶವಿರುತ್ತದೆ.

6. ಅಂಧ ಮಹಿಳೆಯರಿಗೆ ಜನಿಸುವ ಮಕ್ಕಳಿಗೆ ಆರೈಕೆ ಭತ್ಯೆ ಒದಗಿಸುವ ಯೋಜನೆ :

ಅಂಧ ಮಹಿಳೆಯರು ಮಗುವಿಗೆ ಜನ್ಮ ನೀಡಿದಾಗ ಆ ಮಗುವನ್ನು ಇತರೆ ಸಾಮಾನ್ಯ ತಾಯಂದಿರಂತೆ ಆರೈಕೆ ಮಾಡುವುದು ಕಷ್ಟಕರವಾಗಿರುತ್ತದೆ.ಇಂತಹ ಅಂಧ ಮಹಿಳೆಯರಿಗೆ ಜನಿಸುವ ಮಕ್ಕಳಿಗೆ ಆರೈಕೆ ಮಾಡಲು ಆಯಾ ಸೇವೆ, ಆರೋಗ್ಯ ಪಾಲನೆ, ಪೌಷ್ಠಿಕ ಆಹಾರ, ಔಷಧೋಪಚಾರಗಳಿಗೆ ಮಾಹೆಯಾನ ರೂ.2000/- ದಂತೆ 5 ವರ್ಷಗಳ ಅವಧಿಗೆ ಸಹಾಯಧನವನ್ನು ನೀಡಲಾಗುತ್ತಿದೆ.ಈ ಸೌಲಭ್ಯವನ್ನು ಕನಿಷ್ಠ 2 ಮಕ್ಕಳವರೆಗೆ ಪಡೆಯಬಹುದಾಗಿದೆ.

(ಡಿ) ಪುನರ್ವಸತಿ ಯೋಜನೆಗಳು:

1. ಅಂಗವಿಕಲರಿಗೆ ಸಾಧನ ಸಲಕರಣೆಗಳು :

ಈ ಯೋಜನೆಯಡಿಯಲ್ಲಿ ಅಂಗವಿಕಲರಿಗೆ ಅವಶ್ಯವಾಗಿರುವ ಸಾಧನ ಸಲಕರಣೆಗಳನ್ನು ನೀಡಲಾಗುತ್ತಿದೆ. ಫಲಾನುಭವಿಯ ಕುಟುಂಬದ ವಾರ್ಷಿಕ ಆದಾಯ ಮಿತಿಯನ್ನು ಗ್ರಾಮೀಣ ಪ್ರದೇಶದ ಫಲಾನುಭವಿಗಳಿಗೆ ರೂ.11,500/- ಮತ್ತು ನಗರ ಪ್ರದೇಶದ ಫಲಾನುಭವಿಗಳಿಗೆ ರೂ.24,000/- ನಿಗದಿಗೂಳಿಸಲಾಗಿದೆ. ಈ ಯೋಜನೆಯಡಿ ರೂ.15,000/-ಗಳ ಮಿತಿಯೊಳಗೆ ವಿಕಲಚೇತನರಿಗೆ ಅವಶ್ಯವಿರುವ ಕ್ಯಾಲಿಪರ್ಸ್, ಕ್ರಚರ್ಸ್, ಶ್ರವಣ ಸಾಧನ, ವೈಟ್ ಕೇನ್, ಬ್ರೈಲ್ ವಾಚ್ ಇನ್ನಿತರ ಸಲಕರಣೆಗಳನ್ನು ಉಚಿತವಾಗಿ ನೀಡಲಾಗುತ್ತಿದೆ.

ಅ. **ಅಂಧ ವಿದ್ಯಾರ್ಥಿಗಳಿಗೆ ಟಾಕಿಂಗ್ ಲ್ಯಾಪ್‌ಟಾಪ್ ಯೋಜನೆ :**

ಎಸ್.ಎಸ್.ಎಲ್.ಸಿ ನಂತರ ವ್ಯಾಸಂಗ ಮಾಡುವ ದೃಷ್ಠಿದೋಷವುಳ್ಳ ವಿಕಲಚೇತನ ವಿದ್ಯಾರ್ಥಿಗಳು ಇತ್ತೀಚಿನ ತಂತ್ರಜ್ಞಾನ ಮತ್ತು ತಂತ್ರಾಂಶದ ಉಪಯೋಗದಿಂದ ಉನ್ನತ ಶಿಕ್ಷಣವನ್ನು ಪಡೆಯಲು ಅನುಕೂಲವಾಗುವಂತೆ ಮಾತನಾಡುವ (ಟಾಕಿಂಗ್) ಲ್ಯಾಪ್‌ಟಾಪ್‌ಗಳನ್ನು ಅರ್ಹ ಫಲಾನುಭವಿಗಳಿಗೆ ನೀಡಲಾಗುತಿದೆ.

ತೀವ್ರತೆರೆನಾದ ದೈಹಿಕ ವಿಕಲಚೇತನರಿಗೆ ಯಂತ್ರಚಾಲಿತ ದ್ವಿಚಕ್ರವಾಹನ ಯೋಜನೆ :

20 ರಿಂದ 60 ವರ್ಷದ ವಯೋಮಾನದ ತೀವ್ರತರವಾದ ದೈಹಿಕ ವಿಕಲಚೇತನರಿಗೆ ಓಡಾಡಲು ಅನುಕೂಲವಾಗುವಂತೆ ಜೀವಿತ ಕಾಲದಲ್ಲಿ ಒಂದು ಬಾರಿಗೆ ಯಂತ್ರಚಾಲಿತ ದ್ವಿಚಕ್ರ ವಾಹನವನ್ನು ಮಂಜೂರು ಮಾಡಲಾಗುತ್ತದೆ. ಈ ಯೋಜನೆಯಡಿ ಫಲಾನುಭವಿಯ ಕುಟುಂಬದ ವಾರ್ಷಿಕ ವರಮಾನ ರೂ.2.00 ಲಕ್ಷಗಳಿಗಿಂತ ಕಡಿಮೆ ಇರಬೇಕಾಗಿರುತ್ತದೆ.

2.ಜಿಲ್ಲಾ ಅಂಗವಿಕಲರ ಪುನರ್ವಸತಿ ಕೇಂದ್ರ ಯೋಜನೆ:-

ವಿಕಲಚೇತನರನ್ನು ಗುರುತಿಸಿ ಅವರಿಗೆ ಶೈಕ್ಷಣಿಕ, ಉದ್ಯೋಗ ಮತ್ತು ತರಬೇತಿ, ಸಾಮಾಜಿಕ ಭದ್ರತೆ ಹಾಗೂ ಪುನರ್ವಸತಿ ಸೇವೆಗಳನ್ನು ಅವರ ಮನೆ ಬಾಗಿಲಿನಲ್ಲಿಯೇ ಒದಗಿಸಿ ಅವರ ಸರ್ವಾಂಗೀಣ ಪುನರ್ವಸತಿಯನ್ನು ಕಲ್ಪಿಸುವುದು ಈ ಯೋಜನೆಯ ಪ್ರಮುಖ ಉದ್ದೇಶವಾಗಿದೆ.ಈ ಯೋಜನೆಯಡಿ ವಿಕಲಚೇತನರಿಗೆ ಅಗತ್ಯವಿರುವ ವೈದ್ಯಕೀಯ ಸೇವೆ, ವೃತ್ತಿ ಚಿಕಿತ್ಸೆ, ವಿವಿಧ ರೀತಿಯ ಸಾಧನ ಸಲಕರಣೆಗಳನ್ನು ಕೇಂದ್ರಗಳಲ್ಲಿ ತಯಾರಿಸಿ ಒದಗಿಸಲಾಗುವುದು. ಪ್ರಸ್ತುತ 16 ಜಿಲ್ಲೆಗಳಲ್ಲಿ ಜಿಲ್ಲಾ ಪುನರ್ವಸತಿ ಕೇಂದ್ರಗಳು ನಡೆಯುತ್ತಿವೆ. (ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ಬೆಳಗಾವಿ, ಬೀದರ್, ಚಿತ್ರದುರ್ಗ, ದಕ್ಷಿಣ ಕನ್ನಡ, ಮೈಸೂರು, ಉಡುಪಿ, ಹಾಸನ, ವಿಜಯಪುರ, ರಾಯಚೂರು, ಚಿಕ್ಕಮಗಳೂರು, ಬಳ್ಳಾರಿ, ಹಾವೇರಿ, ಚಾಮರಾಜನಗರ, ಗದಗ)

3. ಅಂಗವಿಕಲತೆಯನ್ನು ನಿವಾರಿಸುವ ಶಸ್ತ್ರಚಿಕಿತ್ಸೆಗಾಗಿ ವೈದ್ಯಕೀಯ ಪರಿಹಾರ ನಿಧಿ ಯೋಜನೆ:-

ಅಂಗವಿಕಲ ವ್ಯಕ್ತಿಗಳಿಗೆ ಅಂಗವಿಕಲತೆಯನ್ನು ನಿವಾರಿಸಲು ಶಸ್ತ್ರ ಚಿಕಿತ್ಸೆಗಾಗಿ ಸರ್ಕಾರಿ ಆಸ್ಪತ್ರೆ, ಸಂಜಯಗಾಂಧಿ ಆಸ್ಪತ್ರೆಗಳಲ್ಲಿ ಹಾಗೂ ಸುಸಜ್ಜಿತ ಖಾಸಗಿ ಆಸ್ಪತ್ರೆಗಳಲ್ಲಿ ಅಂಗವಿಕಲತೆ ನಿವಾರಣಾ ಶಸ್ತ್ರ ಚಿಕಿತ್ಸೆಗಾಗಿ ರೂ.1.00 ಲಕ್ಷಗಳವರೆಗೆ ಸಹಾಯ ಧನವನ್ನು ಮಂಜೂರು ಮಾಡಲಾಗುತ್ತಿದೆ.

4. ಸಾಧನೆ ಮತ್ತು ಪ್ರತಿಭೆ ಯೋಜನೆ:

ವಿಕಲಚೇತನ ಕ್ರೀಡಾಪಟುಗಳಿಗೆ ಪ್ರೋತ್ಸಾಹ ನೀಡಿ ಧನಸಹಾಯ ನೀಡಲು "ಸಾಧನೆ" ಎಂಬ ಯೋಜನೆಯು ಜಾರಿಯಲ್ಲಿದ್ದು, ಕ್ರೀಡೆಗಳಲ್ಲಿ ವಿಶೇಷ ಸಾಧನೆಗೈದ ವಿಕಲಚೇತನರಿಗೆ ರೂ.50,000/-ಗಳ ಧನ ಸಹಾಯವನ್ನು ನೀಡಲಾಗುತ್ತಿದೆ.

ವಿಕಲಚೇತನರು ನೀಡುವ ಸಾಂಸ್ಕೃತಿಕ ಚಟುವಟಿಕೆಗಳಿಗೆ ಪ್ರೋತ್ಸಾಹ ನೀಡಿ ಧನಸಹಾಯ ನೀಡುವ ಸಲುವಾಗಿ "ಪ್ರತಿಭೆ" ಎಂಬ ಯೋಜನೆಯು ಜಾರಿಯಲ್ಲಿದ್ದು, ವೈಯಕ್ತಿಕ ಸಾಂಸ್ಕೃತಿಕ ರೂ.2,000/-ಗಳು ಹಾಗೂ ಸಮೂಹ ಕಾರ್ಯಕ್ರಮಕ್ಕೆ ರೂ.10,000/-ಗಳ ಪ್ರೋತ್ಸಾಹಧನ ನೀಡಲಾಗುತ್ತದೆ.

5. ನಿರಾಮಯ ಆರೋಗ್ಯ ವಿಮಾ ಯೋಜನೆ :

ಬುದ್ಧಿಮಾಂದ್ಯ, ಸೆರಬ್ರಲ್ ಪಾಲ್ಸಿ, ಆಟಿಸಂ ಮತ್ತು ಬಹುವಿಧ ಅಂಗವಿಕಲತೆ ಹೊಂದಿರುವ ಪ್ರತಿ ವ್ಯಕ್ತಿ ಹಾಗೂ ಮಗುವಿಗೆ ವರ್ಷಕ್ಕೆ ಒಂದು ಬಾರಿ ಪ್ರೀಮಿಯಂ ಮೊತ್ತ ರೂ.250/-ಗಳನ್ನು ಭಾರತ ಸರ್ಕಾರದಿಂದ ಗುರುತಿಸಲ್ಪಟ್ಟ ಅಧಿಕೃತ ಸಂಸ್ಥೆಯಾದ ಅಂಗವಿಕಲರ ಪುನಶ್ಚೇತನ ಸಂಸ್ಥೆ (ರಿ) (ಎ.ಪಿ.ಡಿ) ಬೆಂಗಳೂರು ರವರಿಗೆ ಪಾವತಿಸಲಾಗುವುದು. ಪ್ರತಿ ವರ್ಷ ಯೋಜನೆಯಡಿ ಬರುವ ಫಲಾನುಭವಿಗಳು ರೂ.1.00 ಲಕ್ಷಗಳವರೆಗೆ ವೈದ್ಯಕೀಯ ಸೌಲಭ್ಯ ಪಡೆಯಬಹುದಾಗಿರುತ್ತದೆ. ಈ ಮೊತ್ತದಲ್ಲಿ ರೂ.60,000/-ಗಳವರೆಗೆ ಸರ್ಜರಿ ವೆಚ್ಚ ಉಳಿದ ರೂ.40,000/-ಗಳಲ್ಲಿ ವೈದ್ಯಕೀಯ ಖರ್ಚು ಥೆರಪಿ, ಪ್ರಯಾಣ ವೆಚ್ಚಗಳನ್ನು ಒಳಗೊಂಡಿರುತ್ತದೆ.

7. **ಸ್ಪರ್ಧಾ ಚೇತನ:-**

ಈ ಯೋಜನೆಯಡಿ ವಿಶೇಷ ಸಾಮರ್ಥ್ಯ/ಭಿನ್ನ ಸಾಮರ್ಥ್ಯದ ವಿದ್ಯಾವಂತ ವ್ಯಕ್ತಿಗಳಿಗೆ ಐ.ಎ.ಎಸ್./ಕೆ.ಎ.ಎಸ್. ಹಾಗೂ ಇತರೆ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಸರ್ಕಾರದ ಇತರೆ ಇಲಾಖೆಗಳಡಿ ಗುರುತಿಸಲ್ಪಟ್ಟ ಪೂರ್ವ ಪರೀಕ್ಷಾ ತರಬೇತಿ ಕೇಂದ್ರಗಳು ಹಾಗೂ ಈ ಇಲಾಖೆಯಿಂದ ಗುರುತಿಸಲ್ಪಟ್ಟ ತರಬೇತಿ ಕೇಂದ್ರಗಳ ಮೂಲಕ ತರಬೇತಿಯನ್ನು ಉಚಿತವಾಗಿ ನೀಡಲಾಗುತ್ತಿದೆ.

8. **ನಿರುದ್ಯೋಗ ಭತ್ಯೆ:-** ಎಸ್.ಎಸ್.ಎಲ್.ಸಿ ಹಾಗೂ ನಂತರ ವ್ಯಾಸಂಗ ಮಾಡಿರುವ ನಿರುದ್ಯೋಗಿ ವಿಕಲಚೇತನರಿಗೆ ಮಾಸಿಕ ರೂ.1000/-ಗಳ ನಿರುದ್ಯೋಗ ಭತ್ಯೆಯನ್ನು ಮಂಜೂರು ಮಾಡಲಾಗುತ್ತಿದೆ.

(ಇ) ಸಾರ್ವಜನಿಕ ಅರಿವು ಮೂಡಿಸುವ ಯೋಜನೆಗಳು:

1. ವಿಕಲಚೇತನರ ಮಾಹಿತಿ ಸಲಹಾ ಕೇಂದ್ರ :

ಅಂಗವಿಕಲರಿಗೆ ಲಭ್ಯವಿರುವ ರಾಜ್ಯ ಸರ್ಕಾರದ ಹಾಗೂ ಕೇಂದ್ರ ಸರ್ಕಾರದ ಯೋಜನೆಗಳ ಹಾಗೂ ವಿಶೇಷ ಶಾಲೆಗಳು ಹಾಗೂ ವೃತ್ತಿ ತರಬೇತಿ ಸಂಸ್ಥೆಗಳ ಬಗ್ಗೆ ಮಾಹಿತಿಯನ್ನು ಒದಗಿಸಲು ನಿರ್ದೇಶನಾಲಯದಲ್ಲಿ ಹಾಗೂ ರಾಜ್ಯದ 30 ಜಿಲ್ಲೆಗಳಲ್ಲಿ ವಿಕಲಚೇತನರ ಸಹಾಯವಾಣಿ / ಮಾಹಿತಿ ಕೇಂದ್ರಗಳನ್ನು ನಡೆಸಲಾಗುತ್ತಿದೆ.ಈ ಕೇಂದ್ರಗಳಲ್ಲಿ ಒಳ್ಳೆಯ ಗುಣ ಮಟ್ಟದ ಕೃತಕಾಂಗಗಳು ದೊರೆಯುವ ಮಾಹಿತಿ ಹಾಗೂ ಅಂಗವಿಕಲರಿಗೆ ಬೇಕಾಗಿರುವ ಮಾಹಿತಿಗಳನ್ನು ಮತ್ತು ಇದರ ಜೊತೆಗೆ ರಾಜ್ಯ ಸರ್ಕಾರ, ಕೇಂದ್ರ ಸರ್ಕಾರ, ಸಾರ್ವಜನಿಕ ಉದ್ಯಮ ಹಾಗೂ ಖಾಸಗಿ ಉದ್ಯಮಗಳಲ್ಲಿ ಅಂಗವಿಕಲರಿಗೆ ಉದ್ಯೋಗ ಅವಕಾಶಗಳ ಬಗ್ಗೆ ಮಾಹಿತಿಯನ್ನು ನೀಡಲಾಗುವುದು.

2) **ವಿಕಲಚೇತನರಿಗೆ ಗುರುತಿನ ಚೀಟಿ ನೀಡುವ ಯೋಜನೆ:-**

ಈ ಯೋಜನೆಯಡಿಯಲ್ಲಿ ವಿಕಲಚೇತನ ವ್ಯಕ್ತಿಗಳಿಗೆ ಗುರುತಿನ ಚೀಟಿಗಳನ್ನು ನೀಡಲಾಗುತ್ತಿದೆ.ಈ ಗುರುತಿನ ಚೀಟಿಯನ್ನು ವಿವಿಧ ಸರ್ಕಾರಿ ಸೌಲಭ್ಯಗಳನ್ನು ಪಡೆಯಲು ಉಪಯೋಗಿಸಿಕೊಳ್ಳಬಹುದಾಗಿದೆ. ವಿಕಲಚೇತನರಿಗೆ ವಿಶಿಷ್ಠ ಗುರುತಿನ ಚೀಟಿ (UNIQUE DISABILITY ID)ನೀಡುವ ಯೋಜನೆಯು ಕೇಂದ್ರ ಸರ್ಕಾರ ಪ್ರಾಯೋಜಿತ ಯೋಜನೆಯಾಗಿದೆ. ರಾಜ್ಯ ಸರ್ಕಾರದಿಂದ ನೇಮಿಸಲಾಗುವ ವೈದ್ಯಕೀಯ ಪ್ರಾಧಿಕಾರಗಳಿಂದ ದೃಢೀಕರಿಸಲಾಗುವ ವೈದ್ಯಕೀಯ ಪ್ರಮಾಣ ಪತ್ರದ ಸಮಗ್ರ ಮಾಹಿತಿಯುಳ್ಳ ಗಣಕೀಕೃತ ಗುರುತಿನ ಚೀಟಿಯನ್ನು ವಿಕಲಚೇತನ ವ್ಯಕ್ತಿಗಳಿಗೆ ನೀಡುವ ವ್ಯವಸ್ಥೆಯಾಗಿದ್ದು, ಇದರಲ್ಲಿ ವಿಕಲಚೇತನ ವ್ಯಕ್ತಿಯ ವಿವರಗಳು ಹಾಗೂ ಅವರಲ್ಲಿರುವ ವಿಕಲತೆಯ ವಿವರ ಮತ್ತು ಪ್ರಮಾಣವನ್ನು ನಮೂದಿಸಲಾಗಿರುತ್ತದೆ.

3).ವಿಕಲಚೇತನರಿಗೆ ರಿಯಾಯಿತಿ ದರದ ಬಸ್ ಪಾಸ್:

ಈ ಯೋಜನೆಯಡಿ ವಿಕಲಚೇತನರಿಗೆ 100 ಕಿ.ಮೀ. ವ್ಯಾಪ್ತಿಯೊಳಗೆ ಸಂಚರಿಸಲು ವಾರ್ಷಿಕ ರೂ.660/- ರಿಯಾಯಿತಿ ದರದಲ್ಲಿ ಬಸ್ ಪಾಸ್‌ಗಳನ್ನು ಕೆ.ಎಸ್.ಆರ್.ಟಿ.ಸಿ ಹಾಗೂ ಬಿ.ಎಂ.ಟಿ.ಸಿ ವತಿಯಿಂದ ವಿತರಿಸಲಾಗುತ್ತಿದೆ ಪೂರ್ಣ ಅಂಧರು ಉಚಿತವಾಗಿ ರಾಜ್ಯದಲ್ಲಿ ಸಂಚರಿಸಲು ಅವಕಾಶವಿರುತ್ತದೆ.

ಹಿರಿಯ ನಾಗರೀಕರಿಗಾಗಿ ಜಾರಿಗೊಳಿಸುತ್ತಿರುವ ಯೋಜನೆಗಳು

ಹಗಲು ಯೋಗಕ್ಷೇಮ ಕೇಂದ್ರಗಳು:

ರಾಜ್ಯದ 30 ಜಿಲ್ಲೆಗಳಿಗೆ ಹಗಲು ಯೋಗಕ್ಷೇಮ ಕೇಂದ್ರಗಳನ್ನು ಸ್ಥಾಪಿಸಲು ಸರ್ಕಾರದ ಮಂಜೂರಾತಿ ದೊರೆತಿದ್ದು, ಪ್ರತಿ ಕೇಂದ್ರದಲ್ಲಿ ಸುಮಾರು 50–150 ಫಲಾನುಭವಿಗಳಿಗೆ ಅವಕಾಶ ಕಲ್ಪಿಸಿಕೊಡಲಾಗಿದ್ದು, ಸದರಿ ಯೋಜನೆಗೆ ಸರ್ಕಾರದಿಂದ ವಾರ್ಷಿಕ ರೂ.11.20 ಲಕ್ಷಗಳ ಅನುದಾನವನ್ನು ಮಂಜೂರು ಮಾಡಲಾಗುತ್ತದೆ.

1. **ಹಿರಿಯ ನಾಗರಿಕರ ಸಹಾಯವಾಣಿ ಕೇಂದ್ರಗಳು:**

ಹಿರಿಯ ನಾಗರಿಕರು ಕಿರುಕುಳ, ಹಣಕಾಸಿನ ಶೋಷಣೆ, ಮಾನಸಿಕ ತುಮುಲ ಮತ್ತು ದುರ್ಬಲರಾಗಿ ಅನೇಕ ಸಮಸ್ಯೆಗಳನ್ನು ಎದುರಿಸುತ್ತಿದ್ದು, ಇಂತಹ ಸಮಸ್ಯೆಗಳ ನಿವಾರಣೆಗಾಗಿ ಹಾಗೂ ತುರ್ತು ಸಹಾಯಕ್ಕಾಗಿ ಹಿರಿಯ ನಾಗರಿಕರ ಸಹಾಯವಾಣಿ ಕೇಂದ್ರಗಳನ್ನು ರಾಜ್ಯದ 30 ಜಿಲ್ಲೆಗಳಲ್ಲಿ ಅನುಷ್ಠಾನಗೊಳಿಸಲು ಬೆಳಗಾವಿ ಮತ್ತು ಕಲಬುರಗಿ ಜಿಲ್ಲೆಗಳನ್ನು ಹೊರತುಪಡಿಸಿ ಉಳಿದ 28 ಜಿಲ್ಲೆಗಳಲ್ಲಿ ಸಹಾಯವಾಣಿ ಕೇಂದ್ರಗಳನ್ನು ಆಯಾ ಜಿಲ್ಲೆಯ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಕಛೇರಿ ಆವರಣದಲ್ಲಿ, ಸ್ವಯಂ ಸೇವಾ ಸಂಸ್ಥೆಗಳ ಸಹಯೋಗದಿಂದ ನಡೆಸಲಾಗುತ್ತಿದೆ.

2. **ಹಿರಿಯ ನಾಗರಿಕರ ವೃದ್ಧಾಶ್ರಮ:**

ರಾಜ್ಯದ 30 ಜಿಲ್ಲೆಗಳಲ್ಲಿ ನಿರ್ಗತಿಕ ಹಿರಿಯ ನಾಗರಿಕರಿಗಾಗಿ ವೃದ್ಧಾಶ್ರಮಗಳನ್ನು ಸ್ವಯಂ ಸೇವಾ ಸಂಸ್ಥೆಗಳ ಮೂಲಕ ನಡೆಸಲಾಗುತ್ತಿದ್ದು, ಈ ವೃದ್ಧಾಶ್ರಮದಲ್ಲಿ 25 ನಿರ್ಗತಿಕ ಹಿರಿಯ ನಾಗರಿಕರನ್ನು ದಾಖಲಿಸಿಕೊಳ್ಳಲು ಅವಕಾಶವಿದ್ದು, ಒಂದು ವೃದ್ಧಾಶ್ರಮದ ನಿರ್ವಹಣೆಗಾಗಿ ವಾರ್ಷಿಕ ರೂ.8.00ಲಕ್ಷಗಳ ಅನುದಾನವನ್ನು ಬಿಡುಗಡೆ ಮಾಡಲಾಗುತ್ತಿದ್ದು, ಇದರಲ್ಲಿ ಸಿಬ್ಬಂದಿ ವೆಚ್ಚ, ನಿರ್ವಹಣಾ ವೆಚ್ಚ, ಔಷಧಿ, ಕಟ್ಟಡ ಬಾಡಿಗೆ, ವೃತ್ತ ಪತ್ರಿಕೆ ಹಾಗೂ ಇತರೆ ವೆಚ್ಚಗಳಿಗಾಗಿ ಒಟ್ಟು ಯೋಜನಾ ವೆಚ್ಚದ ಶೇ.90ರಷ್ಟು ಅನುದಾನವನ್ನು ಸ್ವಯಂ ಸೇವಾ ಸಂಸ್ಥೆಗಳಿಗೆ ನೀಡಲಾಗುತ್ತಿದ್ದು ಉಳಿದ ಶೇ.10ರಷ್ಟನ್ನು ಸಂಸ್ಥೆಯು ಭರಿಸಬೇಕಾಗುತ್ತದೆ. ಅನುದಾನವನ್ನು ಜಿಲ್ಲಾ ಪಂಚಾಯತ್, ಮೂಲಕ ಮಂಜೂರು ಮಾಡಲಾಗುತ್ತಿದೆ.

ರಾಜ್ಯದ ಪ್ರತಿ ಕಂದಾಯ ಉಪ ವಿಭಾಗದಲ್ಲಿ ಸ್ವಯಂ ಸೇವಾ ಸಂಸ್ಥೆಗಳ ಮೂಲಕ ವೃದ್ಧಾಶ್ರಮಗಳನ್ನು ಪ್ರಾರಂಭಿಸಲು ಅವಕಾಶವಿದ್ದು, ಪ್ರಸ್ತುತ 8 ಕಂದಾಯ ಉಪ ವಿಭಾಗಕ್ಕೆ ವೃದ್ಧಾಶ್ರಮ ನಡೆಸಲು ಆಡಳಿತಾತ್ಮಕ ಮಂಜೂರಾತಿ ದೊರೆತಿರುತ್ತದೆ.

3. **ಹಿರಿಯ ನಾಗರಿಕರಿಗೆ ಗುರುತಿನ ಚೀಟಿಗಳು:**

60 ವರ್ಷ ಮೇಲ್ಪಟ್ಟ ವಯೋಮಾನದ ಹಿರಿಯ ನಾಗರಿಕರ ಗುರುತಿನ ಚೀಟಿ ಪಡೆಯಲು ಸೇವಾ ಸಿಂಧು ಆನ್‌ಲೈನ್ ತಂತ್ರಾಂಶವನ್ನು ಅಭಿವೃದ್ಧಿ ಪಡಿಸಲಾಗಿದ್ದು, ದಿ:01.10.2018ರಿಂದ ಹಿರಿಯ ನಾಗರಿಕರು ಸೇವಾ ಸಿಂಧು ಆನ್‌ಲೈನ್ ಮೂಲಕ ಅರ್ಜಿಯನ್ನು ಸಲ್ಲಿಸಿ ಹಿರಿಯ ನಾಗರಿಕರ ಗುರುತಿನ ಚೀಟಿಯನ್ನು ಪಡೆಯಬಹುದಾಗಿದೆ.

ಅನುಬಂಧ-4

ಇಲಾಖೆಯ ಯೋಜನೆಗಳ ಮಾನದಂಡಗಳು

ಕ್ರ ಸಂ.	ಯೋಜನೆಯ ಹೆಸರು ಮತ್ತು ಯೋಜನೆಯ ವಿವರ	ಮಾನದಂಡಗಳು
1	**ಸರ್ಕಾರದಿಂದ ಶ್ರವಣದೋಷವುಳ್ಳ ಮತ್ತು ಅಂಧ ಮಕ್ಕಳಿಗಾಗಿ ವಿಶೇಷ ವಸತಿಯುತ ಶಾಲೆಗಳು** : ಇಲಾಖೆಯಿಂದ ಶ್ರವಣದೋಷವುಳ್ಳ ಮಕ್ಕಳಿಗಾಗಿ ಬೆಂಗಳೂರು ನಗರ, ಮೈಸೂರು, ಗುಲ್ಬರ್ಗ, ಬಳ್ಳಾರಿ, ಬೆಳಗಾಂ ಜಿಲ್ಲೆಗಳಲ್ಲಿ 4 ಕಿವುಡು ಮಕ್ಕಳ ಶಾಲೆಗಳು ಹಾಗೂ ಗುಲ್ಬರ್ಗಾ, ಮೈಸೂರು, ದಾವಣಗೆರೆ ಹಾಗೂ ಹುಬ್ಬಳ್ಳಿಗಳಲ್ಲಿ 4 ಅಂಧ ಮಕ್ಕಳ ಶಾಲೆಗಳನ್ನು ನಡೆಸಲಾಗುತ್ತಿದೆ. ಈ ಶಾಲೆಗಳಲ್ಲಿ ಮಕ್ಕಳಿಗೆ ಉಚಿತವಾಗಿ ವಸತಿ, ಊಟ ಮತ್ತು ಶಿಕ್ಷಣವನ್ನು ನೀಡಲಾಗುತ್ತಿದೆ. ಬೆಳಗಾಂನಲ್ಲಿ ಶ್ರವಣದೋಷವುಳ್ಳ ಹೆಣ್ಣು ಮಕ್ಕಳಿಗಾಗಿ ಹಾಗೂ ದಾವಣಗೆರೆಯಲ್ಲಿ ಅಂಧ ಹೆಣ್ಣು ಮಕ್ಕಳಿಗಾಗಿ ಇರುವ ಪ್ರತ್ಯೇಕ ಶಾಲೆಯಾಗಿರುತ್ತದೆ.	• ಹುಟ್ಟಿದ ದಿನಾಂಕದ ಬಗ್ಗೆ ದಾಖಲಾತಿ. • ಸಾಮಾನ್ಯ ಶಾಲೆಗಳಲ್ಲಿ ವ್ಯಾಸಂಗ ಮಾಡಲು ಸಾಧ್ಯವಾಗದ ಅಂಗವಿಕಲರಿಗೆ • ಅಂಗವಿಕಲತೆ ಹೊಂದಿರುವ ಬಗ್ಗೆ ಪ್ರಮಾಣ ಪತ್ರ ಹೊಂದಿರಬೇಕು, • ಬೇರೆ ಶಾಲೆಯಲ್ಲಿ ಓದಿದಲ್ಲಿ ವರ್ಗಾವಣೆ ಪ್ರಮಾಣ ಪತ್ರ • 1 ರಿಂದ 10ನೇ ತರಗತಿಯವರೆಗೆ ವ್ಯಾಸಂಗ ಮಾಡಲು ಅವಕಾಶವಿರುತ್ತದೆ.
2	**1982ರ ಅನುದಾನ ಸಂಹಿತೆಯಡಿ ವಿಶೇಷ ಶಾಲೆಗಳು** ವಿವಿಧ ವಿಕಲಚೇತನ ಮಕ್ಕಳಿಗೆ ಉಚಿತ ವಿದ್ಯಾಭ್ಯಾಸ, ಊಟ, ವಸತಿ ಮತ್ತು ಶೈಕ್ಷಣಿಕ ಸೌಲಭ್ಯಗಳನ್ನು ಕಲ್ಪಿಸಿ ಸಮಾಜದಲ್ಲಿ ಇತರೆ ಮಕ್ಕಳಂತೆ ವಿದ್ಯಾಭ್ಯಾಸವನ್ನು ಒದಗಿಸಲು ಉದ್ದೇಶಿಸಿರುವ ಸ್ವಯಂ ಸೇವಾ ಸಂಸ್ಥೆಗಳಿಗೆರಾಜ್ಯ ಸರ್ಕಾರವು ಜಿಲ್ಲಾ ಪಂಚಾಯಿತಿ ಮೂಲಕ ಧನ ಸಹಾಯ ನೀಡುವ ಯೋಜನೆ.	ಸ್ವಯಂ ಸೇವಾ ಸಂಸ್ಥೆಗಳ ಮೂಲಕ ವಿಶೇಷ ಶಾಲೆಗಳನ್ನು ನಡೆಸಲಾಗುತ್ತಿದೆ. • ಸ್ವಯಂ ಸೇವಾ ಸಂಸ್ಥೆಯು ಭಾರತದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಪ್ರಕಾರ ನೊಂದಣಿಯಾಗಿರುವ ಚಾರಿಟಬಲ್ ಟ್ರಸ್ಟ್ ಸೊಸೈಟಿ ಅಥವಾ ಸಮಾಜಸೇವೆಯಲ್ಲಿ ತೊಡಗಿರುವ ಅಧಿಕಾರೇತರ ಸಂಸ್ಥೆಯಾಗಿರಬೇಕು. ಸ್ವಯಂ ಸೇವಾ ಸಂಸ್ಥೆಯು ಅಂಗವಿಕಲರ ಕಾಯ್ದೆ-1995 ಸೆಕ್ಷನ್ 50, 51 ರಂತೆ ನೊಂದಣಿ ಮಾಡಿಸಿರಬೇಕು. • ಈ ಯೋಜನೆಯನ್ನು ಪಡೆಯಲು ಸ್ವಯಂ ಸೇವಾ ಸಂಸ್ಥೆಯು ಅಸ್ತಿತ್ವಕ್ಕೆ ಬಂದು ಕನಿಷ್ಠ 2 ವರ್ಷಗಳಾಗಿರಬೇಕು. ಸ್ವಯಂ ಸೇವಾ ಸಂಸ್ಥೆಯು, ಸಾಕಷ್ಟು ಸಿಬ್ಬಂದಿವರ್ಗದೊಂದಿಗೆ ಅಗತ್ಯವಾದ ಮೂಲ ಸೌಲಭ್ಯ ಸಂಪನ್ಮೂಲ ಹಾಗೂ ಅನುಭವ ಮತ್ತು ಆರ್ಥಿಕವಾಗಿ ಸದೃಢವಾಗಿರಬೇಕು. • ಸ್ವಯಂ ಸೇವಾ ಸಂಸ್ಥೆಯು ಶಾಲೆಯನ್ನು ನಡೆಸುವಲ್ಲಿ ಅಥವಾ ಇಂತಹುದೇ ಇನ್ನಿತರ ಕಾರ್ಯಕ್ರಮಗಳನ್ನು ನಡೆಸುವಲ್ಲಿ ಅನುಭವ ಹೊಂದಿರಬೇಕು.
3	**ಅಂಗವಿಕಲ ಮಕ್ಕಳ ಶಿಶು ಕೇಂದ್ರೀಕೃತ ವಿಶೇಷ ಶೈಕ್ಷಣಿಕ ಯೋಜನೆ** ಸ್ವಯಂ ಸೇವಾ ಸಂಸ್ಥೆಗಳ ಮೂಲಕ ನಡೆಸುತ್ತಿರುವ ವಿಶೇಷ ಶಾಲೆಗಳಿಗೆ ಮಕ್ಕಳ ಸಂಖ್ಯೆಗೆ ಅನುಗುಣವಾಗಿ ಸಹಾಯ ಧನ ನೀಡುವ ಯೋಜನೆಯಾಗಿದೆ. ಸದರಿ ಯೋಜನೆಯು ಎಲ್ಲಾ ವಿಧದ ವಿಕಲಚೇತನ ಮಕ್ಕಳಿಗೆ ವ್ಯಾಸಂಗ ಮಾಡಲು ಪ್ರತ್ಯೇಕವಾಗಿ ಅಂಗವಿಕಲತೆಯ ಅನುಸಾರ ವಿಶೇಷ ಶಾಲೆಗಳನ್ನು ನಡೆಸಲು ಅವಕಾಶ ಮಾಡಿಕೊಡಲಾಗಿದೆ.	• ಸ್ವಯಂ ಸೇವಾ ಸಂಸ್ಥೆಯು ಭಾರತದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಪ್ರಕಾರ ನೊಂದಣಿಯಾಗಿರುವ ಚಾರಿಟಬಲ್ ಟ್ರಸ್ಟ್ ಸೊಸೈಟಿ ಅಥವಾ ಸಮಾಜಸೇವೆಯಲ್ಲಿ ತೊಡಗಿರುವ ಅಧಿಕಾರೇತರ ಸಂಸ್ಥೆಯಾಗಿರಬೇಕು. ಸ್ವಯಂ ಸೇವಾ ಸಂಸ್ಥೆಯು ಅಂಗವಿಕಲರ ಕಾಯ್ದೆ-1995 ಸೆಕ್ಷನ್ 50, 51 ರಂತೆ ನೊಂದಣಿ ಮಾಡಿಸಿರಬೇಕು. • ಅಂಗವಿಕಲರ ಹಾಗೂ ಹಿರಿಯ ನಾಗರಿಕರ ಕಲ್ಯಾಣ ಇಲಾಖೆಯ ವತಿಯಿಂದ ಅನುಮತಿ ಪಡೆದಂತಹ ಸಂಸ್ಥೆಗಳಿಗೆ ಮಾತ್ರವೇ ಸಹಾಯಧನ ನೀಡಲಾಗುವುದು. • ಸಂಸ್ಥೆಯು ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಂದ ಯಾವುದೇ ರೀತಿಯ ಶುಲ್ಕ, ದೇಣಿಗೆ, ವಂತಿಗೆ, ಧನಸಹಾಯ ಮುಂತಾದವುಗಳನ್ನು ಸ್ವೀಕರಿಸತಕ್ಕದ್ದಲ್ಲ. • ಶಾಲೆಯಲ್ಲಿ ಕನಿಷ್ಠ 25 ವಿದ್ಯಾರ್ಥಿಗಳು ದಾಖಲಾಗಿರಬೇಕು. ಶಾಲೆಯಲ್ಲಿ 20 ಕ್ಕಿಂತ ಕಡಿಮೆ ಇದ್ದಲ್ಲಿ

		ಸಹಾಯಧನ ಪಡೆಯಲು ಅರ್ಹರಿರುವುದಿಲ್ಲ. ಮತ್ತು ಯೋಜನೆಯ ನಿಯಮಾನುಸಾರ ಅರ್ಹತೆಯನ್ನು ಪಡೆದಿರಬೇಕು.
4	ಮಾನಸಿಕ ಅಸ್ವಸ್ಥ, ಸೆರಬ್ರಲ್ ಪಾಲ್ಸಿ, ಆಟಿಸಂ ಮಕ್ಕಳ ಹಗಲು ಯೋಗಕ್ಷೇಮ ಕೇಂದ್ರಗಳು 3 ವರ್ಷಕ್ಕಿಂತ ಮೇಲ್ಪಟ್ಟ ವಯೋಮಾನದ ಮಾನಸಿಕ ಅಸ್ವಸ್ಥ, ಸೆರಬ್ರಲ್ ಪಾಲ್ಸಿ, ಆಟಿಸಂ ಹಾಗೂ ತೀವ್ರತರನಾದ ಬುದ್ಧಿಮಾಂದ್ಯರ ಪಾಲನೆಗಾಗಿ ಬೆಂಗಳೂರು ನಗರದಲ್ಲಿ 02 ಹಗಲು ಯೋಗಕ್ಷೇಮ ಕೇಂದ್ರಗಳನ್ನು ನಡೆಸಲಾಗುತ್ತಿದೆ. ಅನುದಾನವನ್ನು ಮಕ್ಕಳ ಸಂಖ್ಯೆಯನ್ನು ಆಧಾರಿಸಿ ನೀಡಲಾಗುತ್ತದೆ.	• ಬೆಂಗಳೂರು ನಗರದ 6 ರಿಂದ 18 ವರ್ಷಕ್ಕಿಂತ ಮೇಲ್ಪಟ್ಟ ಮಯೋಮಾನದ ಬುದ್ಧಿಮಾಂದ್ಯರು, ಸೆರಬ್ರಲ್ ಪಾಲ್ಸಿ, ಆಟಿಸಂ ಹಾಗೂ ತೀವ್ರತರನಾದ ವಿಕಲಚೇತನ ಮಕ್ಕಳಿಗೆ ಸೌಲಭ್ಯವನ್ನು ಒದಗಿಸಲಾಗುವುದು. • ಈ ಯೋಜನೆಯನ್ನು ಯಾವುದೇ ಆದಾಯಮಿತಿಗೆ ಒಳಪಡಿಸಿರುವುದಿಲ್ಲ. • ಪ್ರತಿ ಕೇಂದ್ರದಲ್ಲಿ 25 ಮಕ್ಕಳು ಮಾತ್ರ ಇರಲು ಅವಕಾಶ ಕಲ್ಪಸಲಾಗಿದೆ. • ಇಲಾಖೆಯಿಂದ ಅನುಮತಿಯನ್ನು ಪಡೆದ ಸಂಸ್ಥೆಗಳು ಮಾತ್ರ ಅರ್ಜಿ ಸಲ್ಲಿಸಲು ಅರ್ಹರಾಗಿರುತ್ತಾರೆ.
5	ವಿದ್ಯಾರ್ಥಿವೇತನ ಮತ್ತು ಪ್ರೋತ್ಸಾಹಧನ ಈ ಕಾರ್ಯಕ್ರಮದಡಿ ಒಂದನೇ ತರಗತಿಯಿಂದ ಸ್ನಾತಕೋತ್ತರ ಪದವಿಯವರೆಗೆ ವ್ಯಾಸಂಗ ಮಾಡುತ್ತಿರುವ ಅರ್ಹ ವಿಕಲಚೇತನರಿಗೆ ವಿದ್ಯಾರ್ಥಿ ವೇತನ ನೀಡಲಾಗುತ್ತಿದೆ.	• ವಿಕಲಚೇತನ ವಿದ್ಯಾರ್ಥಿಗಳ ವೇತನವನ್ನು ಮಂಜೂರು ಮಾಡಲು ಶಾಲಾ/ಕಾಲೇಜು ಮುಖ್ಯಸ್ಥರ ದೃಢೀಕರಣದೊಂದಿಗೆ ಅರ್ಜಿಗಳನ್ನು ಆಯಾ ಜಿಲ್ಲೆಯ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳಿಗೆ ಸಲ್ಲಿಸುವುದು. • ಎಲ್ಲಾ ವರ್ಗದ ವಿಕಲಚೇತನ ವಿದ್ಯಾರ್ಥಿಗಳಿಗೆ ಅವಕಾಶ ಕಲ್ಪಿಸಲಾಗಿದೆ. • ವಿಕಲಚೇತನ ವಿದ್ಯಾರ್ಥಿಗಳು ವಿದ್ಯಾರ್ಥಿವೇತನವನ್ನು ಪಡೆಯಲು ಯಾವುದೇ ಆದಾಯ ಮಿತಿ ಇರುವುದಿಲ್ಲ. • ಉನ್ನತ ಶಿಕ್ಷಣದಲ್ಲಿ ಆಯಾ ವರ್ಷಗಳಲ್ಲಿ ಉತ್ತೀರ್ಣರಾದವರಿಗೆ ಮಾತ್ರ ಈ ಸೌಲಭ್ಯ ನೀಡಲಾಗುವುದು. • ವಿದ್ಯಾರ್ಥಿಗಳು ಕಡ್ಡಾಯವಾಗಿ ಬ್ಯಾಂಕ್ ಖಾತೆಯನ್ನು ಹೊಂದಿರಬೇಕು ಹಾಗೂ ಅವರ ಬ್ಯಾಂಕ್ ಖಾತೆಗೆ ವಿದ್ಯಾರ್ಥಿವೇತನವನ್ನು ಜಮಾ ಮಾಡಲಾಗುವುದು.
6	ಪ್ರತಿಭಾವಂತ ಅಂಗವಿಕಲ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ ಬಹುಮಾನ ಯೋಜನೆ ಪಬ್ಲಿಕ್ ಪರೀಕ್ಷೆಗಳಲ್ಲಿ ಶೇಕಡ 60 ಕ್ಕಿಂತಲೂ ಹೆಚ್ಚಿನ ಅಂಕಗಳನ್ನು ಪಡೆದ ಪ್ರತಿಭಾನ್ವಿತ ವಿಕಲಚೇತನ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ ನೀಡಿ ವಿಕಲಚೇತನ ವಿದ್ಯಾರ್ಥಿಗಳನ್ನು ಪ್ರತಿಭಾವಂತರನ್ನಾಗಿಸಿ ಸಮಾಜದ ಮುಖ್ಯವಾಹಿನಿಗೆ ತರುವ ಯೋಜನೆಯಾಗಿದೆ.	• ವ್ಯಾಸಂಗ ಮಾಡುತ್ತಿರುವ ಹಾಗೂ ಪರೀಕ್ಷೆಗೆ ಹಾಜರಾದ ವಿದ್ಯಾರ್ಥಿಯು ಶೇ.40ಕ್ಕಿಂತ ಹೆಚ್ಚು ಅಂಗವಿಕಲತೆ ಹೊಂದಿರಬೇಕು ಹಾಗೂ ವೈದ್ಯಕೀಯ ಪ್ರಾಧಿಕಾರದಿಂದ ಪಡೆದ ವೈದ್ಯಕೀಯ ಪ್ರಮಾಣ ಪತ್ರ ಪಡೆದಿರಬೇಕು. • ಪರೀಕ್ಷೆಗೆ ಹಾಜರಾದ ವಿದ್ಯಾರ್ಥಿಗಳು ಪ್ರಥಮ ಬಾರಿಗೆ ಉತ್ತೀರ್ಣರಾಗಿರಬೇಕು. • ಶೇ.60%ಕ್ಕಿಂತಲೂ ಹೆಚ್ಚಿನ ಅಂಕಗಳಿಸಿದ ವಿದ್ಯಾರ್ಥಿಗಳು ಮಾತ್ರ ಈ ಯೋಜನೆಗೆ ಅರ್ಹರಾಗಿರುತ್ತಾರೆ. • ಅರ್ಜಿಯನ್ನು ವ್ಯಾಸಂಗ ಮಾಡುತ್ತಿರುವ ಶಾಲೆ/ಕಾಲೇಜು ಮುಖ್ಯಸ್ಥರ ಮೂಲಕ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳಿಗೆ ಸಲ್ಲಿಸಬೇಕು.
7	ಶುಲ್ಕ ಮರುಪಾವತಿ ಎಸ್.ಎಸ್.ಎಲ್.ಸಿ. ನಂತರ ಉನ್ನತ ಶಿಕ್ಷಣ, ವೃತ್ತಿ ಶಿಕ್ಷಣ, ತಾಂತ್ರಿಕ ಶಿಕ್ಷಣ, ಸ್ನಾತಕೋತ್ತರ, ಔದ್ಯೋಗಿಕ ಶಿಕ್ಷಣಗಳಿಗೆ ನಿಯಮಾನುಸಾರ ಆಯ್ಕೆಯಾಗುವ ವಿಕಲಚೇತನ ವಿದ್ಯಾರ್ಥಿಗಳಿಗೆ ಸರ್ಕಾರವು ನಿಗದಿಪಡಿಸಿರುವ ಪರೀಕ್ಷಾ ಶುಲ್ಕ, ಬೋಧನಾ ಶುಲ್ಕ, ಪ್ರಯೋಗಾಲಯ ಶುಲ್ಕ, ಕ್ರೀಡಾ ಶುಲ್ಕ ಹಾಗೂ ಗ್ರಂಥಾಲಯ ಶುಲ್ಕಗಳನ್ನು ಮರು ಪಾವತಿಸುವ ಯೋಜನೆಯು ಜಾರಿಗೆ ಬಂದಿರುತ್ತದೆ.	• ವಿಕಲಚೇತನರು ಭಾರತದ ಪ್ರಜೆಯಾಗಿದ್ದು, ಅರ್ಜಿ ಸಲ್ಲಿಸುವ ದಿನಾಂಕಕ್ಕೆ ಕನಿಷ್ಠ 5 ವರ್ಷ ಕರ್ನಾಟಕದಲ್ಲಿ ವ್ಯಾಸಂಗ ಮಾಡಿರತಕ್ಕದ್ದು. • ಎಸ್.ಎಸ್.ಎಲ್.ಸಿ ನಂತರದ ವಿಕಲಚೇತನ ವಿದ್ಯಾರ್ಥಿಗಳು ಶುಲ್ಕ ಮರು ಪಾವತಿ ಪಡೆಯಲು ಅರ್ಹರಿರುತ್ತಾರೆ. • ಯಾವ ಸಂಸ್ಥೆಗಳು ವಿಕಲಚೇತನ ವಿದ್ಯಾರ್ಥಿಗಳಿಗೆ ಶುಲ್ಕವನ್ನು ವಿಧಿಸುವುದಿಲ್ಲವೋ ಅಂತಹ ಸಂಸ್ಥೆಯ ವಿದ್ಯಾರ್ಥಿಗಳು ಶುಲ್ಕ ಮರುಪಾವತಿಗೆ ಅರ್ಹರಿರುವುದಿಲ್ಲ. • ವಿಕಲಚೇತನ ವಿದ್ಯಾರ್ಥಿಗಳು ಹಿಂದಿನ ವರ್ಷದ ಪಬ್ಲಿಕ್ ಪರೀಕ್ಷೆಯಲ್ಲಿ ಎಲ್ಲಾ ವಿಷಯಗಳಲ್ಲಿ ಉತ್ತೀರ್ಣರಾಗದಿದ್ದಲ್ಲಿ ಮುಂದಿನ ವರ್ಷದಲ್ಲಿ ಶುಲ್ಕ ಮರುಪಾವತಿಗೆ ಅರ್ಹರಾಗುವುದಿಲ್ಲ. ಆದರೆ, ಮುಂದಿನ ಶೈಕ್ಷಣಿಕ ವರ್ಷದಲ್ಲಿ ಹಿಂದಿನ ಬಾಕಿ ವಿಷಯಗಳು ಸೇರಿದಂತೆ ಎಲ್ಲಾ ವಿಷಯಗಳಲ್ಲಿ ಉತ್ತೀರ್ಣರಾಗಿದ್ದಲ್ಲಿ ಮಾತ್ರ ನಂತರದ ವರ್ಷದಲ್ಲಿ ಶುಲ್ಕ ಮರುಪಾವತಿಗೆ, ಆ ಕೋರ್ಸ್‌ಗಳಲ್ಲಿ ಕ್ಯಾರಿ ಓವರ್ ಪದ್ಧತಿ ಜಾರಿಯಿದ್ದು ಮುಂದಿನ ತರಗತಿಗೆ/ವರ್ಷಕ್ಕೆ ಪ್ರವೇಶ ಅವಕಾಶವಿದ್ದಲ್ಲಿ ಅಂತಹವರು ಶುಲ್ಕ ಮರುಪಾವತಿಗೆ ಅರ್ಹರಿರುತ್ತಾರೆ.

		• ಪರೀಕ್ಷಾ ಶುಲ್ಕವನ್ನು ವರ್ಷಕ್ಕೆ ಒಂದು ಸಲ ಮಾತ್ರ ಮರುಪಾವತಿಸಲಾಗುವುದು. • ಬೇರೆ ಇಲಾಖೆ ಹಾಗೂ ಇತರೆ ಮೂಲಗಳಿಂದ ಶುಲ್ಕವನ್ನು ಪಡೆದ ವಿದ್ಯಾರ್ಥಿಗಳಿಗೆ ಈ ಯೋಜನೆಯಡಿ ಶುಲ್ಕ ಮರುಪಾವತಿಗೆ ಅವಕಾಶವಿರುವುದಿಲ್ಲ. • ಯೋಜನೆಯಡಿ ಸೌಲಭ್ಯ ಪಡೆಯುವ ವಿದ್ಯಾರ್ಥಿಗಳಿಗೆ ಯಾವುದೇ ಆದಾಯ ಮಿತಿ ಇರುವುದಿಲ್ಲ.
8	<u>ಸ್ಪರ್ಧಾಚೇತನ</u> ವಿಶೇಷ ಸಾಮರ್ಥ್ಯ / ಭಿನ್ನ ಸಾಮರ್ಥ್ಯದ ವಿದ್ಯಾವಂತ ನಿರುದ್ಯೋಗಿ ವ್ಯಕ್ತಿಗಳಿಗೆ ಐ.ಎ.ಎಸ್ / ಕೆ.ಎ.ಎಸ್/ ಇತರೆ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತರಬೇತಿ ನೀಡುವ ಯೋಜನೆಯಾಗಿದೆ. ಕೇಂದ್ರ ಲೋಕಸೇವಾ ಆಯೋಗದಿಂದ (ಯು.ಪಿ.ಎಸ್.ಸಿ) ನಡೆಸುವ ಗ್ರೂಪ್ 'ಎ' ಮತ್ತು 'ಬಿ' ವೃಂದದ ಪರೀಕ್ಷೆಗಳಿಗೆ ಕರ್ನಾಟಕ ಲೋಕಸೇವಾ ಆಯೋಗದಿಂದ ನಡೆಸುವ (ಕೆ.ಪಿ.ಎಸ್.ಸಿ) ಗ್ರೂಪ್ 'ಎ' ಮತ್ತು 'ಬಿ' ವೃಂದದ ಪರೀಕ್ಷೆಗಳಿಗೆ, ಬ್ಯಾಂಕ್ / ಜೀವವಿಮಾ ನಿಗಮ, ಸರ್ಕಾರಿ ಸ್ವಾಮ್ಯದ ಉದ್ದಿಮೆಗಳು ಮತ್ತು ಇತರೆ ಸಂಸ್ಥೆಗಳು ನಡೆಸುವ ಅಧಿಕಾರಿ / ಪ್ರಥಮ ದರ್ಜೆ / ದ್ವಿತೀಯ ದರ್ಜೆ ಹುದ್ದೆಗಳಿಗೆ ನಡೆಸುವ ಪರೀಕ್ಷೆಗಳಿಗೆ ತರಬೇತಿ ಪಡೆಯಲು ಸಹಾಯಧನ ನೀಡುವುದು.	• ರಾಜ್ಯ ಸರ್ಕಾರದ ಇತರೆ ಇಲಾಖೆಗಳಡಿ ಗುರುತಿಸಲ್ಪಟ್ಟ ಪೂರ್ವ ಪರೀಕ್ಷಾ ತರಬೇತಿ ಕೇಂದ್ರಗಳು (ಪ್ರಿ ಎಕ್ಸಾಮಿನೇಷನ್ ಟ್ರೈನಿಂಗ್ ಸೆಂಟರ್) • ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯಡಿ ಗುರುತಿಸಲ್ಪಟ್ಟ ಖಾಸಗಿ / ಅನುದಾನಿತ ಸ್ವಯಂ ಸೇವಾ ಸಂಸ್ಥೆಗಳು ನಡೆಸುತ್ತಿರುವ ತರಬೇತಿ ಕೇಂದ್ರಗಳು
9	<u>ಮಾನಸ ಕೇಂದ್ರ</u> ಮಾನಸಿಕ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆದು ಗುಣಮುಖರಾದ ಮಾನಸಿಕ ಅಸ್ವಸ್ಥರಿಗೆ ತರಬೇತಿ ಹಾಗೂ ಆಪ್ತ ಸಮಾಲೋಚನೆ ನೀಡಿ ಪುನರ್ವಸತಿ ಕಲ್ಪಿಸಲಾಗುತ್ತದೆ. ಇವರಿಗೆ ಅವಶ್ಯಕವಾಗಿ ಬೇಕಾಗಿರುವ ಆರೋಗ್ಯ, ಪೋಷಣೆಮತ್ತು ಆಶ್ರಯವನ್ನು ಒದಗಿಸುವುದು.	• ಮಾನಸಿಕ ಅಸ್ವಸ್ಥರು ಅಂದರೆ ಅಂಗವಿಕಲರ ಅಧಿನಿಯಮ 1995ರಲ್ಲಿ ತಿಳಿಸಿರುವ ವ್ಯಾಖ್ಯಾನಕ್ಕೆ ಒಳಪಟ್ಟವರು. • ಫಲಾನುಭವಿಯು ಮಾನಸಿಕ ಅಸ್ವಸ್ಥರಾಗಿದ್ದು ಅವರ ಅಂಗವಿಕಲತೆಯು ಕನಿಷ್ಠ ಶೇಕಡ 40 ರಷ್ಟು ಇರತಕ್ಕದ್ದು. • ಫಲಾನುಭವಿಯ ಕೌಟುಂಬಿಕ ವಾರ್ಷಿಕ ಆದಾಯ ನಗರ ಪ್ರದೇಶಗಳಲ್ಲಿ 24,000 ಮತ್ತು ಗ್ರಾಮೀಣ ಪ್ರದೇಶದಲ್ಲಿ 11,500 ರೂಗಳಿಗಿಂತ ಕಡಿಮೆ ಇರತಕ್ಕದ್ದು. • ರಸ್ತೆಗಳಲ್ಲಿ ಓಡಾಡುವ (Wandering) ನಿರ್ಗತಿಕ ಮಾನಸಿಕ ಅಸ್ವಸ್ಥರನ್ನು ಈ ಕೇಂದ್ರಗಳಿಗೆ ಸೇರಿಸಿಕೊಳ್ಳಲಾಗುವುದು. • ರಾಜ್ಯ ಉಚ್ಚ ನ್ಯಾಯಾಲಯವು ಮತ್ತು ನ್ಯಾಯಾಲಯಗಳು ಆದೇಶಿಸುವ ಫಲಾನುಭವಿಗಳನ್ನು ಸಹ ಈ ಕೇಂದ್ರಗಳಿಗೆ ಸೇರಿಸಿಕೊಳ್ಳಲಾಗುವುದು.
10	<u>ಉದ್ಯೋಗಸ್ಥ ಅಂಗವಿಕಲ ಮಹಿಳೆಯರ ಮತ್ತು ವಿದ್ಯಾರ್ಥಿನಿಯರ ವಸತಿ ನಿಲಯಗಳು</u> ಗ್ರಾಮೀಣ ವಿಕಲಚೇತನ ಯುವತಿಯರ ಶಿಕ್ಷಣ ಮತ್ತು ಉದ್ಯೋಗಕ್ಕೆ ಪ್ರೋತ್ಸಾಹ ನೀಡಲು 26 ಜಿಲ್ಲೆಗಳಲ್ಲಿ ಮಹಿಳಾ ವಸತಿ ನಿಲಯಗಳು ಸ್ವಯಂ ಸೇವಾ ಸಂಸ್ಥೆಗಳ ಮುಖಾಂತರ ಕಾರ್ಯನಿರ್ವಹಿಸುತ್ತಿವೆ. ಸದರಿ ವಸತಿ ನಿಲಯದಲ್ಲಿ ಉದ್ಯೋಗಸ್ಥ ವಿಕಲಚೇತನ ಮಹಿಳೆಯರಿಗೆ ಹಾಗೂ ವಿದ್ಯಾರ್ಥಿನಿಯರಿಗೆ ಸೌಲಭ್ಯವನ್ನು ಕಲ್ಪಿಸಲಾಗಿದೆ.	• ಈ ವಸತಿ ನಿಲಯಗಳಲ್ಲಿ ಬಡತನ ರೇಖೆಗಿಂತ ಕೆಳಗಿರುವ ಕುಟುಂಬದ ಅಂಗವಿಕಲ ಉದ್ಯೋಗಸ್ಥ ಮಹಿಳೆಯರು/ ವಿದ್ಯಾರ್ಥಿನಿಯರು/ವೃತ್ತಿಪರ ತರಬೇತಿ ಪಡೆಯುತ್ತಿರುವ ಮಹಿಳೆಯರಿಗೆ ಮಾತ್ರ ಊಟ ಮತ್ತು ವಸತಿ ಸೌಲಭ್ಯ ಕಲ್ಪಿಸಲಾಗಿರುತ್ತದೆ. • ಉದ್ಯೋಗಸ್ಥ ಮಹಿಳೆಯರು ಈ ವಸತಿ ನಿಲಯದಲ್ಲಿ ಪ್ರವೇಶ ಪಡೆದ'ಲ್ಲಿ ಊಟದ ವೆಚ್ಚವಾಗಿ ಮಾಹೆಯಾನ ರೂ.600.00 ಗಳನ್ನು ಮಾತ್ರ ಪಾವತಿಸಬೇಕಾಗಿರುತ್ತದೆ. • ಈ ವಸತಿ ನಿಲಯದಲ್ಲಿ ಪ್ರವೇಶ ಪಡೆದಿರುವ ವಿದ್ಯಾರ್ಥಿನಿಯರು ಇತರೆ ಯಾವುದೇ ತರಹದ ಶಿಷ್ಯವೇತನವನ್ನು ಪಡೆಯಲು ಅರ್ಹರಿರುವುದಿಲ್ಲ. (ಪ್ರತಿಭಾನ್ವಿತವಾಗಿ ಪಡೆಯುವ ಶಿಷ್ಯ ವೇತನ ಹೊರತುಪಡಿಸಿ)
11	<u>ಸಾಧನ ಸಲಕರಣೆಗಳು</u> ಅಂಗವಿಕಲರ ದೈನಂದಿನ ಚಟುವಟಿಕೆಗಳಿಗೆ ಅಗತ್ಯುವಾಗಿರುವ ತ್ರಿಚಕ್ರವಾಹನಗಳು, ಶ್ರವಣ ಸಾಧನಗಳು, ಕೃತಕ ಅಂಗಾಂಗಗಳು, ಬ್ರೈಲ್ ಗಡಿಯಾರಗಳು, ದೃಷ್ಟಿದೋಷವುಳ್ಳವರು ಉಪಯೋಗಿಸುವ ಬಿಳಿ ಕೋಲುಗಳನ್ನು ಉಚಿತವಾಗಿ ವಿತರಿಸುವುದು.	• ಅಂಗವಿಕಲ ಅಭ್ಯರ್ಥಿಯು ಕರ್ನಾಟಕ ರಾಜ್ಯದಲ್ಲಿ 10 ವರ್ಷಗಳಿಂದ ವಾಸ ಮಾಡುತ್ತಿರುವ' ಬಗ್ಗೆ ತಹಸೀಲ್ದಾರ್ ರವರಿಂದ ಪಡೆದ ದೃಢೀಕರಣ ಅಥವಾ ಕರ್ನಾಟಕದಲ್ಲಿ 10 ವರ್ಷಗಳಿಂದ ವ್ಯಾಸಂಗ ಮಾಡಿದ ವಿದ್ಯಾಭ್ಯಾಸದ ದೃಢೀಕರಣ ಪತ್ರ ಒದಗಿಸಬೇಕು. • ಅಂಗವಿಕಲತೆ ಹೊಂದಿರುವ ಬಗ್ಗೆ ಸಂಬಂಧಪಟ್ಟ ವೈದ್ಯಕೀಯ ಮಂಡಳಿಯಿಂದ ಪಡೆದ ದೃಢೀಕರಣ ಒದಗಿಸಬೇಕು. • ಅಂಗವಿಕಲ ಅಭ್ಯರ್ಥಿಯು ಕುಟುಂಬದ ವಾರ್ಷಿಕ ಆದಾಯ ನಗರ ವಾಸಿಯಾಗಿದ್ದಲ್ಲಿ ರೂ.24,000 ಮತ್ತು ಗ್ರಾಮೀಣ ವಾಸಿಯಾಗಿದ್ದಲ್ಲಿ ರೂ. 11,500 ಮೀರಿರಬಾರದು. • ಈ ಹಿಂದೆ ಸರ್ಕಾರದವತಿಯಿಂದಾಗಲಿ ಅಥವಾ ಸಂಘ ಸಂಸ್ಥೆಗಳಿಂದಾಗಲೀ ಸಹಾಯಧನ/ಸಾಧನ ಸಲಕರಣೆ ಪಡೆದಿರಬಾರದು.

